ಸಂಪುಟ: 14 Volume | ಸಂಚಿಕೆ: 72 Issue | ಪುಟಗಳು 08 Pages | ಭಾನುವಾರ 21 ಜೂನ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಕೋಪವನ್ನು ನಿಯಂತ್ರಿಸದಿದ್ದರೆ ಅದು ನಮ್ಮ ಮನಸ್ಸಿನ ಜ್ಯೋತಿಯನ್ನು ನಂದಿಸಿಬಿಡುತ್ತದೆ.
–ಇಂಗರ್ ಸಾಲ್

## ಲೈಂಗಿಕ ದೌರ್ಜನ್ಯ: ಜೀವಾವಧಿ ಶಿಕ್ಷೆ

**ಕಲಬುರಗಿ:** ದಲಿತ ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಆರೋಪಿ ಜೇವರ್ಗಿ ತಾಲ್ಲೂಕಿನ ಸೊನ್ನ ಗ್ರಾಮದ ರಜಾಕ್ ತಂದೆ ಮಹೆಬೂಬ್ ಸಾಬಶೇಖ್ (20)ನಿಗೆ ಎಫ್‌ಟಿಎಸ್‌ಸಿ–1ರ ನ್ಯಾಯಾಧೀಶ ಎಸ್. ಎಲ್. ಚವ್ಹಾಣ್ ಅವರು ಜೀವಾವಧಿ ಶಿಕ್ಷೆ ಹಾಗೂ 55000ರೂ.ಗಳ ದಂಡ ವಿಧಿಸಿ ತೀರ್ಪು ನೀಡಿದ್ದಾರೆ. ದಂಡ ಕೊಡಲು ತಪ್ಪಿದಲ್ಲಿ ಒಂದು ತಿಂಗಳು ಸಾದಾ ಶಿಕ್ಷೆ, ಮತ್ತೊಂದು ಕಲಂನಡಿ ಆರು ತಿಂಗಳು ಸಾದಾ ಶಿಕ್ಷೆಯನ್ನು ವಿಧಿಸಿದ್ದಾರೆ. ಕಾನೂನು ಪ್ರಾಧಿಕಾರ ವತಿಯಿಂದ ನೊಂದ ಬಾಲಕಿಗೆ ಐದು ಲಕ್ಷ ರೂ. ಗಳನ್ನು ಪರಿಹಾರವಾಗಿ ತೀರ್ಪಿನ ದಿನಾಂಕದಿಂದ ಒಂದು ತಿಂಗಳೊಳಗೆ ನೀಡಬೇಕೆಂದು ನ್ಯಾಯಾಧೀಶರು ಆದೇಶಿಸಿದ್ದಾರೆ. ನಗರದ ಸುಲ್ತಾನಪುರ ರಸ್ತೆಯಲ್ಲಿರುವ ಎಪಿಎಂಸಿ ಯಾರ್ಡ್‌ನ ಹಮಾಲಸಂಗ್ ಪ್ರದೇಶದಲ್ಲಿನ 16 ವರ್ಷ ವಯಸ್ಸಿನ ಅಪ್ರಾಪ್ತ ಬಾಲಕಿ ಪರಿಶಿಷ್ಟ ಜಾತಿಗೆ ಸೇರಿದ್ದು ಗೊತ್ತಿದ್ದರೂ ಸಹ ರಜಾಕ್ ಮದುವೆ ಮಾಡಿಕೊಳ್ಳುವುದಾಗಿ ಹೇಳಿ ಪುಸಲಾಯಿಸಿ ಆಕೆಯನ್ನು ಆರ್‌ಎಸ್‌ಎಸ್ ಎಂಟರ್ ಪ್ರೈಸೆಸ್ ರೇಷ್ಮೆ ಕಾರ್ಖಾನೆಗೆ ಕರೆದುಕೊಂಡು ಹೋಗಿ, ವಾಸ ಮಾಡಲು ಕೊಟ್ಟಿದ್ದ ಕೋಣೆಯಲ್ಲಿ ಆಕೆಯ ಮೇಲೆ ನಿರಂತರ ಅತ್ಯಾಚಾರ ಎಸಗಿದ್ದ ಎಂದು ತಿಳಿದು ಬಂದಿದೆ. ಪೋಲಿಸ್ ಸಿಬ್ಬಂದಿಗಳಾದ ಪ್ರಭುರಾಜ್, ಶ್ರೀನಿವಾಸ್, ಕುಮಾರ್, ಬ್ರಹ್ಮಾನಂದ್, ಅಮೃತರಾವ್ ಅವರು ಸಾಕ್ಷಿದಾರರನ್ನು ನ್ಯಾಯಾಲಯಕ್ಕೆ ಸರಿಯಾಗಿ ಹಾಜರುಪಡಿಸಿದ್ದರು.



ರಾಜ್ಯ ವಿಧಾನಸಭೆಯಿಂದ ರಾಜ್ಯಸಭೆಗೆ ಆಯ್ಕೆಯಾಗಿರುವ ಎಂ. ನಾಗರಾಜ ಅವರು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿಯವರನ್ನು ಅವರ ಆರ್ ಟಿ ನಗರದ ನಿವಾಸದಲ್ಲಿ ಭೇಟಿ ಮಾಡಿ ಧನ್ಯವಾದ ತಿಳಿಸಿದರು. ಈ ಸಂದರ್ಭದಲ್ಲಿ ಬಸವರಾಜ ಬೊಮ್ಮಾಯಿಯವರು ಅವರಿಗೆ ಶುಭ ಕೋರಿದರು.

## ಮದುವೆ ನಿಶ್ಚಿತಾರ್ಥ, ವರ ನಾಪತ್ತೆ

**ಕಲಬುರಗಿ:** ಮದುವೆ ನಿಶ್ಚಿತಾರ್ಥವಾಗಿದ್ದ ವರನೊಬ್ಬ ಮನೆಯಿಂದ ನಾಪತ್ತೆಯಾದ ಘಟನೆ ನಗರದ ಹೊರವಲಯದ ಬೋಲೇವಾಡದಲ್ಲಿ ವರದಿಯಾಗಿದೆ. ಆಣೆಯಾದವನಿಗೆ ಅಂಬಾರಾಯ್ ತಂದೆ ಗುರಪ್ಪ ತೇಗನೂರ್ (28) ಎಂದು ಗುರುತಿಸಲಾಗಿದೆ. ಅಂಬಾರಾಯನು ಹೈದ್ರಾಬಾದ್ ತಿಂಲ ಬಸ್ತಿ ಮಚ್ಚಿ ಮಾರ್ಕೆಟ್‌ನಲ್ಲಿ ತರಕಾರಿ ಮಾರಾಟ ಮಾಡಿ ಉಪಜೀವನ ಸಾಗಿಸುತ್ತಿದ್ದ. ಕಳೆದ ಏಪ್ರಿಲ್‌ನಲ್ಲಿ ಅಂಬಾರಾಯನಿಗೆ ನಿಶ್ಚಿತಾರ್ಥ ಮಾಡಿದ್ದು, ಮತ್ತೆ ಹೈದ್ರಾಬಾದ್‌ಗೆ ಹೋಗಿ ಮರಳಿ ಕಳೆದ 1ರಂದು ಗ್ರಾಮಕ್ಕೆ ಬಂದಿದ್ದ. ಕಳೆದ 6ರಂದು ಬೆಳಿಗ್ಗೆ 10 ಗಂಟೆಗೆ ಹೊರಗಡೆ ಹೋಗಿ ಬರುವುದಾಗಿ ಹೇಳಿ ಹೊರಹೋದವ ಮರಳಿ ಮನೆಗೆ ರಾತ್ರಿಯಾದರೂ ಬರಲಿಲ್ಲ. ಎಲ್ಲ ಕಡೆಗೆ ಹುಡುಕಾಡಿದರೂ ಸಹ ಪತ್ತೆಯಾಗಿಲ್ಲ. ಈ ಕುರಿತು ಯುವಕನ ತಂದೆ ಗುರಪ್ಪಾ ನಾಗಪ್ಪ ತೆಗನೂರ್ ಅವರು ದೂರು ಸಲ್ಲಿಸಿದ್ದು, ಪ್ರಕರಣ ದಾಖಲಾಗಿದೆ.

## ರೈತರ ಜಮೀನು: ಅಧಿಸೂಚನೆ ರದ್ಧತಿಗೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ರಾಜ್ಯ ಸರ್ಕಾರ ಬಿಡದಿ ಮತ್ತು ಹಾರೋಹಳ್ಳಿ ಹೋಬಳಿಯ ಕೃಷಿ ಭೂಮಿಯನ್ನು ವಶಪಡಿಸಿಕೊಳ್ಳಲು ಹೊರಡಿಸಿರುವ ರೈತ ವಿರೋಧಿ ಅಧಿಸೂಚನೆಯನ್ನು ತತಕ್ಷಣ ಹಿಂಪಡೆಯಬೇಕು ಎಂದು ಜಾತ್ಯಾತೀತ ಜನತಾದಳ ಜಿಲ್ಲಾ ಘಟಕ ಆಗ್ರಹಿಸಿದೆ.

ಈ ಕುರಿತು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಬರೆದಿರುವ ಮನವಿ ಪತ್ರವನ್ನು ಜೆಡಿಎಸ್ ಜಿಲ್ಲಾ ಅಧ್ಯಕ್ಷ ಹಣಮಂತ ಮಾವಿನಮರದ ಹಾಗೂ ಪದಾಧಿಕಾರಿಗಳು ಶನಿವಾರ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದರು.

ಸರ್ಕಾರ ವಶಪಡಿಸಿಕೊಳ್ಳಲು ಹೊರಟಿರುವುದು ಫಲವತ್ತಾದ ಜಮೀನು ಆಗಿದ್ದು ಇದರಿಂದ 700 ಕ್ಕೂ ಹೆಚ್ಚು ರೈತ ಕುಟುಂಬಗಳು ಬೀದಿ ಪಾಲಾಗಲಿವೆ. ಜೊತೆಗೆ ಇದರಲ್ಲಿ 600 ರಷ್ಟು ಜನ ರೈತರಿಗೆ ಒಂದು ಏಕರೆಗಿಂತಲೂ ಕಡಿಮೆ ಭೂಮಿ ಇದೆ. ಹೀಗಾಗಿ ರೈತರು ಸಂಪೂರ್ಣವಾಗಿ ಬೀದಿ ಪಾಲಾಗಲಿದ್ದು



ಸರ್ಕಾರ ಇದರಿಂದ ಹಿಂದೆ ಸರಿದು ರೈತರನ್ನು ರಕ್ಷಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ.

ಭೂಮಿ ಸ್ವಾಧೀನ ಪಡೆಯುವ ಸರ್ಕಾರದ ಅಧಿಸೂಚನೆ ರೈತ ವಿರೋಧಿಯಾಗಿದೆ. ರೈತರ ಮೇಲೆ ದಬ್ಬಾಳಿಕೆ ನಡೆಸಿ ಭೂಮಿ ಕಸಿದುಕೊಳ್ಳುವ ನೀತಿಯಿಂದ ಸರ್ಕಾರ ಈ ಕೂಡಲೇ ಹಿಂದೆ ಸರಿಯಬೇಕು ಎಂದು ಆಗ್ರಹಿಸಿರುವ ಜೆಡಿಎಸ್, ಉಗ್ರ ಹೋರಾಟಕ್ಕೆ ಅವಕಾಶ ನೀಡದೆ ರೈತರನ್ನು ಬದುಕಲು ಬಿಡಬೇಕು ಎಂದು ಮನವಿಯಲ್ಲಿ ತಿಳಿಸಿದೆ.

## ನ್ಯೂನತೆ ತಡೆಯುವ ಮೂಲಕ ಸುಧಾರಣೆ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಹುಮನಾಬಾದ ತಾಲ್ಲೂಕಾ ಘಟಕದ ನೂತನ ಅಧ್ಯಕ್ಷರಾಗಿ ಸಂಜೀವಕುಮಾರ ಜುನ್ನಾ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಗುಂಡು ಅತಿವಾಳ ಆಯ್ಕೆಯಾಗಿದಕ್ಕೆ ಭಾರತೀಯ ದಲಿತ ಪ್ಯಾಂಥರ ಸಂಘಟನೆಯ ತಾಲ್ಲೂಕಾ ಅಧ್ಯಕ್ಷ ಗಣಪತಿ ಅಷ್ಟೋರೆ ನೇತೃತ್ವದಲ್ಲಿ ಸನ್ಮಾನಿಸಿ ಶುಭ ಕೊರಲಾಯಿತು. ತದನಂತರ ಮುಂದುವರೆದು ಮಾತನಾಡಿ, ಸಮಾಜದಲ್ಲಿನ ಹಲವಾರು ನ್ಯೂನತೆಗಳನ್ನು ಹೊಡೆದೋಡಿಸಿ ಸುಧಾರಣೆಯನ್ನು ತರುವಲ್ಲಿ ಪತ್ರಕರ್ತರ ಪಾತ್ರ ಮಹತ್ತರವಾಗಿದೆ ಎಂದು ಅಭಿಪ್ರಾಯಪಟ್ಟರು. ಪತ್ರಕರ್ತ ಕೇವಲ ವರದಿಯನ್ನು ಸಂಗ್ರಹಿಸಿ ಪ್ರಕಟಿಸುವುದಕ್ಕೆ ಮಾತ್ರವೇ ಸೀಮಿತವಾಗಬಾರದು. ಮಾನವೀಯ ಮೌಲ್ಯಗಳನ್ನು ಹೊತ್ತ ವರದಿಗೂ ಮಾನ್ಯತೆ ನೀಡಬೇಕು ಎಂದರು.



ಈ ಸಂದರ್ಭದಲ್ಲಿ ವೈಜನಾಥ ಶಿಂದೆ, ದಲಿತ ಪ್ಯಾಂಥರ್ ತಾಲೂಕ ಅಧ್ಯಕ್ಷ ಗಣಪತಿ ಅಷ್ಟೋರೆ, ಗೋಪಾಲ್ ರೆಡ್ಡಿ, ಶಶಿ ಡಾಂಗೆ, ಅನಂತ್ ಮಾಳ್ಗೆ, ವಿಠ್ಠಲ್ ಶಿವನಾಯಕ್, ಸೊಹೇಬ್, ಮಿರಾನ್, ಪತ್ರಕರ್ತ ಸಂಘದ ಸದಸ್ಯ ಸಜೀಶ್ ಲಂಬುನೂರ್, ಉಪಸ್ಥಿತರಿದ್ದರು.

# ಜನರ ಸೇವೆಯ ಸರ್ಕಾರ

## ಅಹವಾಲು ಆಲಿಸಲು ಹೊಸದಾಗಿ ಪ್ರಜಾಸೇವೆ ಇಲಾಖೆ ಪ್ರಾರಂಭ: ಸಿಎಂ ಡಿಕೆಶಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಖಾತೆ ಕ್ಯಾತೆಗಳ ಬಳಿಕ ಮುಖ್ಯಮಂತ್ರಿ ಡಿಕೆಶಿವಕುಮಾರ್ ಅವರು ಇದೀಗ ರಾಜ್ಯ ಅಭಿವೃದ್ಧಿಯ ಕಡೆ ಗಮನ ಹರಿಸಿದ್ದಾರೆ. ವಿಧಾನಸೌಧದಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ಶಿವಕುಮಾರ್ ಅವರು ಮಾಧ್ಯಮಗೋಷ್ಠಿಯಲ್ಲಿ ಮಾಹಿತಿ ನೀಡಿ, ಸಾರ್ವಜನಿಕರ ಕುಂದುಕೊರತೆಗಳು, ಸಾರ್ವಜನಿಕ ಹೋರಾಟಗಳ ಅಹವಾಲುಗಳನ್ನು ಆಲಿಸಲು ಪ್ರಜಾಸೇವೆ ಇಲಾಖೆಯನ್ನು ಹೊಸದಾಗಿ ಪ್ರಾರಂಭ ಮಾಡಲಾಗುತ್ತಿದೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

**ಕಾನೂನಿನ ಚೌಕಟ್ಟಿನಲ್ಲಿ ಸ್ಪಂದನೆ:** ಜನರ ಕಷ್ಟ ಅರಿತು, ಕಾನೂನು ಚೌಕಟ್ಟಿನಲ್ಲಿ ಸ್ಪಂದಿಸುವುದು ನಮ್ಮ ಸರ್ಕಾರದ ಗುರಿ. ಹೀಗಾಗಿ ಈ ಇಲಾಖೆಗೆ ಹಿರಿಯ ಐಎಎಸ್ ಅಧಿಕಾರಿಯನ್ನು ನೇಮಿಸಲಾಗುವುದು. ಅವರು ಎಲ್ಲಾ ಸಮಸ್ಯೆಗಳನ್ನು ಪರಿಶೀಲನೆ ಮಾಡಿ ಮಾಹಿತಿ ನೀಡುವ ಕೆಲಸ ಮಾಡಲಾಗುವುದು ಎಂದಿದ್ದಾರೆ.

**ಇಲಾಖೆಯಡಿ ಮನವಿ:** ನನಗೆ ಹಾಗೂ ಇತರೇ ಸಚಿವರಿಗೆ ನೀಡಿದ ಮನವಿಗಳನ್ನು ಈ ಇಲಾಖೆ ಅಡಿಯಲ್ಲಿ ತರಲು ಆಲೋಚಿಸಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರು ಜವಾಬ್ದಾರಿಯ ಜಿಲ್ಲೆಯ ಕ್ಷೇತ್ರಗಳಲ್ಲಿ ವಾರಕ್ಕೆ ಒಮ್ಮೆ ಸ್ಥಳೀಯ ಶಾಸಕರೊಂದಿಗೆ ಈ ಇಲಾಖೆ ಮೂಲಕ ಜನಸ್ಪಂದನ ಸಭೆ ನಡೆಸಬೇಕು ಎಂದು ವಿವರಿಸಿದ್ದಾರೆ.



### ವಿದ್ಯುತ್ ಸಂಪರ್ಕ ಸುಲಭ

31.05.2026 ರ ಒಳಗೆ ಪೂರ್ಣಗೊಂಡಿರುವ ಎಲ್ಲಾ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ವಿನಾಯಿತಿ ನೀಡಲಾಗಿದ್ದು, ಈ ವಿಚಾರವಾಗಿ ಸರ್ಕಾರಿ ಆದೇಶ ಬಂದ ದಿನದಿಂದ 15 ದಿನಗಳ ಕಾಲಾವಕಾಶ ನೀಡಲಾಗುವುದು. ಕಟ್ಟಡ ಮಾಲೀಕರು ಕಟ್ಟಡದ ಜೊತೆಗಿನ ಫೋಟೋ ಹಾಗೂ ಜಿಪಿಎಸ್ ದಾಖಲೆ ಕಡ್ಡಾಯವಾಗಿ ಸಲ್ಲಿಕೆ ಮಾಡಬೇಕು ಎಂದಿದ್ದಾರೆ ಸಿಎಂ.

### ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ

ಯಾದಗಿರಿಯ ವೈದ್ಯಕೀಯ ವಿಜ್ಞಾನ ಶಿಕ್ಷಣ ಸಂಸ್ಥೆಗಳ ಆವರಣದಲ್ಲಿ100 ಕೋಟಿ ರೂ. ವೆಚ್ಚದಲ್ಲಿ ನೂತನ 200 ಹಾಸಿಗೆ ಸಾಮರ್ಥ್ಯದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣಕ್ಕೆ ಒಪ್ಪಿಗೆ ನೀಡಿದ್ದು, 18 ಕೋಟಿ ವೆಚ್ಚದಲ್ಲಿ ಕಾರವಾರ ವೈದ್ಯಕೀಯ ವಿಜ್ಞಾನ ಶಿಕ್ಷಣ ಸಂಸ್ಥೆಗಳ ಆರು ಸಿವಿಲ್ ಕಾಮಗಾರಿಗೆ, ಬೆಂಗಳೂರು ವೈದ್ಯಕೀಯ ಸಂಶೋಧನಾ ಆಸ್ಪತ್ರೆಗೆ 60 ಕೋಟಿ ವೆಚ್ಚಮಾಡಲಾಗುವುದು ಎಂದು ತಿಳಿಸಿದ್ದಾರೆ.

### ಟಿಕೆಟ್ ದರ ಏರಿಕೆ: ತೀರ್ಮಾನ

ಖಾಸಗಿ, ನಿಗಮದ ಡಿಪೋಗಳಲ್ಲಿನ ಡೀಸೆಲ್ ಬೆಲೆ ವ್ಯತ್ಯಾಸ ದರ 40 ರೂ. ಇದೆ. ಇದು ಗಾಬರಿಯಾಗುವ ಸಂಖ್ಯೆ. ಡೀಸೆಲ್ ಬೆಲೆ ಹೆಚ್ಚಾದರೆ ಟಿಕೆಟ್ ಬೆಲೆ ಹೆಚ್ಚಳ ಆಗಬೇಕು ಎಂದು ಈ ಹಿಂದೆ ತೀರ್ಮಾನ ಮಾಡಲಾಗಿತ್ತು. ಇದರ ಬಗ್ಗೆ ಮತ್ತೊಮ್ಮೆ ಪರಿಶೀಲನೆ ಮಾಡಬೇಕು. ಕೆಎಸ್ ಆರ್ ಟಿಸಿಯೂ ಉಳಿಬೇಕು. ಜನರಿಗೂ ಅನುಕೂವಾಗಬೇಕು ಎಂದು ಹೇಳಿದ್ದಾರೆ ಸಿಎಂ.

### ಬಸ್ ಖರೀದಿಗೆ 235ಕೋಟಿ

620 ನೂತನ ಬಸ್ ಖರೀದಿಗೆ 235 ಕೋಟಿ, ಎಲ್ಲಾ ಸಾರಿಗೆ ನಿಗಮಗಳ ಅಡಿಯಲ್ಲಿ 11 ಕಡೆ ಎಲೆಕ್ಟ್ರಿಕ್ ಬಸ್‌ಗಳ ಡಿಪೋಗಳನ್ನು ತೆರೆಯಲು 112 ಕೋಟಿ ವೆಚ್ಚ, 30 ಕೋಟಿ ವೆಚ್ಚದಲ್ಲಿ ಸಂಡೂರು ತಾಲೂಕು ಕೇಂದ್ರದಲ್ಲಿ ಸುಸಜ್ಜಿತ ಬಸ್ ನಿಲ್ದಾಣ ನಿರ್ಮಾಣ. 620 ಬಸ್ ಪೈಕಿ ಗ್ರಾಮೀಣ ಪ್ರದೇಶಗಳಿಗೆ 400 ಬಸ್, ವಾಯುವ್ಯ ಸಾರಿಗೆ ನಿಗಮಕ್ಕೆ 220 ಬಸ್ ಖರೀದಿಸಲಾಗುವುದು ಎಂದಿದ್ದಾರೆ.

## ಅಧಿಕಾರಿಗಳ ವಿರುದ್ಧ ತೀವ್ರ ಅಸಮಾಧಾನ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ತ್ಯಾಜ್ಯ ವಿಲೇವಾರಿ ಘಟಕದಿಂದ ಕುಡಿಯುವ ನೀರಿನ ಸಮಸ್ಯೆ, ನಾಯಿಗಳ ಕಾಟ ಹಾಗೂ ವಿಪರೀತ ವಾಸನೆಯ ಬಗ್ಗೆ ಗ್ರಾಮಸ್ಥರು ಉಪಲೋಕಾಯುಕ್ತರ ಮುಂದೆ ಅಳಲು ತೋಡಿಕೊಂಡಿದ್ದಾರೆ.

ಅಧಿಕಾರಿಗಳ ಗೈರು, ವೀರಪ್ಪ ಪರಿಶೀಲನೆ ವೇಳೆ ಸ್ಥಳದಲ್ಲಿ ಪಿಡಿಒ ಮತ್ತು ತಾಲೂಕು ಪಂಚಾಯತಿ ಇಒ ಗೈರುಹಾಜರಾಗಿದ್ದಕ್ಕೆ ನ್ಯಾಯಮೂರ್ತಿ ಬಿ.ವೀರಪ್ಪ ಅವರು ಸ್ಥಳೀಯ ಅಧಿಕಾರಿಗಳ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಗ್ರಾಮಸ್ಥರ ಸಮಸ್ಯೆಗಳನ್ನು ಆಲಿಸಿದ ಉಪಲೋಕಾಯುಕ್ತರು, ತ್ಯಾಜ್ಯ ಘಟಕದಿಂದ ಆಗುತ್ತಿರುವ ತೊಂದರೆಗಳನ್ನು ತ್ವರಿತವಾಗಿ ಬಗೆಹರಿಸುವುದಾಗಿ ಭರವಸೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಮಹಾನಗರ ಪಾಲಿಕೆ ಆಯುಕ್ತರು ಹಾಗೂ ವಿವಿಧ ಇಲಾಖೆಯ ಉನ್ನತ ಅಧಿಕಾರಿಗಳು ಉಪಲೋಕಾಯುಕ್ತರಿಗೆ ಸಾಥ್ ನೀಡಿದ್ದಾರೆ.

## ಯಂತ್ರ ಕ್ರೀಡಾ ಮಹೋತ್ಸವಕ್ಕೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಭಾರತದ ಯುವ ವಿಜ್ಞಾನಿಗಳು ಹಾಗೂ ನವೋದ್ಯಮಿಗಳ ಪ್ರತಿಭೆಯನ್ನು ರಾಷ್ಟ್ರ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಅನಾವರಣಗೊಳಿಸುವ ಉದ್ದೇಶದಿಂದ "ಭಾರತೀಯ ಯಂತ್ರಕ್ರೀಡಾ ಮಹೋತ್ಸವ (ಬಿಕೆವೈಎಂ)–2026"ಅನ್ನು ಇಂದು ಮಲ್ಲೇಶ್ವರ 15ನೇ ಕ್ರಾಸ್ ನ ಬೀಗಲ್ಸ್ ಬಾಸ್ಕೆಟ್‌ಬಾಲ್ ಸ್ಟೇಡಿಯಂನಲ್ಲಿ ಆಯೋಜಿಸಲಾಗಿತ್ತು. ಕೇಂದ್ರ ಸಚಿವರಾದ ಕು. ಶೋಭಾ ಕರಂದ್ಲಾಜೆ, ಮಾಜಿ ಉಪಮುಖ್ಯಮಂತ್ರಿ ಮತ್ತು ಶಾಸಕ ಡಾ. ಸಿ.ಎನ್. ಅಶ್ವತ್ಥನಾರಾಯಣ್



ಅವರು ಉದ್ಘಾಟಿಸಿದರು, ಈ ಸ್ಪರ್ಧೆಯು ಒಲಿಂಪಿಕ್ಸ್ ರೊಬೊಟಿಕ್ಸ್‌ಗೆ ಭಾರತದ ತಂಡವನ್ನು ಆಯ್ಕೆ ಮಾಡುವ ರಾಷ್ಟ್ರೀಯ ಮಟ್ಟದ ಆಯ್ಕೆ ಪ್ರಕ್ರಿಯೆಯಾಗಿದ್ದು, ದೇಶದ ವಿವಿಧ ರಾಜ್ಯಗಳಿಂದ ಆಗಮಿಸುವ 20 ತಂಡಗಳು ಭಾಗವಹಿಸುತ್ತಿವೆ ಎಂದು ಸಂಘಟಕರು ತಿಳಿಸಿದ್ದಾರೆ.

## ಬಿಡದಿ ಯೋಜನೆಯ ಪಿತಾಮಹ ಕುಮಾರಸ್ವಾಮಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

"ಬಿಡದಿಯ ರೈತರು ಒಳ್ಳೆಯವರು, ಅವರನ್ನು ದಾರಿ ತಪ್ಪಿಸಲಾಗುತ್ತಿದೆ. ಈ ಯೋಜನೆಯ ಪಿತಾಮಹ ಕುಮಾರಸ್ವಾಮಿ ಅವರೇ ಅಲ್ಲವೇ? ಇದನ್ನು ಅವರೇ ಒಪ್ಪಿಕೊಂಡಿದ್ದಾರೆ" ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ತಿರುಗೇಟು ನೀಡಿದರು.

ಸಚಿವ ಸಂಪುಟ ಸಭೆಯ ಬಳಿಕ ವಿಧಾನಸೌಧದಲ್ಲಿ ನಡೆದ ಮಾಧ್ಯಮಗೋಷ್ಠಿಯಲ್ಲಿ ಶನಿವಾರ ಪ್ರತಿಕ್ರಿಯೆ ನೀಡಿದರು. ಸಚಿವ ಸಂಪುಟ ಸಭೆಯಲ್ಲಿ ಬಿಡದಿ ಟೌನ್ ಶಿಪ್ ವಿಚಾರದ ಬಗ್ಗೆ ಚರ್ಚೆ ಮಾಡಲಾಯಿತೇ ಎಂದು ಕೇಳಿದಾಗ, "ಈ ಹಿಂದೆ ಕುಮಾರಸ್ವಾಮಿ ಅವರೇ ರೈತರಿಗೆ ಪರಿಹಾರವಾಗಿ ಅಭಿವೃದ್ಧಿಪಡಿಸಿದ ಭೂಮಿಯಲ್ಲಿ 40% ಕೊಡುತ್ತೇನೆ ಎಂದು ಹೇಳಿದ್ದರು. ನಾವು ಶೇ.50 ರಷ್ಟು ಭೂಮಿ ನೀಡುವುದಾಗಿ ಹೇಳಿದ್ದೇವೆ. ರೈತರಿಗೆ ಒಂದು ಎಕರೆಗೆ 2.50 ಕೋಟಿ ರೂ. ಪರಿಹಾರ ನೀಡುವ ಕೆಲಸ ಶುಕ್ರವಾರ ಆರಂಭವಾಗಿದೆ" ಎಂದರು.

**ಕುಮಾರಸ್ವಾಮಿ ಆರಂಭಿಸಿ, ಯಡಿಯೂರಪ್ಪನವರು ಮುಂದುವರಿಸಿದ್ದ ಯೋಜನೆ:** "ಕುಮಾರಸ್ವಾಮಿ ಅವರು ನೋಟಿಫಿಕೇಷನ್ ಮಾಡಿದ್ದರು. ಯಡಿಯೂರಪ್ಪ ಅವರು ಈ ಯೋಜನೆ ಮುಂದುವರೆಸಿದ್ದರು. ಅದನ್ನು ನಾವು ಇನ್ನಷ್ಟು ಮುಂದಕ್ಕೆ ತೆಗೆದುಕೊಂಡು ಹೋಗುತ್ತಿದ್ದೇವೆಯೇ ಹೊರತು ಹೊಸದಾಗಿ ನಾವೇನೂ ಮಾಡುತ್ತಿಲ್ಲ. ಬಿಡದಿ ಕೈಗಾರಿಕಾ ಪ್ರದೇಶಕ್ಕೆ ಭೂಸ್ವಾಧೀನ ಮಾಡಿದವರು ಯಾರು? ಈಗಿರುವ 9 ಸಾವಿರ ಎಕರೆಯಲ್ಲಿ 1 ಸಾವಿರ ಎಕರೆಯನ್ನು ಬಿಜೆಪಿಯ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರು ಸ್ವಾಧೀನ ಮಾಡಿಕೊಡಲಿಲ್ಲವೇ?" ಎಂದರು.



**ಎಲ್ಲಿಂದ ಜಮೀನು ಕೊಡಲಿ ಎಂದು ಅವರೇ ಹೇಳಿದ್ದಾರೆ:** "ವಿರೋಧ ಪಕ್ಷದವರು ರಾಜಕೀಯಕ್ಕಾಗಿ ವಿರೋಧ ಮಾಡುತ್ತಿದ್ದಾರೆ. ಹೊಸ ಕೈಗಾರಿಕೆಗಳು ಬರಬೇಕು ಎಂದು ಹೇಳುತ್ತಾರೆ. ಕೇಂದ್ರ ಬೃಹತ್ ಕೈಗಾರಿಕಾ ಸಚಿವರೇ ಎಲ್ಲಿಂದ ಜಮೀನು ತೆಗೆದುಕೊಡಲಿ ಎಂದು ಹೇಳಿದ್ದಾರೆ. ಹೀಗಿರುವಾಗ ಬಿಡದಿ ಜಮೀನನ್ನು ಡಿನೋಟಿಫಿಕೇಷನ್ ಮಾಡಿ ಜೈಲಿಗೆ ಹೋಗಲು ನಾನು ಸಿದ್ಧನಿಲ್ಲ" ಎಂದರು.

**ರೆಡ್ ಜೋನ್ ಮಾಡಿದ್ದೇಕೆ?:** "ಬಿಡದಿ ಪ್ರದೇಶವನ್ನು ರೆಡ್ ಜೋನ್ ಎಂದು ಕುಮಾರಸ್ವಾಮಿ ಅವರು ಏಕೆ ಘೋಷಣೆ ಮಾಡಿದರು ಎಂದು ಅವರು ಮೊದಲು ತಿಳಿಸಲಿ. ನೋಟಿಫಿಕೇಷನ್ ಏಕೆ ಮಾಡಿದರು ಎಂದು ಉತ್ತರಿಸಲಿ. ಯಡಿಯೂರಪ್ಪ ಏಕೆ ಮುಂದುವರೆಸಿದರು, ಅವರ ಕಾಲದಲ್ಲೇ ಡಿನೋಟಿಫಿಕೇಷನ್ ಮಾಡಲು ಅವಕಾಶವಿತ್ತಲ್ಲವೇ? ಯಾಕೆ ಮಾಡಲಿಲ್ಲ" ಎಂದರು.

"ವಿರೋಧ ಪಕ್ಷದವರು ರಾಜಕೀಯ ಮಾಡುತ್ತಿದ್ದಾರೆ. ಆದರೆ ನಾನು ಇದಕ್ಕೆ ಬೇಸರ ಮಾಡಿಕೊಳ್ಳುವುದಿಲ್ಲ. ಶೇ 80 ರಷ್ಟು ರೈತರು ಭೂಮಿ ನೀಡಲು ಮುಂದೆ ಬಂದಿದ್ದಾರೆ. ಬೇರೆಯವರು ಮುಂದೆ ಬರಲಿಲ್ಲ ಎಂದರೆ ನಾನು ಏನು ಮಾಡಲು ಸಾಧ್ಯವಿಲ್ಲ ಎಂದರು.

## ಜೆಡಿಎಸ್–ಬಿಜೆಪಿ ಮೈತ್ರಿಯಲ್ಲಿ ಬಿರುಕು ಇಲ್ಲ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ವಿಧಾನ ಪರಿಷತ್ ಚುನಾವಣೆಯಲ್ಲಿ ನಡೆದ ಅಡ್ಡ ಮತದಾನದಿಂದ ಜೆಡಿಎಸ್ ಮತ್ತು ಬಿಜೆಪಿ ಮೈತ್ರಿಯಲ್ಲಿ ಬಿರುಕು ಉಂಟಾಗುವುದಿಲ್ಲ. ಈ ಚುನಾವಣೆ ಮುಂದಿನ ವಿಧಾನಸಭೆ ಚುನಾವಣೆಗೆ ದಿಕ್ಸೂಚಿಯೂ ಅಲ್ಲ ಹಾಗೂ ನಮ್ಮ ನಡುವೆ ಬಿಕ್ಕಟ್ಟು ಸೃಷ್ಟಿಸಲು ಕಾಂಗ್ರೆಸ್ ವಿಫಲ ಪ್ರಯತ್ನ ನಡೆಸುತ್ತಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಹೇಳಿದರು.

ಪಕ್ಷದ ರಾಜ್ಯ ಕಚೇರಿ ಜೆ.ಪಿ. ಭವನದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಕೇಂದ್ರ ಸಚಿವರು, ನಾನು ನಮ್ಮ ಅಭ್ಯರ್ಥಿಯನ್ನು ನಿಲ್ಲಿಸುವುದಕ್ಕೆ ಮೊದಲು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾದ ನಿತಿನ್ ನಬೀನ್, ರಾಜ್ಯಾಧ್ಯಕ್ಷರಾದ ಬಿ.ವೈ. ವಿಜಯೇಂದ್ರ ಹಾಗೂ ಬಿಜೆಪಿ ಶಾಸಕಾಂಗ ಪಕ್ಷದ ನಾಯಕರಾದ ಆರ್. ಅಶೋಕ್ ಅವರೊಂದಿಗೆ ಚರ್ಚೆ ನಡೆಸಿ ಅವರೆಲ್ಲರ ಸಹಮತದಿಂದ ಅಭ್ಯರ್ಥಿಯನ್ನು ಹಾಕಲಾಯಿತು. ಹೀಗಾಗಿ ನಮ್ಮ ಮೈತ್ರಿಯಲ್ಲಿ ಬಿರುಕು ಬರುವ ಪ್ರಶ್ನೆ ಇಲ್ಲ ಎಂದರು.



ಕಳೆದ ಮೂರು ವರ್ಷಗಳಿಂದ ನಮ್ಮ ಶಾಸಕರಿಗೆ ಕ್ಷೇತ್ರಗಳಲ್ಲಿ ಸರಿಯಾಗಿ ಕೆಲಸಗಳು ಆಗಿಲ್ಲ. ಕಾರ್ಯಕರ್ತರು ಹಾಗೂ ಸಾರ್ವಜನಿಕರ ಒತ್ತಡದ ಕಾರಣಕ್ಕೆ ಜನರಿಗೆ ಮುಖ ತೋರಿಸುವುದು ಕಷ್ಟವಾಗುತ್ತಿದೆ ಎಂದು ಶಾಸಕರು ಹೇಳುತ್ತಿದ್ದಾರೆ. ಇದು ನಮ್ಮ ಪಕ್ಷದ ಶಾಸಕರ ಪರಿಸ್ಥಿತಿ ಅಷ್ಟೇ ಅಲ್ಲ, ಬಿಜೆಪಿ ಮತ್ತು ಕಾಂಗ್ರೆಸ್ ಶಾಸಕರ ಪರಿಸ್ಥಿತಿಯೂ ಇದೇ ಆಗಿದೆ. ಆ ಹಿನ್ನೆಲೆಯಲ್ಲಿ ಪರಿಷತ್ ಚುನಾವಣೆಯ ಮೇಲೆ ಸ್ವಲ್ಪ ಪರಿಣಾಮ ಬೀರಿದೆ ಎಂದು ಹೇಳಬಹುದು. ಕಾಂಗ್ರೆಸ್ ಅಭ್ಯರ್ಥಿಗೆ ಮತ ಕೊಟ್ಟರೆ ನಿಮಗೆ (ಕಿಸೆಗೆ) ₹50 ಕೋಟಿ ಕೊಡುತ್ತೇವೆ, ಅದರ ಜೊತೆಗೆ ₹100 ಕೋಟಿ ಅನುದಾನ ಕೊಡುತ್ತೇವೆ ಎಂದು ಆಮಿಷ ಒಡ್ಡಿದ್ದಾರೆ. ಆ ಆಮಿಷಗಳು ಚುನಾವಣೆಯಲ್ಲಿ ಕೆಲಸ ಮಾಡಿವೆ ಎಂದು ಕೇಂದ್ರ ಸಚಿವರು ನೇರ ಆರೋಪ ಮಾಡಿದರು.

ಕಳೆದ ಇಪ್ಪತ್ತು ವರ್ಷಗಳಿಂದ ಪಕ್ಷದ ನೇತೃತ್ವ ವಹಿಸಿ ಸಂಘಟನೆ ಮಾಡುತ್ತಿದ್ದೇನೆ. ಈ ಎಲೆಕ್ಷನ್ ಏನಾಗುತ್ತದೆ ಎನ್ನುವುದು ನನಗೆ ಗೊತ್ತಿಲ್ಲವೇ? ಸುಖಾಸುಮ್ಮನೆ ಅಭ್ಯರ್ಥಿಯನ್ನು ಹಾಕಲಿಕ್ಕೆ ನಾನೇನು ಮೂರ್ಖನಲ್ಲ. ಏಕೆಂದರೆ, ನಮಗೆ ಇದ್ದಿದ್ದು ಕೇವಲ 18 ಸೀಟು. ಅದರಲ್ಲಿ ಒಬ್ಬರು ಈಗಾಗಲೇ ಕಾಲು ಹೊರಗೆ ಇಟ್ಟಿದ್ದಾರೆ. ಹೀಗಾಗಿ ನಮ್ಮಲ್ಲಿ ಉಳಿದಿದ್ದು 17 ಶಾಸಕರು ಮಾತ್ರ ಹಾಗೂ ಬಿಜೆಪಿಯ ಹೆಚ್ಚುವರಿ 6 ಮತಗಳು ಬರಬಹುದು ಎನ್ನುವುದು ನಮಗಷ್ಟೇ ಅಲ್ಲ, ಎಲ್ಲರ ನಿರೀಕ್ಷೆಯು ಆಗಿತ್ತು. ಹೀಗೆಯೇ ಎಲ್ಲಾ ಸೇರಿ ಒಟ್ಟಾರೆ ನಮ್ಮ ಅಭ್ಯರ್ಥಿಗೆ 24 ಮತಗಳು ಬರಬಹುದು ಎಂಬ ಲೆಕ್ಕಾಚಾರ ಇಟ್ಟುಕೊಂಡಿದ್ದೆವು. ಆದರೆ, ಕೆಲ ಶಾಸಕರು ಪಕ್ಷದ ಜೊತೆ ಗಟ್ಟಿಯಾಗಿ ನಿಲ್ಲಲಿಲ್ಲ. ಅನುದಾನಕ್ಕಾಗಿ ಚಂಚಲರಾಗಿದ್ದಾರೆ ಎಂದು ಸಚಿವರು ಬೇಸರ ವ್ಯಕ್ತಪಡಿಸಿದರು.

**ಶೀಘ್ರದಲ್ಲೇ ಬಸ್ ಪ್ರಯಾಣ ದರ ಹೆಚ್ಚಳ? ರಾಜ್ಯದ ಹಿತಕ್ಕಾಗಿ ಕ್ರಮ: ಡಿಕೆ ಶಿವಕುಮಾರ್, ಸಿಎಂ**

# ಮಳೆ ಇಲ್ಲದೆ ಆತಂಕದಲ್ಲಿ ರೈತರು

ಮಳೆ ಆಧಾರಿತ ಕೃಷಿಯೇ ಹೆಚ್ಚಾಗಿ ನಡೆಯುವ ನಮ್ಮ ರಾಜ್ಯದ ಅನೇಕ ಭಾಗಗಳಲ್ಲಿ ಈ ಬಾರಿ ಮಳೆ ಕೈಕೊಟ್ಟಿರುವುದು ರೈತರಲ್ಲಿ ತೀವ್ರ ಆತಂಕ ಮೂಡಿಸಿದೆ. ಮುಂಗಾರು ಮಳೆ ಸಮಯಕ್ಕೆ ಸರಿಯಾಗಿ ಆಗಮನವಾಗದೆ ಇರುವುದರಿಂದ ಬಿತ್ತನೆ ಮಾಡಿದ ಬೆಳೆಗಳು ಒಣಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ರೈತರ ಆರ್ಥಿಕ ಸ್ಥಿತಿ ಮತ್ತಷ್ಟು ಸಂಕಷ್ಟಕ್ಕೆ ಸಿಲುಕುವ ಭೀತಿ ಎದುರಾಗಿದೆ.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ರೈತರು ತಮ್ಮ ಜೀವನದ ಆಸರೆಯಾದ ಕೃಷಿಗಾಗಿ ಸಾಲ ಮಾಡಿ ಬೀಜ, ಗೊಬ್ಬರ ಮತ್ತು ಇತರೆ ಕೃಷಿ ಸಾಮಗ್ರಿಗಳನ್ನು ಖರೀದಿಸಿ ಹೊಲಕ್ಕೆ ಇಳಿದಿದ್ದಾರೆ. ಆದರೆ ಮಳೆಯ ಕೊರತೆಯಿಂದ ಅವರ ಎಲ್ಲಾ ಶ್ರಮ ವ್ಯರ್ಥವಾಗುವ ಆತಂಕ ಎದುರಾಗಿದೆ. ಬರಗಾಲದ ಛಾಯೆ ಕಾಣಿಸಿಕೊಳ್ಳುತ್ತಿರುವ ಪ್ರದೇಶಗಳಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವು ಸಮಸ್ಯೆಯೂ ತಲೆದೋರುವ ಸಾಧ್ಯತೆ ಇದೆ.

ಈ ಸಂದರ್ಭದಲ್ಲಿ ಸರ್ಕಾರ ರೈತರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಬೇಕು. ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಗ್ರಾಮಗಳಿಗೆ ಭೇಟಿ ನೀಡಿ ಬೆಳೆ ಪರಿಸ್ಥಿತಿಯ ಸಮೀಕ್ಷೆ ನಡೆಸಬೇಕು. ಬೆಳೆ ಹಾನಿಯಾದ ರೈತರಿಗೆ ಸೂಕ್ತ ಪರಿಹಾರ, ಬೆಳೆ ವಿಮೆ ಮತ್ತು ಅಗತ್ಯ ನೆರವು ಒದಗಿಸಲು ಕ್ರಮ ಕೈಗೊಳ್ಳಬೇಕು.

ರೈತನ ಬದುಕು ಸುಧಾರಿಸಿದಾಗ ಮಾತ್ರ ದೇಶದ ಆರ್ಥಿಕತೆ ಸದೃಢವಾಗುತ್ತದೆ. ಆದ್ದರಿಂದ ಸರ್ಕಾರ ಮತ್ತು ಸಂಬಂಧಪಟ್ಟ ಇಲಾಖೆಗಳು ರೈತರ ಕಷ್ಟಗಳಿಗೆ ಸ್ಪಂದಿಸಿ, ಅವರ ಬದುಕಿಗೆ ಆಸರೆಯಾಗಬೇಕಾದ ಅಗತ್ಯವಿದೆ.



# ಕಾರಿಗೆ ಲಾರಿ ಡಿಕ್ಕಿ: ಇಬ್ಬರಿಗೆ ಗಂಭೀರ ಗಾಯ

**ಕಲಬುರಗಿ:** ಸೇಡಂ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕರ್ತವ್ಯ ಮುಗಿಸಿಕೊಂಡು ಮೂವರು ಪ್ರಾಧ್ಯಾಪಕರು ಕಾರಿನಲ್ಲಿ ಬರುತ್ತಿರುವಾಗ ನಗರದ ಹೊರವಲಯದ ಗುಲಬರ್ಗಾ ವಿಶ್ವವಿದ್ಯಾಲಯದ ದ್ವಾರದ ಬಳಿ ಲಾರಿಯೊಂದು ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಗಂಭೀರವಾಗಿ ಗಾಯಗೊಂಡಿದ್ದು, ಪ್ರಾಧ್ಯಾಪಕಿಯು ಯಾವುದೇ ಗಾಯಗಳನ್ನು ಹೊಂದದೇ ಪಾರಾಗಿದ್ದಾರೆ.

ಗಾಯಾಳುಗಳನ್ನು ಡಾ. ಶಂಕರ್ ತಂದೆ ತೊರಪ್ಪ ಬತಾನೆ ಹಾಗೂ ಡಾ. ಚಂದ್ರಶೇಖರ್ ಆರ್. ತಂದೆ ರಾಮಲಿಂಗಪ್ಪ ಚಿಕ್ಕೆಗೌಡ ಎಂದು ಗುರುತಿಸಲಾಗಿದೆ. ಘಟನೆಯಲ್ಲಿ ಪ್ರಾಧ್ಯಾಪಕಿ ಡಾ. ಶಾಕೇರಾ ತಸ್ವೀರ್ ತಂದೆ ಮೊಹ್ಮದ್ ಜಮೀಲ್ ಅಹ್ಮದ್ ಅವರಿಗೆ ಯಾವುದೇ ಗಾಯಗಳಾಗಿಲ್ಲ. ಕಳೆದ 18ರಂದು ಎಂದಿನಂತೆ ಸೇಡಂಕ್ಕೆ ಹೋಗಿ ಕಾಲೇಜಿನಲ್ಲಿ ಕರ್ತವ್ಯ ಮುಗಿಸಿಕೊಂಡು ಮರಳಿ ಡಾ. ಶಾಕೇರಾ ತಸ್ವೀರ್ ಅವರ ಕಾರಿನಲ್ಲಿ ಅವರೂ ಸೇರಿದಂತೆ ಅವರ ಕಾಲೇಜಿನ ಇಬ್ಬರು ಸಹುದ್ಯೋಗಿಗಳು ಮರಳಿ ಬರುತ್ತಿದ್ದರು. ಕಾರನ್ನು ಡಾ. ಶಂಕರ್ ಬತಾನೆ ಅವರು ಚಲಾಯಿಸುತ್ತಿದ್ದರು. ವಿಶ್ವವಿದ್ಯಾಲಯದ ಗೇಟ್ ಹತ್ತಿರ ಜಂಪ್ ರಸ್ತೆಯಲ್ಲಿ ಸಂಜೆ 4-30ಕ್ಕೆ ಲಾರಿಯೊಂದು ಕಾರಿಗೆ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಪ್ರಾಧ್ಯಾಪಕರಿಗೆ ಗಾಯಗಳಾದವು.

ನಂತರ ಲಾರಿಯನ್ನು ತಡೆದು ವಿಚಾರಿಸಿದಾಗ ಲಾರಿ ಚಾಲಕ ಅಶೋಕ್ ರಾಠೋಡ್ ಎಂದು ಗೊತ್ತಾಗಿದ್ದು, ಆತ ಕುಡಿದ ಅಮಲಿನಲ್ಲಿ ಲಾರಿ ಚಲಾಯಿಸುತ್ತಿದ್ದ ಎಂದು ಕಂಡುಬಂದಿದೆ. ಡಾ. ಚಂದ್ರಶೇಖರ್ ಹಾಗೂ ಡಾ. ಶಂಕರ್ ಅವರು ಇಎಸ್ಐ ಆಸ್ಪತ್ರೆಗೆ ಬೇರೆ ಯಾವುದೋ ಕಾರಿನಲ್ಲಿ ಹೋದರು ಎಂದು ಪ್ರಾಧ್ಯಾಪಕಿ ದೂರು ಸಲ್ಲಿಸಿದ್ದು, ಈ ಕುರಿತು ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

# ಪತಿ ಹರಿದ್ವಾರಕ್ಕೆ, ಪತ್ನಿ ಮದುವೆಗೆ ಹೋದಾಗ ಮನೆ ಕಳ್ಳತನ

**ಕಲಬುರಗಿ:** ಸೊಲ್ಲಾಪುರಕ್ಕೆ ಮದುವೆ ಕಾರ್ಯಕ್ರಮಕ್ಕೆ ಪತ್ನಿ ಹಾಗೂ ಹರಿದ್ವಾರಕ್ಕೆ ಪತಿ ಹೋದಾಗ ಮನೆ ಕೀಲಿ ಕೊಂಡಿಯನ್ನು ಮುರಿದು ಸುಮಾರು 2.35 ಲಕ್ಷ ರೂ.ಗಳ ಮೌಲ್ಯದ ಚಿನ್ನಾಭರಣ ದೋಚಿ ಪರಾರಿಯಾದ ಘಟನೆ ನಗರದ ಕರುಣೇಶ್ವರ ನಗರದಲ್ಲಿರುವ ಬೃಂದಾವಣ ಲೇಔಟ್‌ನ ಶ್ರೀಮತಿ ರಾಜಶ್ರೀ ಗಂಡ ಮೌನೇಶ್ವರ ಸೊನ್ನದ್ ಅವರ ಮನೆಯಲ್ಲಿ ವರದಿಯಾಗಿದೆ. ಕಳೆದ 10ರಂದು ಶ್ರೀಮತಿ ರಾಜಶ್ರೀ ಅವರು ಸೊಲ್ಲಾಪುರಕ್ಕೆ ಮದುವೆ ಕಾರ್ಯಕ್ರಮಕ್ಕೆ ಹೋಗಿದ್ದು, ಅವರ ಪತಿ ಮೌನೇಶ್ವರ ಅವರು ಮನೆಗೆ ಕೀಲಿ ಹಾಕಿಕೊಂಡು ಹರಿದ್ವಾರಕ್ಕೆ ಹೋದಾಗ ಮನೆಯ ಮುಖ್ಯ ಬಾಗಿಲಿನ ಕೀಲಿ ಕೊಂಡಿ ಮುರಿದು ಮಲಗುವ ಕೋಣೆಯಲ್ಲಿದ್ದ ಅಲಮಾರಿಯನ್ನು ಮುರಿದು ಸೆಪ್ಟಿ ಲಾಕರ್ ಕೀಲಿ ಮುರಿದು 90000ರೂ.ಗಳ ಮೌಲ್ಯದ ಬಂಗಾರದ ಉಂಗುರು, 45000ರೂ.ಗಳ ಮೌಲ್ಯದ ಬಂಗಾರದ ಉಂಗುರು, 45000ರೂ.ಗಳ ಮೌಲ್ಯದ ಬೆಳ್ಳಿಯ ಆರಥಿ ಮುಂತಾದವುಗಳನ್ನು ಕಳ್ಳತನ ಮಾಡಿಕೊಂಡು ಹೋಗಿದ್ದಾರೆ. ಮನೆಯ ಮುಖ್ಯ ಬಾಗಿಲಿನ ಕೀಲಿ ಕೊಂಡಿಯನ್ನು ಮುರಿದಿರುವ ಕುರಿತು ಪಕ್ಕದ ಮನೆಯ ಅಂಬುಜಾ ಗಂಡ ಶರಣಗೌಡ ಕಿರಣಗಿ ಅವರು ಫೋನ್ ಮೂಲಕ ಶ್ರೀಮತಿ ರಾಜಶ್ರೀ ಅವರಿಗೆ ತಿಳಿಸಿದಾಗ ಅವರು ಬಂದು ನೋಡಿದಾಗ ಕಳ್ಳತನವಾದ ಘಟನೆ ಗೊತ್ತಾಗಿದೆ. ಈ ಕುರಿತು ಅಶೋಕ್ ನಗರ ಪೋಲಿಸ್ ಠಾಣೆಗೆ ದೂರು ಸಲ್ಲಿಸಿದ್ದು, ಈ ಕುರಿತು ಪ್ರಕರಣ ದಾಖಲಾಗಿದೆ.

# ಆಗ್ರಾದಲ್ಲಿ ಬಸವ ದರ್ಶನ ಕಾರ್ಯಕ್ರಮ ಆ.17ರಂದು




• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಆಗಸ್ಟ್ 17ರಂದು ಉತ್ತರ ಪ್ರದೇಶದ ಆಗ್ರಾದಲ್ಲಿ ಅಲ್ಲಿಯ ಎಂ.ಜಿ ರಸ್ತೆಯಲ್ಲಿರುವ ಸುರಸದನದಲ್ಲಿ ವಿಶ್ವಭೂಷಣ ರಾಜೆ ಶಿವಛತ್ರಪತಿ ಚೇತನ ಯಾತ್ರೆ ಹಾಗೂ ವಿಶ್ವಗುರು ಬಸವದರ್ಶನ ಸಮಾವೇಶ ಜರುಗಲಿದೆ ಎಂದು ಕಾರ್ಯಕ್ರಮದ ಪ್ರಮುಖ ಸಂಘಟಕರು ಹಾಗೂ ವಿಶ್ವಭೂಷಣರಾಜೆ ಶಿವಛತ್ರಪತಿ ವಿಶೇಷಪರಿಷತ್‌ನ ಮುಖ್ಯವಕ್ತಾರರಾದ ಜನಾರ್ಧನ ಪಾಟೀಲ ತಿಳಿಸಿದರು.

ಶನಿವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಟಿಉದ್ದೇಶಿಸಿ ಮಾತನಾಡಿರುವ ಅವರು, ತಾನು ಈಗಾಗಲೇ 7 ರಾಜ್ಯಗಳನ್ನು ಸಂಚರಿಸಿ ಛತ್ರಪತಿ ಶಿವಾಜಿ ಮಹಾರಾಜರ ಪ್ರಚಾರ ಹಾಗೂ ಪ್ರಸಾರ ಕಾರ್ಯ ಕೈಗೊಳ್ಳಲಾಗಿದೆ. ಜುಲೈ ಅಂತ್ಯದ ವರೆಗೆ ಇನ್ನು ಅನೇಕ ರಾಜ್ಯಗಳನ್ನು ಸಂಚರಿಸಿ ಅಲ್ಲಿ ಅಲ್ಲಿ ಶಿವಾಜಿ ಮಹಾರಾಜರ ತ್ಯಾಗಮಯ ವಿಚಾರಗಳನ್ನು ಪರಿಚಯಿಸಲಾಗುತ್ತದೆ. ವಿಶೇಷವಾಗಿ ಅವರು ಸ್ಥಾಪಿಸಿದ ಹಿಂದವಿ ಸ್ವರಾಜ್ಯ ಸ್ಥಾಪನಾ ವಷಯವನ್ನು ಯುವ ಸಮೂಹಕ್ಕೆ ಪರಿಚಯಿಸಿ ಅವರಲ್ಲಿ ದೇಶಪ್ರೇಮ ಹಾಗೂ ಮಹಾತ್ಮರ ಬಗ್ಗೆ ಗೌರವ ಹೆಚ್ಚಿಸುವ ಮೂಲ ಉದ್ದೇಶ ಹೊಂದಿದ್ದೇವೆ ಎಂದರು.

ಇದು ಸಂಪೂರ್ಣ ರಾಜಕೀಯ ರಹಿತ ಕಾರ್ಯಕ್ರಮ ಆಗಿರುತ್ತದೆ. ಕೇವಲ ದೇಶದ ಬುದ್ದಿಜೀವಿಗಳಿಗೆ ಇಲ್ಲಿ ಅವ್ಹಾನ ಇರುತ್ತದೆ. ಜಾತಿ, ಮತ, ಪಂಥ, ಪಂಗಡ ಎಂಬ ಭೇದ ಭಾವ ಇರದೆ ಎಲ್ಲ ಜನಾಂಗದವರಿಗೆ ಇಲ್ಲಿ ಮುಕ್ತ ಅವಕಾಶ ಇರುತ್ತದೆ ಎಂದರು.

ಛತ್ರಪತಿ ಶಿವಾಜಿ ಮಹಾರಾಜರ ವಾಸಸ್ತಾನವಾದ ಶಿವನೇರಿ(ಈಗಿನ ಪುಣೆ), ಶಾಹು ಪ್ಯಾಲೇಸ್ ಕೊಲ್ಲಾಪುರ, ವಿಜಯಪುರದ ಕಾಗಲ ಹಾಗೂ ಬೀದರ್ ನಗರದ ಮರಾಠಾ ಭವನದ ನಂಟಡು ಬೆಸೆಯುವ ಕಾರ್ಯಕ್ರಮ ಇದಾಗಲಿದ್ದು, ಈ ಐತಿಹಾಸಿಕ ಹಾಗೂ ಅರ್ಥಗರ್ಭಿತ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಪಾಲ್ಗೊಳ್ಳುವಂತೆ ಜನಾರ್ಧನ ಪಾಟೀಲ ಕರೆ ಕೊಟ್ಟರು.

ವಿಧಾನ ಪರಿಷತ್ ಸದಸ್ಯರಾದ ಎಂ.ಜಿ ಮುಳೆ, ಮರಾಠಾ ಸಮಾಜದ ಪ್ರಮುಖರಾದ ವೆಂಕಟ ಮೆಯಿಂದೆ, ಲಿಂಗಾಯತ ಸಮಾಜದ ಮುಖಂಡರಾದ ಚಂದ್ರಶೇಖರ ಹೆಬ್ಬಾಳೆ ಮಾತನಾಡಿದರು. ಜೈರಾಜ ಖಂಡ್ರೆ, ಕಂಟೆಪ್ಪ ಗಂದಿಗುಡೆ ಹಾಗೂ ಇತರರು ಪತ್ರಿಕಾಗೋಷ್ಟಿಯಲ್ಲಿದ್ದರು.

## ಬಸವ ದರ್ಶನ ಕಾರ್ಯಕ್ರಮದಲ್ಲಿ ಭಾಗವಹಿಸಿ: ಮುಳೆ

**ಆಗಸ್ಟ್ 17, 2026ರಂದು ಆಗ್ರಾದಲ್ಲಿ ಶಿವಛತ್ರಪತಿ ಚೇತನಾ ಯಾತ್ರೆ ಜೊತೆಗೆ ವಿಶ್ವಗುರು ಬಸವಣ್ಣನವರ ದರ್ಶನ ಕಾರ್ಯಕ್ರಮ ಸಹ ಆಯೋಜಿಸಲಾಗಿದೆ ಎಂದು ವಿಧಾನ ಪರಿಷತ್ ಸದಸ್ಯರಾದ ಎಂ.ಜಿ ಮುಳೆ ತಿಳಿಸಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಟಿ ಉದ್ದೇಶಿಸಿ ಮಾತನಾಡಿರುವ ಅವರು, ಈ ಹಿಂದೆ ಬಿಹಾರದ ಪಾಟ್ನಾ ಹಾಗೂ ಪಶ್ಚಿಮ ಬಂಗಾಳದ ಕಲ್ಕತ್ತಾದಲ್ಲಿ ವಿಶ್ವಗುರು ಬಸವಣ್ಣನವರ ದರ್ಶನ ಕಾರ್ಯಕ್ರಮ ಆಯೋಜಿಸಲಾಗಿತ್ತು. ಅರವಿಂದ ಜತ್ತಿ ಈ ಉಭಯ ಕಾರ್ಯಕ್ರಮ ಆಯೋಜಿಸಲು ಸಾಥ ನೀಡಿದ್ದರು. ವಿಶ್ವಗುರು ಬಸವಣ್ಣನವರು ಸಮಾನತೆಗಾಗಿ ಹೋರಾಡಿದರೆ, ಶಿವಾಜಿ ಮಹಾರಾಜರು ರಾಷ್ಟ್ರೀಯ ಐಕ್ಯತೆ ಹಾಗೂ ಸ್ವಾಭಿಮಾನ ಕಿಚ್ಚು ಹೆಚ್ಚಿಸಲು ಮುಂದಾಗಿದ್ದರು. ಹಾಗಾಗಿ ಈ ಇಬ್ಬರು ಮಹಾತ್ಮರ ಕಾರ್ಯಕ್ರಮಗಳನ್ನು ಒಂದೆ ವೇದಿಕೆಯಲ್ಲಿ ಆಯೋಜಿಸಲು ತಿರ್ಮಾನಿಸಲಾಗಿದೆ ಎಂದರು. 17 ಆಗಸ್ಟ್ 1766ರಲ್ಲಿ ಔರಂಗಬಜೇಬನಿಂದ ಬಂಧಿಸಲ್ಪಟ್ಟಿದ್ದ ಶಿವಾಜಿ ಮಹಾರಾಜರು 100 ದಿನಗಳ ನಂತರ ಅಂದು ಬಿಡುಗಡೆಯಾದ ದಿನ ಆಗಿರುವುದರಿಂದ ಈ ಕಾರ್ಯಕ್ರಮ ಆಯೋಜಿಸಿದಕ್ಕೆ ಮಹತ್ವ ಪಡೆದಿದೆ. ಶಿವಾಜಿ ಮಹಾರಾಜರ ನಂತರ ಅವರ ಪುತ್ರ ಸಾಂಬಾಜಿ ಮಹಾರಾಜ, ನಂತರ ರಾಜಾರಾಮ ಅವರು ಹಿಂದವಿ ಸ್ವರಾಜ ಉಳಿಸಲು ಶ್ರಮಿಸಿದರು ಎಂದರು.**



# ಗಣತಿ ಕರ್ತವ್ಯ ನಿರ್ವಹಿಸಿದವರಿಗೆ ಗಳಿಕೆ ರಜೆ ನೀಡಿ: ಒತ್ತಾಯ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ತಾಲೂಕಿನಲ್ಲಿ 2025ರ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ ಕಾರ್ಯದಲ್ಲಿ ತೊಡಗಿದ್ದ ಮೇಲ್ವಿಚಾರಕರು, ಗಣತಿದಾರರಿಗೆ ಗಳಿಕೆ ರಜೆ ನೀಡಬೇಕು ಎಂದು ಗಣತಿ ಶಿಕ್ಷಕರು, ಸರಕಾರಿ ನೌಕರರು ಒತ್ತಾಯಿಸಿದ್ದಾರೆ.

ಈ ಕುರಿತು ನಗರದ ತಹಸೀಲ್ ಕಚೇರಿ ಮತ್ತು ತಾಲೂಕು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಶನಿವಾರ ಮನವಿ ಪತ್ರ ಸಲ್ಲಿಸಿದರು.

ಕಳೆದ ವರ್ಷ ನಿವೃತ್ತ ನ್ಯಾಯಮೂರ್ತಿ ಹೆಚ್. ಎನ್. ನಾಗಮೋಹನದಾಸ್ ವರದಿ ಅನ್ವಯ ಪರಿಶಿಷ್ಟ ಜಾತಿಯ ಸಮಗ್ರಸಮೀಕ್ಷೆ-2025ರ ಗಣತಿ ಕಾರ್ಯದಲ್ಲಿ ತಾಲೂಕಿನ ಶಿಕ್ಷಕರು ಮತ್ತು ಸರಕಾರಿ ನೌಕರರು ಸಕ್ರಿಯವಾಗಿ ಪಾಲ್ಗೊಂಡು ಗಣತಿ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿರುತ್ತಾರೆ.

ಸಮೀಕ್ಷೆಯ ಕಾರ್ಯ ಪೂರ್ಣಗೊಂಡು ಒಂದು ವರ್ಷ ಕಳೆದರೂ ಗಣತಿ ಕಾರ್ಯದಲ್ಲಿ ಭಾಗವಹಿಸಿದ ಗಣತಿದಾರರಿಗೆ ಹಾಗೂ ಮೇಲ್ವಿಚಾರಕರಿಗೆ ಹಾಜರಾತಿಯನ್ನು ನೀಡಿರುವುದಿಲ್ಲ.



ಕೆ.ಸಿ.ಎಸ್.ಆರ್ ನಿಯಮ 113(3)(ಎ) ಹಾಗೂ (ಬ) ರನ್ವಯ ಸದರಿ ಶಿಕ್ಷಕರು ರಜಾ ಅವಧಿಯಲ್ಲಿ ಕಾರ್ಯ ನಿರ್ವಹಿಸಿದ ಪ್ರಯುಕ್ತ ಗಳಿಕೆ ರಜೆ ನೀಡುವಂತೆ ನಿಯಮವಿದೆ ಆದರೆ ಇನ್ನೂ ಗಳಿಕೆ ರಜೆ ನೀಡಿರುವುದಿಲ್ಲ.

ಇನ್ನಾದರೂ ಮೇಲಧಿಕಾರಿಗಳು ಪರಿಶೀಲಿಸಿ ಕೂಡಲೇ ಗಣತಿ ಕಾರ್ಯದಲ್ಲಿ ಕರ್ತವ್ಯ ನಿರ್ವಹಿಸಿರುವ ಶಿಕ್ಷಕರು ಮತ್ತು ಸರಕಾರಿ ನೌಕರರಿಗೆ ಹಾಜರಾತಿಯನ್ನು ನೀಡಬೇಕು ಎಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ತಾಲೂಕು ಸರಕಾರಿ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ದತ್ತಾತ್ರಿ ಕಾಟಕರ್, ಶಿಕ್ಷಕರಾದ ಸತೀಶ ಶಿದ್ದೇಶ್ವರೆ, ಅವಿನಾಶ ರಾಠೋಡ, ಗಣೇಶ ಜಾಧವ, ಸಂಜೀವ ಸಾವರೆ, ಸಂಜೀವ ಉಪಾಸೆ ಸುಗ್ರೀವ ಗೋಣೆ, ಸುನಿಲಕುಮಾರ, ಬೀರಣ್ಣ ಭೂರೆ, ನಾಗರಾಜ ಮೇತ್ರೆ, ಸೂರ್ಯಕಾಂತ, ದೀಪಕ ಹೊನ್ನಾಳೆ, ಮಹೇಶಕುಮಾರ, ರವೀಂದ್ರ ಕಾಂಬಳೆ, ಮಹೇಂದ್ರ ಕೊಂಗಳಿ, ವಿಶ್ವರಾಧ್ಯ ಸೇರಿದಂತೆ ಹಲವರು ಇದ್ದರು.

# ಬಿಡದಿ ಟೌನ್‌ಶಿಪ್ ವಿರೋಧಿಸಿ ನಿಖಿಲ್ ನೇತೃತ್ವದಲ್ಲಿ ಪಾದಯಾತ್ರೆ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ಬಿಡದಿ ಟೌನ್ ಶಿಪ್ ಯೋಜನೆಯನ್ನು ವಿರೋಧಿಸಿ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ನಾಳೆ ಜೂನ್ 21ರ ಭಾನುವಾರ ಬೃಹತ್ ಪಾದಯಾತ್ರೆ ನಡೆಯಲಿದೆ.

ಅಂಚಿಪುರ ಗ್ರಾಮದಿಂದ ಹೊಸೂರುವರೆಗೆ 8 ಗ್ರಾಮಗಳ ಮೂಲಕ ಈ ಪಾದಯಾತ್ರೆ ಸಾಗಲಿದ್ದು, ಸಾವಿರಾರು ರೈತರು ಭಾಗವಹಿಸಲಿದ್ದಾರೆ. ನಾಳೆ ಬೆಳಗ್ಗೆ 9 ಗಂಟೆಗೆ ಅಂಚಿಪುರದಿಂದ ಆರಂಭವಾಗುವ ಪಾದಯಾತ್ರೆಯು ಅಂಚಿಪುರ ಕಾಲೊನಿ, ಬನ್ನಿಗಿರಿ, ಮರೇವೇಗೌಡನದೊಡ್ಡಿ, ಗುಂಡುತೋಪು, ಗೊಲ್ಲಹಳ್ಳಿ, ಕೋಡಿಪಾಳ್ಯ ಹಾಗೂ ಹೊಸೂರುವರೆಗೂ ಸಾಗಲಿದ್ದು, ಹೊಸೂರಿನಲ್ಲಿ ಬಹಿರಂಗ ಸಭೆಯೊಂದಿಗೆ ಸಮಾರೋಪಗೊಳ್ಳಲಿದೆ.

ನಮ್ಮ ಭೂಮಿ ನಮ್ಮ ಹಕ್ಕು. ರೈತರ ಬದುಕು ಮತ್ತು ಕೃಷಿ ಚಟುವಟಿಕೆಗಳನ್ನು ಉಳಿಸಲು ಈ ಹೋರಾಟ. ಅಂಚಿಪುರ, ಬನ್ನಿಗಿರಿ, ಗೊಲ್ಲಹಳ್ಳಿ ಸೇರಿದಂತೆ 8 ಗ್ರಾಮಗಳ ರೈತರಿಗೆ ನ್ಯಾಯ ದೊರಕಿಸಿಕೊಡಬೇಕು ಎಂದು ನಿಖಿಲ್ ಕುಮಾರಸ್ವಾಮಿ ತಿಳಿಸಿದ್ದಾರೆ. ಬಿಡದಿ ಟೌನ್ ಶಿಪ್ ಯೋಜನೆಯಡಿ ಅಂಚಿಪುರ, ಬನ್ನಿಗಿರಿ, ಮರೇವೇಗೌಡನದೊಡ್ಡಿ, ಗುಂಡುತೋಪು, ಗೊಲ್ಲಹಳ್ಳಿ, ಕೋಡಿಪಾಳ್ಯ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ 518 ಎಕರೆ ಕೃಷಿ ಭೂಮಿಗೆ ಈಗಾಗಲೇ ಅಂತಿಮ ಅಧಿಸೂಚನೆ ಹೊರಡಿಸಲಾಗಿದೆ. ಜೊತೆಗೆ ಹೆಚ್ಚುವರಿ 7,481 ಎಕರೆ ಭೂಸ್ವಾಧೀನಕ್ಕೆ ಸರ್ಕಾರ ಮುಂದಾಗಿದೆ. ಇದರಿಂದ 755 ರೈತ ಕುಟುಂಬಗಳು, ಮಾಸಿಕ 6 ಲಕ್ಷ ಲೀಟರ್ ಹಾಲು ಉತ್ಪಾದಿಸುವ ಹೈನುಗಾರಿಕೆ, ರೇಷ್ಮೆ-ತೋಟಗಾರಿಕೆ ಹಾಗೂ 10 ಲಕ್ಷ ಹಸಿರು ವೃಕ್ಷಗಳಿಗೆ ಧಕ್ಕೆಯಾಗಲಿದೆ ಎಂದು ನಿಖಿಲ್ ಹೇಳಿದ್ದಾರೆ.

ಕಳೆದ 450 ದಿನಗಳಿಂದ ರೈತರು ನಿರಂತರ ಪ್ರತಿಭಟನೆ ನಡೆಸುತ್ತಿದ್ದಾರೆ. ಈ ಯೋಜನೆಯಿಂದ ರೈತರ ಬದುಕಿಗೆ ತೊಂದರೆಯಾಗಲಿದ್ದು, ನಮ್ಮ ಈ ಹೋರಾಟ ಪಕ್ಷಾತೀತವಾಗಿ ನಡೆಯಲಿದ್ದು, ಸರ್ಕಾರದ ಅಂತಿಮ ಅಧಿಸೂಚನೆಯನ್ನು ರದ್ದುಪಡಿಸಬೇಕು ಎಂದು ನಿಖಿಲ್ ಕುಮಾರಸ್ವಾಮಿ ಆಗ್ರಹಿಸಿದ್ದಾರೆ.

ನಮ್ಮ ನೆಲದ ಮೇಲೆ ನಮ್ಮ ಅಧಿಕಾರ. ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಬಿಡಬೇಕು. ರೈತರಿಗೆ ನ್ಯಾಯ ಬೇಕು. ಜೂನ್ 21ರಂದು ಅಂಚಿಪುರದಿಂದ ಹೊಸೂರಿಗೆ ನಡೆಯುವ ಪಾದಯಾತ್ರೆಯಲ್ಲಿ ಎಲ್ಲರೂ ಭಾಗವಹಿಸಿ ಎಂದು ನಿಖಿಲ್ ಕರೆ ನೀಡಿದ್ದಾರೆ.

ಪಾದಯಾತ್ರೆಗೆ ವಿವಿಧ ರೈತ ಸಂಘಟನೆಗಳು ಮತ್ತು ಸ್ಥಳೀಯ ಜನಪ್ರತಿನಿಧಿಗಳು ಬೆಂಬಲ ಸೂಚಿಸಿದ್ದು, ನಮ್ಮ ಪಾದಯಾತ್ರೆಯಲ್ಲಿ ಭಾಗಿಯಾಗಿಯಾಗಲಿದ್ದಾರೆ ಎಂದರು.

# ಮುತ್ತು ಬಂದಿದೆ ಕೇರಿಗೆ ನೃತ್ಯ ರೂಪಕ ಜೂ.22ರಂದು







• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ, ಬೆಂಗಳೂರು, ಸಹಕಾರ ಜನಪದ ಕಲಾವಿದರ ಬಳಗ (ರಿ) ಹಾಗೂ ಅತಿವಾಳೆ ಸಾಂಸ್ಕೃತಿಕ ಪ್ರತಿಷ್ಠಾನ (ರಿ) ಇವರ ಸಂಯುಕ್ತ ಆಶ್ರಯದಲ್ಲಿ ಸಂತಕವಿ ಕನಕದಾಸರ ಜೀವನ, ಸಾಹಿತ್ಯ ಮತ್ತು ತತ್ವಾದರ್ಶಗಳನ್ನು ಜನರಿಗೆ ತಲುಪಿಸುವ ಉದ್ದೇಶದಿಂದ ಮುತ್ತು ಬಂದಿದೆ ಕೇರಿಗೆ ಎಂಬ ಸಂಗೀತ-ನೃತ್ಯ ರೂಪಕ ಕಾರ್ಯಕ್ರಮವನ್ನು ಜೂನ್ 22ರಂದು ಸಂಜೆ 6.30 ಗಂಟೆಗೆ ನಗರದ ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರವು ವಿಶೇಷವಾಗಿ ಸಿದ್ಧಪಡಿಸಿರುವ ಈ ನೃತ್ಯ ರೂಪಕದಲ್ಲಿ 25 ಜನ ಕಲಾವಿದರಿದ್ದಾರೆ, ಕನಕದಾಸರ ಪ್ರಮುಖ ಕೀರ್ತನೆಗಳು ಹಾಗೂ ಕಾವ್ಯ ಭಾಗಗಳನ್ನು ಆಯ್ದು, ಅವರ ಮಾನವತಾವಾದಿ ಚಿಂತನೆಗಳು, ಸಾಮಾಜಿಕ ಕಾಳಜಿ ಮತ್ತು ಭಕ್ತಿ ತತ್ವವನ್ನು ನೃತ್ಯ ಹಾಗೂ ಸಂಗೀತದ ಮೂಲಕ ಪ್ರೇಕ್ಷಕರಿಗೆ ಪರಿಚಯಿಸಲಾಗುತ್ತದೆ.

ರಾಷ್ಟ್ರಮಟ್ಟದಲ್ಲಿ ಖ್ಯಾತಿ ಪಡೆದಿರುವ ನೃತ್ಯ ನಿರ್ದೇಶಕಿ ಸ್ನೇಹ ಕಪ್ಪಣ್ಣ ಅವರ ನೃತ್ಯ ಸಂಯೋಜನೆ, ಸಂಗೀತ ತಜ್ಞ ಡಾ. ಪ್ರವೀಣ ಡಿ. ರಾವ್ ಅವರ ಸಂಗೀತ ನಿರ್ದೇಶನ, ಕಾತ ಚಿಕ್ಕಣ್ಣ ಅವರ ಪರಿಕಲ್ಪನೆ ಮತ್ತು ಸಾಹಿತ್ಯ ಈ ನೃತ್ಯ ರೂಪಕದ ವಿಶೇಷತೆಯಾಗಿದೆ. ಹಿರಿಯ ರಂಗ ಸಂಘಟಕ ಶ್ರೀನಿವಾಸ ಜಿ. ಕಪ್ಪಣ್ಣ ಅವರ ಸಮನ್ವಯ ಹಾಗೂ ತಾಂತ್ರಿಕ ನಿರ್ದೇಶನದಲ್ಲಿ ಭ್ರಮರಿ ಡ್ಯಾನ್ಸ್ ರೆಪರ್ಟರಿ ಕಲಾವಿದರು ನೃತ್ಯ ರೂಪಕವನ್ನು ಪ್ರಸ್ತುತ ಪಡಿಸಲಿದ್ದಾರೆ. ಕಾರ್ಯಕ್ರಮಕ್ಕೆ ಹೆಚ್.ಎಂ. ರೇವಣ್ಣ ಅವರ ಸಹಕಾರವೂ ಇದೆ.

ಹದಿನೈದು-ಹದಿನಾರನೇ ಶತಮಾನದಲ್ಲಿ ಬದುಕಿದ ಸಂತಕವಿ ಕನಕದಾಸರು ಜಾತಿ, ಕುಲ, ವರ್ಗ ಹಾಗೂ ಮೌಢ್ಯತೆಯ ವಿರುದ್ಧ ಧ್ವನಿಯೆತ್ತಿ ಸಮಾನತೆ, ಸಹಿಷ್ಣುತೆ, ಸಹಬಾಳ್ವೆ ಮತ್ತು ಸೋದರತ್ವದ ಮೌಲ್ಯಗಳನ್ನು ಪ್ರತಿಪಾದಿಸಿದ ಮಹಾನ್ ದಾರ್ಶನಿಕ ಕವಿಯಾಗಿದ್ದಾರೆ. ತಮ್ಮ ಕಾವ್ಯಗಳು ಮತ್ತು 350ಕ್ಕೂ ಹೆಚ್ಚು ಕೀರ್ತನೆಗಳ ಮೂಲಕ ಕನ್ನಡ ಸಾಹಿತ್ಯ ಹಾಗೂ ಸಂಸ್ಕೃತಿಗೆ ಅಪಾರ ಕೊಡುಗೆ ನೀಡಿದ್ದಾರೆ. ಅವರ ಈ ಮಹತ್ವದ ಚಿಂತನೆಗಳನ್ನು ನೃತ್ಯ ರೂಪಕದ ಮೂಲಕ ಜನಸಾಮಾನ್ಯರಿಗೆ ತಲುಪಿಸುವುದು ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ.

ಕಾರ್ಯಕ್ರಮವು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾದ ಈಶ್ವರ ಬಿ. ಖಂಡ್ರೆ, ಅವರು ಉದ್ಘಾಟಿಸುವರು, ಪಂಚ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ರಾಜ್ಯಾಧ್ಯಕ್ಷರಾದ ಹೆಚ್.ಎಂ. ರೇವಣ್ಣ, ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು, ಮುಖ್ಯ ಅತಿಥಿಯಾಗಿ, ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ಅಧ್ಯಕ್ಷ ಕಾತ ಚಿಕ್ಕಣ್ಣ, ಹಿರಿಯ ರಂಗಸಂಘಟಕ ಶ್ರೀನಿವಾಸ ಜಿ. ಕಪ್ಪಣ್ಣ ಸೇರಿದಂತೆ ಜಿಲ್ಲೆಯ ಜನಪ್ರತಿನಿಧಿಗಳು, ಸಾಹಿತಿಗಳು, ಕಲಾವಿದರು ಹಾಗೂ ಸಾಂಸ್ಕೃತಿಕ ಸಂಘಟಕರು ಭಾಗವಹಿಸಲಿದ್ದಾರೆ.

ಕಲಾಭಿಮಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ, ಕಾರ್ಯಕ್ರಮ ಸಂಚಾಲಕರಾದ ವಿಜಯಕುಮಾರ ಸೋನಾರೆ ಹಾಗೂ ಡಾ. ಸಂಜೀವಕುಮಾರ ಅತಿವಾಳೆ, ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ಸದಸ್ಯ ಕಾರ್ಯದರ್ಶಿಯಾದ ಕರಿಯಪ್ಪ ಎನ್, ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪತ್ರಿಕಾ ಭವನದ ನಿರ್ವಹಣೆಯನ್ನು ಪತ್ರಕರ್ತರ ಸಂಘಕ್ಕೆ ನೀಡಲು ಮನವಿ



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಬೀದರ ನಗರದಲ್ಲಿರುವ ಪತ್ರಿಕಾ ಭವನದ ನಿರ್ವಹಣಾ ಜವಾಬ್ದಾರಿಯನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ನಿರ್ವಹಣಾ ಜವಾಬ್ದಾರಿಯನ್ನು ನೀಡಬೇಕೆಂದು ಶನಿವಾರ ಜಿಲ್ಲಾಧಿಕಾರಿಗಳಿಗೆ ಬರೆದ ಮನವಿ ಪತ್ರವನ್ನು ತಹಶೀಲ್ದಾರ್ ಮಂಜುನಾಥ ಪಂಚಾಳ ಅವರಿಗೆ ನೀಡಲಾಯಿತ್ತು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು ಸುಮಾರು ಹತ್ತು ಸಾವಿರ ಪತ್ರಕರ್ತರನ್ನು ಹೊಂದಿರುವ ಬೃಹತ್ ಸಂಸ್ಥೆಯಾಗಿದ್ದು, ಶತಮಾನೋತ್ಸವದಂಚಿಗೆ ತಲುಪಿರುವ ಸುಧೀರ್ಘ ಇತಿಹಾಸವನ್ನು ಹೊಂದಿರುವ ಸಂಸ್ಥೆಯಾಗಿದ್ದು, ಅಲ್ಲದೇ 40ನೇ ರಾಜ್ಯ ಮಟ್ಟದ ಪತ್ರಕರ್ತರ ಸಮಾವೇಶವನ್ನು ಯಶಸ್ವಿ ಮತ್ತು ಮಾದರಿ ಕಾರ್ಯಕ್ರಮವನ್ನು ಆಚರಿಸಿದೆ. ಇನ್ನು ರಾಜ್ಯದ 20 ಜಿಲ್ಲೆಗಳಲ್ಲಿ ಅಲ್ಲಿನ ಪತ್ರಿಕಾ ಭವನವನ್ನು ಕರ್ನಾಟಕ ಸರಕಾರ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದೊಂದಿಗೆ ನಿರ್ವಹಣೆ ಮಾಡುತ್ತಿದೆ. ಅದರಂತೆ ಬೀದರ ನಗರದ ಪತ್ರಿಕಾ ಭವನದ ನಿರ್ವಹಣೆಯ ಜವಾಬ್ದಾರಿಯನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕಕ್ಕೆ ಒಪ್ಪಿಸಬೇಕೆಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕಾಧ್ಯಕ್ಷ ಕೃಷ್ಣಾಚಾರ್ಯ ಪಂಚಾಳ, ಪ್ರಧಾನ ಕಾರ್ಯದರ್ಶಿ ಸೈಯದ ಮುಸ್ತಫಾ ಖಾದ್ರಿ, ಸದಸ್ಯರಾದ ನವೀನ ಗಂಜಿ, ಮೋಹಿಯೊದ್ದಿನ ಲಾಥೋಡಿ, ವಿದ್ಯಾಸಾಗರ ಕಟ್ಟಿಮನಿ, ರಾಜಕುಮಾರ ಆರ್. ಹಡಪದ, ಮಂಜುನಾಥ ಚಿಂತಕೋಟಿ, ಸೈಯದ್ ಅಜೀಮ್ ಸೇರಿದಂತೆ ಇತರರು ಉಪಸ್ಥಿತರಿದ್ದರು

# ಕೊಪ್ಪಳದಲ್ಲಿ ಅಲ್ಪಸಂಖ್ಯಾತರ ಮಹಿಳಾ ಪಿಯು ಕಾಲೇಜಿಗೆ ಬಾಡಿಗೆ ಕಟ್ಟಡ ಅಗತ್ಯ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದ ಅಲ್ಪಸಂಖ್ಯಾತರ ಮಹಿಳಾ ಪದವಿ ಪೂರ್ವ ಕಾಲೇಜಿಗೆ ಕೊಪ್ಪಳದಲ್ಲಿ ಬಾಡಿಗೆ ಕಟ್ಟಡದ ಅವಶ್ಯಕವಾಗಿದ್ದು, ಆಸಕ್ತ ಕಟ್ಟಡ ಮಾಲೀಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಕೊಪ್ಪಳ ನಗರಕ್ಕೆ ಹೊಸದಾಗಿ ಅಲ್ಪಸಂಖ್ಯಾತರ ಮಹಿಳಾ ಪದವಿ ಪೂರ್ವ (ವಿಜ್ಞಾನ, ವಾಣಿಜ್ಯ & ಕಲಾ ವಿಭಾಗ) ಕಾಲೇಜು ಮಂಜೂರು ಮಾಡಿ ಸರ್ಕಾರವು ಆದೇಶಿಸಿದ್ದು, ಈ ಕಾಲೇಜನ್ನು ಪ್ರಸ್ತುತ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಬೇಕಾಗಿರುತ್ತದೆ. ಹಾಗಾಗಿ ಈ ಕಾಲೇಜಿಗೆ 10 ಕೊಠಡಿಗಳು ಹಾಗೂ ಮೂಲಭೂತ ಸೌಕರ್ಯಗಳನ್ನು ಒಳಗೊಂಡಿರುವ ಕಟ್ಟಡವನ್ನು ಬಾಡಿಗೆ ರೂಪದಲ್ಲಿ ನೀಡಲಿಚ್ಛಿಸುವ ಆಸಕ್ತ ಕಟ್ಟಡ ಮಾಲೀಕರು, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನಾ ಆಜಾದ್ ಭವನ ಹೊಸಪೇಟ್ ರಸ್ತೆ ಕೊಪ್ಪಳ, ಇಲ್ಲಿಗೆ ಜೂನ್ 30 ರೊಳಗಾಗಿ ಕಛೇರಿ ಸಮಯದಲ್ಲಿ ಭೇಟಿ ನೀಡಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಅಲ್ಪಸಂಖ್ಯಾತರ ಮಹಿಳಾ ಪದವಿ ಪೂರ್ವ ಕಾಲೇಜು, ಕೊಪ್ಪಳ ಮೊ.ಸಂ: 9902573068 ಹಾಗೂ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳ ಕಾರ್ಯಾಲಯ, ಮೌಲಾನಾ ಆಜಾದ್ ಭವನ ಕೊಪ್ಪಳ ಕಛೇರಿ ದೂರವಾಣಿ: 08539-225070 ಗೆ ಸಂಪರ್ಕಿಸುವಂತೆ ಕೊಪ್ಪಳ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಅಜ್ಮೀರ್ ಅಲಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ವಾಸುಕಿ ಸುಬ್ರಮಣ್ಯ ಸ್ವಾಮಿ ವಾರ್ಷಿಕೋತ್ಸವ ಸಂಪನ್ನ




• ಮಲ್ಲಮ್ಮ ನುಡಿ ವಾರ್ತೆಮುದಗಲ್

ಪಟ್ಟಣದ ಹೊರವಲಯದಲ್ಲಿರುವ ವಾಸುಕಿ ಸುಬ್ರಮಣ್ಯ ಸ್ವಾಮಿ ದೇವಸ್ಥಾನದ ಪಂಚವಾರ್ಷಿಕೋತ್ಸವ ಕಾರ್ಯಕ್ರಮವು ಶನಿವಾರ ಶ್ರದ್ಧಾ ಭಕ್ತಿಯಿಂದ ಜರುಗಿತು. ದೇಗುಲದ ವಾರ್ಷಿಕೋತ್ಸವದ ಪ್ರಯುಕ್ತ ವಿಗೃಹಗಳಿಗೆ ವಿಶೇಷ ಅಲಂಕಾರ ಸಪಿವೆ, ಹಾಗೂ ಧಾರ್ಮಿಕ ಪೂಜಾ ಕಾರ್ಯಕ್ರಮಗಳು ಶ್ರದ್ಧಾ ಭಕ್ತಿಯಿಂದ ನೆರವೇರಿಸಲಾಯಿತು. ದೇವಸ್ಥಾನದ ಪ್ರಧಾನ ಅರ್ಚಕ ಧೀರೇಂದ್ರಾಚಾರ್ಯರು ವಿಗ್ರಹಗಳಿಗೆ ಪಂಚಾಮೃತ ಅಭೀಷೇಕ, ಗಂಧ ಲೇಪನ, ನೈವೇದ್ಯ ಹಾಗೂ ಮಹಾ ಮಂಗಳಾರತಿ ನೆರವೇರಿಸಿ ಅನ್ನಸಂತರ್ಪಣೆ ಮಾಡುವುದರ ಮೂಲಕ ಪಂಚ ವಾರ್ಷಿಕೋತ್ಸವಕ್ಕೆ ಸಂಪನ್ನಗೊಂಡಿತು. ಪ್ರತಿ ವರ್ಷದಂತೆ ಈ ವರ್ಷವೂ ಕೂಡ ದೇಗುಲದಲ್ಲಿನ ವಿಗ್ರಹಗಳಿಗೆ ಬಗೆ ಬಗೆಯ ಹೂಗಳ ಅಲಂಕಾರ, ಮಹಿಳೆಯರಿಂದ ಅಭಿಷೇಕ ನೆರವೇರಿಸಲಾಯಿತು.

ಇಷ್ಟಾರ್ಥ ಸಿದ್ಧಿಗಾಗಿ ಭಕ್ತರು ಮುಡುಪು ಸಮರ್ಪಣೆ ಮಾಡಿ ಹರಕೆ ತೀರಿಸಿದರು. ದೇವಸ್ಥಾನ ಸಮಿತಿ ಪದಾಧಿಕಾರಿಗಳಾದ ಹೊಳೆಯಪ್ಪ ಬಂಕದ, ಹನುಮೇಶ ಪಟವಾರಿ, ಎಲ್.ಟಿ. ನಾಯ್ಕ, ವೆಂಕಟೇಶ ಕುಲಕರ್ಣಿ, ರಮೇಶ ಗೂಳಿ, ಶಂಕರಗೌಡ ಕಿಡದೂರು, ಮಹೇಶ ವಸ್ತ್ರದ , ಬಾಳಪ್ಪ ಸುರಪೂರ, ರಾಜಕುಮಾರ್ ಮಾಲಿ ಪಾಟೀಲ್, ಚನ್ನಮ್ಮ ಸುಂಕದ, ಸಂಜಯ್ ಬಾಸುತ್ಕರ್, ಬಾಲಣ್ಣ ಶೆಟ್ಟಿ ಸೇರಿದಂತೆ ಅನೇಕರಿದ್ದರು.

# ಜೆ.ಜೆ.ಎಂ ಯೋಜನೆಯಲ್ಲಿ ಸಾರ್ವಜನಿಕ ಹಣ ದುರ್ಬಳಕೆ ಆರೋಪ: ಸಾಗರ ಖಂಡ್ರೆಗೆ ದೂರು

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ತಾಲೂಕಿನ ಹೊಳಸಮುದ್ರ ಗ್ರಾಮದಲ್ಲಿ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ 'ಜಲ ಜೀವನ್ ಮಿಷನ್' (ಜೆ.ಜೆ.ಎಂ) ಯೋಜನೆಯಡಿ ಕೊರೆಯಲಾದ ಬಾವಿಯು ಸಾರ್ವಜನಿಕರ ಬಳಕೆಗೆ ಬಾರದೆ ನನೆಗುದಿಗೆ ಬಿದ್ದಿದ್ದು, ಸರ್ಕಾರದ ಲಕ್ಷಾಂತರ ರೂಪಾಯಿ ಹಣ ದುರ್ಬಳಕೆಯಾಗಿದೆ ಎಂದು ಆರೋಪಿಸಿ ಗ್ರಾಮಸ್ಥರು ಬೀದರ್ ಲೋಕಸಭಾ ಕ್ಷೇತ್ರದ ಸಂಸದರಾದ ಸಾಗರ್ ಖಂಡ್ರೆ ಅವರಿಗೆ ಲಿಖಿತ ದೂರು ಸಲ್ಲಿಸಿದ್ದಾರೆ. ಗ್ರಾಮಸ್ಥರು ನೀಡಿದ ದೂರಿನನ್ವಯ, ಹೊಳಸಮುದ್ರ ಗ್ರಾಮದಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಜೆ.ಜೆ.ಎಂ ಯೋಜನೆಯಡಿ ಬಾವಿಯೊಂದನ್ನು ಕೊರೆಯಲಾಗಿತ್ತು. ಆದರೆ ಬಾವಿ ಕೊರೆದು ತಿಂಗಳುಗಳೇ ಕಳೆದರೂ ಇಂದಿನವರೆಗೂ ಅದರಿಂದ ಗ್ರಾಮಸ್ಥರಿಗೆ ಯಾವುದೇ ರೀತಿಯ ನೀರಿನ ಸೌಲಭ್ಯ ಒದಗಿಸಿಲ್ಲ. ಬಾವಿಯಿಂದ ಒಂದು ಹನಿ ನೀರನ್ನೂ ಸಾರ್ವಜನಿಕ ಬಳಕೆಗೆ ನೀಡದೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಸಂಪೂರ್ಣ ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಮಗ್ರ ತನಿಖೆಗೆ ಒತ್ತಾಯ:

> "ಸರ್ಕಾರದಿಂದ ಬಿಡುಗಡೆಯಾದ ಅನುದಾನವನ್ನು ಸಮರ್ಪಕವಾಗಿ ಬಳಸದೆ, ಕಾಮಗಾರಿಯನ್ನು ಅರ್ಧಕ್ಕೆ ನಿಲ್ಲಿಸಲಾಗಿದೆ. ಇದರಲ್ಲಿ ಭ್ರಷ್ಟಾಚಾರ ನಡೆದಿರುವ ದಟ್ಟ ಅನುಮಾನವಿದ್ದು, ಸಾರ್ವಜನಿಕ ಹಣ ಪೋಲಾಗಿದೆ". ಈ ಬಗ್ಗೆ ಸಂಪೂರ್ಣ ತನಿಖೆಯಾಗಬೇಕು.
> – ಪ್ರಭು ಬೆಣ್ಣೆ, ಹೊಳಸಮುದ್ರ ನಿವಾಸಿ.

ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಜಲ ಜೀವನ್ ಮಿಷನ್ ಕಾಮಗಾರಿಯ ಕುರಿತು ಸಮಗ್ರ ತನಿಖೆ ನಡೆಸಬೇಕು. ಕರ್ತವ್ಯ ಲೋಪ ಎಸಗಿದ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ನಿಯಮ ಉಲ್ಲಂಘಿಸಿದ ಗುತ್ತಿಗೆದಾರರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಸಂಸದರಲ್ಲಿ ಒತ್ತಾಯಿಸಿದರು. ಅಲ್ಲದೆ, ತಕ್ಷಣವೇ ಬಾವಿಯನ್ನು ಕಾರ್ಯರೂಪಕ್ಕೆ ತಂದು ಗ್ರಾಮಸ್ಥರಿಗೆ ಶುದ್ಧ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಿಕೊಡಬೇಕೆಂದು ವಿನಂತಿಸಿದರು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಪ್ರಭು ಶಿರಗಿರೆ, ಪ್ರದೀಪ ಪಾಟೀಲ್, ಪ್ರಭು ಬೆಣ್ಣೆ, ಅನಿಲ ಬೀರಗೆ, ಸಂದೀಪ ಬಿರಾದಾರ ಸೇರಿದಂತೆ ಹಲವು ಗ್ರಾಮಸ್ಥರು ಉಪಸ್ಥಿತರಿದ್ದು ಸಂಸದರಿಗೆ ಮನವಿ ಪತ್ರ ಹಸ್ತಾಂತರಿಸಿದರು. ಗ್ರಾಮೀಣ ಭಾಗದ ಜನರ ಸಮಸ್ಯೆಗೆ ಸ್ಪಂದಿಸುವುದಾಗಿ ಸಂಸದರು ಭರವಸೆ ನೀಡಿದ್ದಾರೆ.

# ಯೋಗದಿಂದ ಸ್ವಾಸ್ಥ್ಯ, ಸಮೃದ್ಧ ಜೀವನ : ಸುನಿತಾ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಯೋಗ, ವ್ಯಾಯಾಮ, ಪ್ರಾಣಾಯಮಗಳಿಂದ ಸ್ವಾಸ್ಥ್ಯ ಹಾಗು ಸಮೃದ್ಧ ಜೀವನ ಸಾಧ್ಯವಾಗುತ್ತದೆ ಎಂದು ವಿಶ್ವಹಿಂದೂ ಪರಿಷತ್ ಮಾತೃಶಕ್ತಿಯ ಮುಖಂಡೆ ಸುನಿತಾ ಮೀನಕೇರೆ ಅಭಿಪ್ರಾಯವ್ಯಕ್ತಪಡಿಸಿದರು.

ಪಟ್ಟಣದ ಅಥರ್ವ ಪೂರ್ವಪ್ರಾಥಮಿಕಶಾಲೆಯಲ್ಲಿ ಪುಟಾಣಿ ಮಕ್ಕಳೊಂದಿಗೆ ಶನಿವಾರ ನಡೆದ ಅಂತರರಾಷ್ಟ್ರೀಯ ಯೋಗದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಯೋಗದಲ್ಲಿ ಭಾರತ ಜಗತ್ತಿಗೇ ವಿಶ್ವಗುರುವಾಗಿದೆ. ಭಾರತೀಯ ಯೋಗ ಪದ್ಧತಿ ಜಗತ್ತಿನ ಎಲ್ಲಾ ರಾಷ್ಟ್ರಗಳು ಒಪ್ಪಿ, ಅಪ್ಪಿಕೊಂಡಿವೆ. ಪ್ರತಿನಿತ್ಯ ಯೋಗ, ವ್ಯಾಯಾಮ, ಆಸನಗಳನ್ನು ಮಾಡುವುದರಿಂದ ಸ್ವಸ್ಥ್ಯ ಮತ್ತು ಸುಂದರ ಜೀವನ ಸಾಗಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅಥರ್ವ ಪೂರ್ವ ಪ್ರಾಥಮಿಕ ಶಾಲೆಯ ಮುಖ್ಯಸ್ಥೆ ಶೃತಿ ಬಸವರಾಜ ಬಿರಾದಾರ, ಪುಟಾಣಿ ಮಕ್ಕಳಲ್ಲಿ ಆರೋಗ್ಯಕರ ಗುಣ ಬೆಳೆಸುವುದೇ ನಮ್ಮೆಲ್ಲರೂ ಮೂಲ ಉದ್ದೇಶವಾಗಿದೆ. ಈ ನಿಟ್ಟಿನಲ್ಲಿ ಪ್ರತಿ ವರ್ಷ ನಮ್ಮ ಪೂರ್ವ ಪ್ರಾಥಮಿಕ ಶಾಲೆಯಲ್ಲಿ ಯೋಗ ದಿನ ಆಚರಿಸುತ್ತೇವೆ. ಇದರಿಂದ ಪುಟಾಣಿ ಮಕ್ಕಳಲ್ಲಿಯೂ ಯೋಗ, ಆಸನಗಳನ್ನು ನಿರ್ವಹಿಸುವ ಗುಣ ಬೆಳೆಯುತ್ತದೆ ಎಂದು ಹೇಳಿದರು.

ನಿವೃತ್ತ ಮುಖ್ಯ ಶಿಕ್ಷಕ ಜಯರಾಜ ದಾಬಶೆಟ್ಟಿ ಯೋಗದಿನಾಚರಣೆಯ ಬಗ್ಗೆ ವಿಶೇಷ ಉಪನ್ಯಾಸ ಮಂಡಿಸಿದರು. ಇದೇವೇಳೆ ಪುಟಾಣಿ ಮಕ್ಕಳೊಂದಿಗೆ ಅಥಿತಿಗಳು ಮತ್ತು ಗಣ್ಯರು ಯೋಗಾಭ್ಯಾಸ ನಡೆಸಿಕೊಟ್ಟರು.

ಕಾರ್ಯಕ್ರಮದಲ್ಲಿ ಪ್ರಮುಖರಾದ ದೀಪಕ ಥಮಕೆ, ಶುಭಾಂಗಿ ಚನ್ನಬಸವಣ್ಣ ಬಳತೆ, ಡಾ। ಕವಿತಾ ನಿತಿನ ಪಾಟೀಲ ಉಪಸ್ಥಿತರಿದ್ದರು. ಮಾಣಿಕೇಶ್ವರಿ ಸ್ವಾಗತಿಸಿದರು. ದೀಪಿಕಾ ಬಿರಾದಾರ ನಿರೂಪಿಸಿದರು.



ಬಸವನಬಾಗೇವಾಡಿ: ಸಮೀಪದ ಸರಕಾರಿ ಆದರ್ಶ ವಿದ್ಯಾಲಯದಲ್ಲಿ ಯೋಗ ದಿನ ಹಿನ್ನೆಲೆಯಲ್ಲಿ ಮುನ್ನಾ ದಿನವಾದ ಶನಿವಾರ ಶಾಲಾ ಆವರಣದಲ್ಲಿ ಯೋಗ ಗುರುಗಳ ಮೂಲಕ ಮಕ್ಕಳಿಗೆ ಯೋಗದ ಮಹತ್ವ ಹಾಗೂ ವಿವಿಧ ಆಸನಗಳ ಪರಿಚಯ ನೀಡಲಾಯಿತು.

# ಕಿಶೋರಿ ಕೇಂದ್ರಕ್ಕೆ ಸತ್ಯ ನಾರಾಯಣ: ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 20 : ರಾಯಚೂರು ನಗರದ ರೈಲ್ವೇ ಸ್ಟೇಷನ್ ರಸ್ತೆಯ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ಪ್ರಾರಂಭಿಸಲಾದ ಕಿಶೋರಿ ಕೇಂದ್ರಕ್ಕೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಸತ್ಯನಾರಾಯಣ ಶೆಟ್ಟಿ ಅವರು ಗುರುವಾರ ಭೇಟಿ ಪರಿಶೀಲಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ಕಿಶೋರಿಯರಿಯರೊಂದಿಗೆ ಮಕ್ಕಳ ಹಕ್ಕುಗಳ ಕುರಿತು ಚರ್ಚೆ ಮಾಡಿದರು. ಕಿಶೋರಿ ಕೇಂದ್ರ ಉತ್ತಮ ಯೋಜನೆಯಾಗಿದ್ದು, ಇದರ ಸದುಪಯೋಗಪಡಿಸಿಕೊಳ್ಳಬೇಕೆಂದು ವಿದ್ಯಾರ್ಥಿನಿಯರಿಗೆ ಸಲಹೆ ನೀಡಿದರು.

# ತೋಟಗಾರಿಕೆ ಇಲಾಖೆಯ ವಿವಿಧ ಯೋಜನೆಗಳಡಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಯಲಬುರ್ಗಾ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿ ವತಿಯಿಂದ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ವಿವಿಧ ಯೋಜನೆಗಳಡಿ ಅರ್ಜಿ ಆಹ್ವಾನಿಸಲಾಗಿದೆ.

2026-27ನೇ ಸಾಲಿಗೆ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಹೊಸ ಪ್ರದೇಶ ವಿಸ್ತರಣೆ, ಸಂರಕ್ಷಿತ ಬೇಸಾಯ, ನೀರು ಸಂಗ್ರಹಣಾ ಘಟಕ, ಕೊಯ್ಲೋತ್ತರ ನಿರ್ವಹಣೆ, ಯಾಂತ್ರೀಕರಣ ಮತ್ತು ಆರ್.ಕೆ.ವಿ.ವೈ ಯೋಜನೆಯಡಿ, ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಸೂಕ್ಷ್ಮ ಹನಿ ನೀರಾವರಿ ಘಟಕ ಅಳವಡಿಸಿಕೊಳ್ಳಲು ಇಚ್ಛಿಸುವ ರೈತರು ಮತ್ತು ಸೋಲಾರ ಪಂಪ್‌ಸೆಟ್, ಯಾಂತ್ರೀಕರಣ, ಡಿ.ಸಿ.ಸಿ.ಡಿ ವತಿಯಿಂದ ಗೋಡಂಬಿ ಪ್ರದೇಶ ವಿಸ್ತರಣೆ ಮಾಡಲು ಅಳವಡಿಸಿಕೊಳ್ಳುವ ರೈತರು ಇಲಾಖಾ ಮಾರ್ಗಸೂಚಿಯ ಪ್ರಕಾರ ಅರ್ಜಿ ಸಲ್ಲಿಸಲು ಕೋರಲಾಗಿದೆ. ಫಲಾನುಭವಿಯ ಆಯ್ಕೆಯು ಅನುದಾನದ ಲಭ್ಯತೆ ಮತ್ತು ಜೇಷ್ಠತೆ ಆಧಾರದ ಮೇಲೆ ಇಲಾಖೆಯ ಮಾರ್ಗಸೂಚಿಯ ಅನ್ವಯ ಶೇಕಡಾವಾರು ಸಹಾಯಧನ ವಿತರಿಸಲಾಗುವುದು. ಅರ್ಜಿಯನ್ನು ಸಲ್ಲಿಸಲು ಜುಲೈ 5 ಕೊನೆಯ ದಿನಾಂಕವಾಗಿದೆ ಎಂದು ಯಲಬುರ್ಗಾ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಸಕ ರಾಯರೆಡ್ಡಿಗೆ ಸಚಿವ ಸ್ಥಾನ ಸಿಗಲೆಂದು ವಿಶೇಷ ಪೂಜೆ



• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ಪಟ್ಟಣದಲ್ಲಿ ಯಲಬುರ್ಗಾ ಕ್ಷೇತ್ರದ ಶಾಸಕ ಬಸವರಾಜ ರಾಯರೆಡ್ಡಿಯವರಿಗೆ ಡಿ.ಕೆ.ಶಿವಕುಮಾರ ಅವರ ನೇತೃತ್ವದ ಸರ್ಕಾರದಲ್ಲಿ ಸಚಿವ ಸ್ಥಾನ ಸಿಗಲಿ ಎಂದು ಶನಿವಾರ ಪಟ್ಟಣದ ಗುದ್ನೆಪ್ಪ ಮಠದ ರುದ್ರ ಮುನೇಶ್ವರ ಹಾಗೂ ಮಹಾಮಾಯಾ ದೇವಸ್ಥಾನ ಹಾಗೂ ಮಸೀದಿಯಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ವಿಶೇಷ ಪೂಜೆ ಸಲ್ಲಿಸಿದರು. ದೇವಸ್ಥಾನದಲ್ಲಿ ಬೆಳಿಗ್ಗೆ ವಿಶೇಷ ಪೂಜೆ ಪುನಸ್ಕಾರ ಸಲ್ಲಿಸಿ, ಹಾಗೂ ಜಾಮಿಯಾ ಮಜೀದ್ ನಲ್ಲಿ ದುವಾ ಸಲ್ಲಿಸುವ ಮುಖಾಂತರ ಎರಡನೇ ಹಂತದ ಸಚಿವ ಸಂಪುಟ ಸಂದರ್ಭದಲ್ಲಿ ಹಿರಿತನವನ್ನು ಗುರ್ತಿಸಿ ಸಚಿವ ಸ್ಥಾನ ಸಿಗುವಂತಾಗಲಿ ಎಂದು ಬೇಡಿಕೊಂಡರು.

ಕಾಂಗ್ರೆಸ್ ಪಕ್ಷದ ವಕ್ತಾರ ಸಂಗಮೇಶ ಗುತ್ತಿ ಮಾತನಾಡಿ, ರಾಜ್ಯದಲ್ಲಿ ಅಭಿವೃದ್ಧಿ ಕೆಲಸಗಳನ್ನು ಮಾಡುವುದರಲ್ಲಿ ನಂ1 ಸ್ಥಾನದಲ್ಲಿರುವ ಬಸವರಾಜ್ ರಾಯರೆಡ್ಡಿ ಅವರು ಆರು ಭಾರಿ ಶಾಸಕರಾಗಿ, ಎರಡು ಭಾರಿ ಸಚಿವರಾಗಿ, ಒಮ್ಮೆ ಸಂಸದರಾಗಿ, ದೆಹಲಿ ವಿಶೇಷ ಪ್ರತಿನಿಧಿಯಾಗಿ, ಸಿಎಂ ಆರ್ಥಿಕ ಸಲಹೆಗಾರರಾಗಿ ಸೇವೆ ಸಲ್ಲಿಸುವ ಮೂಲಕ ಯಲಬುರ್ಗಾ ವಿಧಾನಸಭಾ ಕ್ಷೇತ್ರದಲ್ಲಿ ಹತ್ತು ಹಲವಾರು ಜನಪರ ಅಭಿವೃದ್ದಿಪರ ಕೆಲಸಗಳನ್ನು ಮಾಡಿರುವ ಕೀರ್ತಿ ಸಲ್ಲುತ್ತದೆ. ಇವರ ಹಿರಿತನವನ್ನು ಗುರ್ತಿಸಿಸುವ ಮೂಲಕ ಸಿಎಂ ಡಿ.ಕೆ.ಶಿವಕುಮಾರ ಅವರ ನೇತೃತ್ವದ ಸರ್ಕಾರದಲ್ಲಿ ಹಣಕಾಸು ಅಥವಾ ಉನ್ನತ ಶಿಕ್ಷಣ ಸಚಿವ ಸ್ಥಾನವನ್ನು ನೀಡಬೇಕು , ಯಲಬುರ್ಗಾ ವಿಧಾನ ಸಭಾ ಕ್ಷೇತ್ರದಲ್ಲಿ ಶೈಕ್ಷಣಿಕ ಕ್ರಾಂತಿ ಮಾಡುವ ಮೂಲಕ ಎಲ್‌ಕೆಜಿಯಿಂದ ಪಿಜಿಯವರೆಗೂ ಶಿಕ್ಷಣ ಕ್ಷೇತ್ರದಲ್ಲಿ ಸಾಕಷ್ಟು ಬದಲಾವಣೆ ತರುವ ಮೂಲಕ ಈ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಿದ್ದಾರೆ ಎಂದು ಹೇಳಿದ್ದರು.

ಮುಖಂಡರಾದ ಸತ್ಯನಾರಾಯಣಪ್ಪ ಹರಪನಹಳ್ಳಿ ಮಾತನಾಡಿ, ವಿಧಾನಸಭಾ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ದಿಪರ ಕೆಲಸಗಳನ್ನು ಮಾಡುವ ಮೂಲಕ ಇಡೀ ರಾಜ್ಯದಲ್ಲಿ ಮಾದರಿ ಕ್ಷೇತ್ರವನ್ನಾಗಿ ಗುರ್ತಿಸಿರುವ ಕ್ಷೇತ್ರದ ಶಾಸಕ ಬಸವರಾಜ ರಾಯ- ರೆಡ್ಡಿ ಮಾಡಿದ್ದಾರೆ. ಸಚಿವ ಸ್ಥಾನ ಸಿಗುತ್ತದೆ ಎಂಬ ಅಭಿಪ್ರಾಯವನ್ನು ವ್ಯಕ್ತಪಡಿಸಿದರು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಖಾಸಿಂಸಾಬ್ ತಳಕಲ್, ಮನುನಾಥ್ ಕಡೆಮನಿ, ರೈಮನ್ ಸಾಬ್ ಮಕಪ್ಪನವರ್ , ಸಿರಾಜ್ ಕರುಮುಡಿ, ಗಗನ ನೋಟಗಾರ, ಮೇಘರಾಜ ಬಳಗೇರಿ, ಯಮರುಪ್ಪ ಕಟ್ಟಿಮನಿ, ವೀರಯ್ಯ ತೋಂಟದಾರ್ ಮಠ, ವೀರಯ್ಯ ಹೀನಮ್ ದಾರ, ಹನುಮಂತಪ್ಪ ಉಪ್ಪಾರ್, ನಿಂಗಪ್ಪ ಗೊರಲೆಕೊಪ್ಪ, ರಶೀದ್ ಮುಬಾರಕ್ , ಮಂಜು ಎಡೆಯಾಪುರ್ , ಡಾ. ಜಂಬಣ್ಣ ಅಂಗಡಿ, ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು.

ಪಟ್ಟಣ ಪಂಚಾಯತ ಅಧ್ಯಕ್ಷ ಉಪಾಧ್ಯಕ್ಷರು ಕಾರ್ಯಕರ್ತರು ಪಾಲ್ಗೊಂಡಿದ್ದರು.

# ತೋಟಗಾರಿಕೆ ಮಹಾವಿದ್ಯಾಲಯದಲ್ಲಿ ವಿಶ್ವ ರಕ್ತದಾನಿಗಳ ದಿನಾಚರಣೆ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ ಕೊಪ್ಪಳ ಹಾಗೂ ತೋಟಗಾರಿಕೆ ಮಹಾವಿದ್ಯಾಲಯ ಮುನಿರಾಬಾದ್, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಎನ್.ಎಸ್.ಎಸ್ ಘಟಕ, ರೆಡ್ ರಿಬ್ಬನ್ ಕ್ಲಬ್ ಕೊಪ್ಪಳ ಇವರುಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ರಕ್ತದಾನಿಗಳ ದಿನಾಚರಣೆ-2026ರ ಕಾರ್ಯಕ್ರಮವನ್ನು ಮುನಿರಾಬಾದ್ ತೋಟಗಾರಿಕೆ ಮಹಾವಿದ್ಯಾಲಯದಲ್ಲಿ ಆಚರಿಸಲಾಯಿತು.

ಮೊದಲಿಗೆ ಮೊಬೈಲೈಶೇಷನ್ ಫಾರ್ ಏಡ್ಸ್ ಸುರಕ್ಷಾದ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸಲಾಯಿತು ಹಾಗೂ ಮೊಬೈಲೈಶೇಷನ್ ಫಾರ್ ಏಡ್ಸ್ ಸುರಕ್ಷಾದ ಕ್ಯೂ.ಆರ್ ಕೋಡ್ ಹಾಗೂ ಸ್ವಯಂ ಪ್ರೇರಿತ ರಕ್ತದಾನದ ಶಿಬಿರಕ್ಕೆ ಮುನಿರಾಬಾದ್ ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ. ಜಿ.ಪ್ರಭುಲಿಂಗ ಅವರು ಚಾಲನೆ ನೀಡಿದರು.

ಕೊಪ್ಪಳ ಜಿಲ್ಲಾ ಏಡ್ಸ್ ನಿಯಂತ್ರಣ ಅಧಿಕಾರಿಗಳಾದ ಡಾ. ಎ.ಶಶಿಧರ ಅವರು ವೇದಿಕೆ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿದರು. ಬಳಿಕ ಮಾತನಾಡಿ, ರಕ್ತದಾನದ ಮಹತ್ವ, ಜೊತೆಗೆ ಮೂರು ಜನರಿಗೆ ಉಪಯೋಗದ ಬಗ್ಗೆ ಹೋಲ್ ಬ್ಲಡ್, ಪ್ಲಾಸ್ಮಾ ಹಾಗೂ ಪ್ಲೇಟ್ಲೇಟ್, ರಕ್ತ ದಾನದ ನಂತರ ಹೆಚ್ ಐವಿ ಸಿಫಿಲಿಸ್ ಹೆಬಟೈಟಿಸ್ ಬಿ ಕುರಿತು ಮಾಹಿತಿ ನೀಡಿದರು.

ಕಮ್ಯುನಿಕೇಷನ್ ಡಿಸೀಜ್ ಹಾಗೂ ನಾನ್ ಕಮ್ಯುನಿಕೇಷನ್ ಡಿಸೀಜ್ ಕುರಿತು ವಿವರವಾಗಿ ತಿಳಿಸಿ, ಸಾಮಾಜಿಕ ಜಾಲತಾಣಗಳ ಹೆಚ್ಚು ಬಳಕೆಯಿಂದ ಹೆಚ್.ಐವಿ, ಕ್ಯಾನ್ಸರ್, ಮಧುಮೇಹ ಮತ್ತು ಬಿಪಿ ಸ್ಟ್ರೋಕ್ ಜೊತೆಗೆ ಡ್ರಗ್ಸ್ ಹವ್ಯಾಸ ಕಾಲೇಜು ವಿದ್ಯಾರ್ಥಿಗಳಲ್ಲಿ ಹೆಚ್ಚುತ್ತಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದರು. ಕಾರ್ಯಕ್ರಮದ ಘನ ಅಧ್ಯಕ್ಷತೆಯನ್ನು ಮುನಿರಾಬಾದ್ ತೋಟಗಾರಿಕೆ ಮಹಾವಿದ್ಯಾಲಯದ ಸಹ ಪ್ರಾಧ್ಯಾಪಕರಾದ ಮೌಲಸಾಬ ಅವರು ವಹಿಸಿಕೊಂಡಿದ್ದರು.

ರಕ್ತದಾನ ಶಿಬಿರದಲ್ಲಿ ಒಟ್ಟು 31 ಯೂನಿಟ್ಗಳನ್ನು ಸಂಗ್ರಹಿಸಲಾಯಿತು ಅದೇ ಕಅಲೇಜಿನ ಡಾ.ಅರುಣಕುಮಾರ ಕೆ.ಟಿ ಸಹ ಪ್ರಾದ್ಯಾಪಕರು ಅತಿ ಹೆಚ್ಚು 16 ಬಾರಿ ರಕ್ತದಾನ ಮಾಡಿರುವ ಪ್ರಯುಕ್ತ ಹಾಗೂ ಅತಿ ಹೆಚ್ಚು ಬಾರಿ ರಕ್ತದಾನ ಮಾಡಿರುವ ದಾನಿಗಳನ್ನು ಗೌರವಿಸಲಾಯಿತು. ಇದೇ ವಿಶ್ವ ರಕ್ತದಾನಿಗಳ ದಿನದ ಅಂಗವಾಗಿ ಪ್ರತಿಜ್ಞಾ ವಿಧಿ ಸ್ವೀಕರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ ಜಿಲ್ಲಾ ಮೇಲ್ವಿಚಾರಕರಾದ ಮಾಲತೇಶ ಸಜ್ಜನ, ಆಪ್ತಸಮಾಲೋಚರಾದ ಚಿದಾನಂದ ಇಂಡಿ ಸಹ ಪ್ರಾದ್ಯಾಪಕರಾದ ಡಾ. ಅರುಣಕುಮಾರ ಕೆ.ಟಿ. ಹಾಗೂ ಡಾ ಶಶಿಧರ ಚವ್ಹಾಣ, ವೈದ್ಯಾದಿಕಾರಿಗಳಾದ ಡಾ ಮಂಜುನಾಥ ದಿನ್ನಿ, ಡಾ ಕೃಷ್ಣ ಯಾದವ್ ಸೇರಿದಂತೆ ಎನ್. ಎಸ್.ಎಸ್ ಪ್ರೊಗ್ರಾಮ ಆಫೀಸರ್, ದೈಹಿಕ ಶಿಕ್ಷಕರು, ಯುಥ್ ರೆಡ್ ಕ್ರಾಸ್ ಯುನಿಟ್ ಕೋಆರ್ಡಿನೇಟರ್ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಯೋಗದಿಂದ ರೋಗ ಬರುವುದಿಲ್ಲ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ನಗರದ ಡಿ ದೇವರಾಜ ಅರಸ್ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆ (ಕನ್ನಡ ಮಾಧ್ಯಮ) ಯಾದಗಿರಿಯಲ್ಲಿ ನಾಳೆ ರವಿವಾರ ಇರುವ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಶಾಲೆಯಲ್ಲಿ ವಿವಿಧ ಆಸನಗಳನ್ನು ಮಾಡುವುದರ ಮೂಲಕ ಯೋಗ ದಿನವನ್ನು ಆಚರಿಸಲಾಯಿತು. ದೈಹಿಕ ಶಿಕ್ಷಕರ ಹೇಳಿಕೆಯಂತೆ ಶಾಲಾ ಮಕ್ಕಳು ಮತ್ತು ಶಿಕ್ಷಕರು ಯೋಗದಲ್ಲಿ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಡಿಡಿಯು ಕನ್ನಡ ಮಾಧ್ಯಮ ಶಾಲೆಯ ಮುಖ್ಯಶಿಕ್ಷಕರಾದ ವೆಂಕಟೇಶ ಪೂಜಾರಿ ಶಿಕ್ಷಕರಾದ ಕವಿತಾ ಪಾಟೀಲ್, ಹುಚ್ಚಪ್ಪ ದೇವರಗೋನಾಲ, ಪ್ರಭುಮೈಲಾರಿ, ನಸರೀನ್ ಬೇಗಂ, ಈರಮ್ಮ, ಎಚ್ ಪಿ ವಂದನಾ, ಶಕುಂತಲಾ, ಮಹಮ್ಮದ್ ಸೌದಾಗರ, ಹಾಗೂ ಮುದ್ದು ಮಕ್ಕಳು ಮತ್ತು ಯಲ್ಲಮ್ಮ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ರೈತರ ಸಮಸ್ಯೆಗಳ ನಿವಾರಣೆಗೆ ಸೂಕ್ತ ಕ್ರಮ: ಪಾಂಡ್ವೆ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜೂ:20: ಜಿಲ್ಲೆಯ ರೈತರ ತುರ್ತು ಸಮಸ್ಯೆಗಳ ನಿವಾರಣೆಗೆ ವಿಶೇಷ ಗಮನ ಹಾಗೂ ಇತರೆ ಸರ್ಕಾರದ ಹಂತದಲ್ಲಿನ ಸಮಸ್ಯೆಗಳ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಗುವುದು ಎಂದು ಜಿಲ್ಲಾಧಿಕಾರಿ ಶ್ರೀ ರಾಹುಲ್ ತುಕಾರಾಮ ಪಾಂಡ್ವೆ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ

ಇಂದು ರೈತರ ಸಮಸ್ಯೆಗಳ ನಿವಾರಣೆ ಕುರಿತಂತೆ ಚರ್ಚಿಸಲು ಕರೆಯಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ವಿವಿಧ ರೈತಪರ ಸಂಘಟನೆ ಗಳಿಂದ ಇಂದು ಕುಂದುಕೊರತೆ ಅಹವಾಲು ಸ್ವೀಕರಿಸಲಾಗಿದೆ. ಎಲ್ಲ ಸಮಸ್ಯೆಗಳ ಬಗ್ಗೆ ಗಮನಿಸಲಾಗಿದ್ದು, ತುರ್ತಾಗಿ ಕೈಗೊಳ್ಳಬೇಕಾದ ಕ್ರಮಗಳ ನಿವಾರಣೆಗೆ ಅವಶ್ಯಕ ಕ್ರಮ ಕೈಗೊಳ್ಳಲಾಗುವುದೆಂದು ಅವರು ತಿಳಿಸಿದರು.

ಕೃಷಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿನ ಕುಂದುಕೊರತೆಗಳನ್ನು ಆಯಾ ಇಲಾಖೆಗಳ ಅಧಿಕಾರಿಗಳಿಗೆ ಸೂಚಿಸಿ ನಿವಾರಿಸಲಾಗುವುದು. ಸರ್ಕಾರದ ಹಂತದಲ್ಲಿ ಆಗಬೇಕಾದ ಕ್ರಮಗಳ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಗುವುದು.ತುರ್ತು ಸಮಸ್ಯೆಗಳ ಬಗ್ಗೆಯೂ ಗಮನ ನೀಡಲಾಗುವದೆಂದ ಅವರು ಎಲ್ಲ ರೈತರು ಸಹಕಾರ ದಿಂದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಲಾಗುವದೆಂದು ತಿಳಿಸಿದರು.

ಸಭೆಯಲ್ಲಿ ಮಾತನಾಡಿದ ಜಂಟಿ ಕೃಷಿ ನಿರ್ದೇಶಕರಾದ ಶ್ರೀ ರತೇಂದ್ರನಾಥ ಸುಗೂರ್ ಅವರು, ಮಧ್ಯಪ್ರಾಚ್ಯ ಯುದ್ದದಿಂದಾಗಿ ರಸಗೊಬ್ಬರಕ್ಕೆ ಬೇಕಾದ ಸಾಮಗ್ರಿಗಳ, ರಸಗೊಬ್ಬರಗಳ ಕೊರತೆ–ಯಾಗಿದೆ. ದಾಸ್ತಾನು ಅನ್ವಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಪ್ರತಿದಿನದ ರಸಗೊಬ್ಬರ ಸ್ಟಾಕ್ ಬಗ್ಗೆ ಮಾಹಿತಿ ಫಲಕ ಅಳವಡಿಸಲು ಸಂಬಂಧಪಟ್ಟ ಕೃಷಿ ಮತ್ತು ಸಹಾಯಕ ಕೃಷಿ ಅಧಿಕಾರಿಗಳಿಗೆ ಸೂಚಿಸಲಾಗುವುದು. ಸರ್ಕಾರದ ಹಂತದಲ್ಲಿನ ಸಮಸ್ಯೆಗಳ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು. ರಸಗೊಬ್ಬರಕ್ಕೆ ಸಂಬಂಧಿಸಿದಂತೆ ಯಾವುದೇ ಡೀಲರ್ಗಳ ಅಥವಾ ಮಾಲೀಕರಿಂದ ಲಿಂಕನ್ನು ರೈತರು ಪಡೆಯಬಾರದು ಎಂದು ತಿಳಿಸಿದರು.

ಸಭೆಯಲ್ಲಿ ರೈತಪರ ಸಂಘಟನೆಗಳ ಮುಖಂಡರಾದ ಕಾಂತು ಪಾಟೀಲ್,ಶಾಂತು ಮಂದಾರವಾಡ,ಮಲ್ಲಣಗೌಡರ ಹಗರಟಗಿ,ಮಹಾವೀರ ಲಿಂಗೇರಿ,ಚನ್ನಪ್ಪ ಆನೆಗುಂದಿ,ರಾಜುಗೌಡ ಚಾಮ್ನಳ್ಳಿ, ಮಹಾದೇವಪ್ಪ ಕಡಕಲ್, ಅವರುನಕಲಿ ಬೀಜ, ರಸಗೊಬ್ಬರ ಮಾರಾಟಗಾರರ ಮೇಲೆ ಕ್ರಿಮಿನಲ್ ಪ್ರಕರಣ ದಾಖಲು , ರಸಗೊಬ್ಬರಗಳ ಸಮಾನ ಹಂಚಿಕೆ, ಕೆಬಿಜೆ ಎನ್ ಎಲ್ ಸಲಹಾ ಸಮಿತಿಗೆ ಜಿಲ್ಲೆಯಿಂದ ರೈತ ಸಂಘಟನೆಗಳ ತಲಾ ಒಬ್ಬ ರೈತರನ್ನು ಸದಸ್ಯರಾಗಿ ನಿಯೋಜನೆಗೆ ಕ್ರಮ, ಕುಡಿಯುವ ನೀರು ಹಾಗೂ ಸ್ವಚ್ಛತೆಯಲ್ಲಿ ನಿರ್ಲಕ್ಷ್ಯ ಗ್ರಾಮ ಪಂ.ಪಿಡಿಓ ಗಳ ಮೇಲೆ ಕ್ರಮ,ಕಳೆದ ವರ್ಷ ಆದ ಅತಿವೃಷ್ಟಿ ಪರಿಹಾರ ನೀಡಲು, ಕೆರೆ ಒತ್ತುವರಿ ತೆರವು, ಕಬ್ಬಿನ ಬಾಕಿ ಬಿಲ್ ಪಾವತಿ,

ಇತರೆ ಸಮಸ್ಯೆ ಗಳ ಬಗ್ಗೆ ಜಿಲ್ಲಾಧಿಕಾರಿ ಗಳ ಗಮನಕ್ಕೆ ತಂದರು.

# ಸಾಮರಸ್ಯದಿಂದ ಮಾತ್ರ ಸಧೃಢ ಸಮಾಜ ನಿರ್ಮಾಣ ಸಾಧ್ಯ:ನಿಜಲಿಂಗಪ್ಪ ತಾತಾ

• ಮಲ್ಲಮ್ಮ ನುಡಿ ವಾರ್ತೆವಡಗೇರಾ

ಕಲ್ಯಾಣ ಕರ್ನಾಟಕ ಶರಣರ, ಸೂಫಿ–ಸಂತರ ನಾಡು,ಇಲ್ಲಿ ಎಲ್ಲಾ ವರ್ಗದ ಜನರು ಸಹಬಾಳ್ವೆಯಿಂದ ಕೂಡಿ ಜೀವನ ಸಾಗಿಸುತ್ತಿದ್ದಾರೆ, ಆದರೆ ಕೆಲವು ಪಟ್ಟಭದ್ರಶಕ್ತಿಗಳು ಸುಳ್ಳು ಸಂದೇಶಗಳನ್ನು ಹರಡುವ ಮೂಲಕ ಸಮಾಜದ ಸಾಮರಸ್ಯ ಹಾಳು ಮಾಡಲು ಯತ್ನಿಸುತ್ತಿದ್ದಾರೆ, ಕಾರಣ ಜನರು ಎಚ್ಚೆತ್ತು–ಕೊಂಡು ಶಾಂತಿ, ಸಾಮರಸ್ಯದೊಂದಿಗೆ ಬಾಳುವ ಮೂಲಕ ಸಧೃಢ ಸಮಾಜ ನಿರ್ಮಾಣಕ್ಕೆ ಗಮನ ಹರಿಸಬೇಕೆಂದು ದೇವರ ಗುಂಡಗುರ್ತಿಯ ಶ್ರೀ ಮೈಲಾರಲಿಂಗೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಶ್ರೀ ನಿಜಲಿಂಗಪ್ಪ ತಾತಾ ನುಡಿದರು.ವಡಗೇರಾ ತಾಲ್ಲೂಕಿನ ಚೆನ್ನೂರ.ಜೆ ಗ್ರಾಮದಲ್ಲಿ ನೂತನವಾಗಿ ನಿರ್ಮಾಣ ಮಾಡಿರುವ ಮುಸ್ಲಿಂ ಸಮಾಜದ ನೂತನ ಮಸೀದಿ ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿದ ಅವರು,ಈ ಗ್ರಾಮದಲ್ಲಿ ಎಲ್ಲರೂ ಒಗ್ಗಟ್ಟಾಗಿ ಸೇರಿ ಮೊಹರಂ ಹಬ್ಬವನ್ನು ಸಂಭ್ರಮದಿಂದ ಆಚರಿಸುವ ಮೂಲಕ ಎಲ್ಲರೂ ಒಂದೇ ಎಂಬ ಸಂದೇಶ ನೀಡಿರುವುದು ಇತರರಿಗೆ ಮಾದರಿಯಾಗಿದೆ ಎಂದು ಹೇಳಿದರು.



ಎಲ್ಲಾ ವರ್ಗದ ಜನರು ಆಧ್ಯಾತ್ಮಿಕತೆಗೆ ನೀಡಿದಷ್ಟು ಆದ್ಯತೆ, ಶಿಕ್ಷಣಕ್ಕೆ ನೀಡಿ, ತಮ್ಮ ಎಲ್ಲಾ ಮಕ್ಕಳಿಗೆ ತಪ್ಪದೇ ಶಿಕ್ಷಣ ಒದಗಿಸಿ ಅದರಿಂದ ಮಾತ್ರ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು ಎಂದು ತಿಳಿಸಿದರು.

ಸಮಾರಂಭದಲ್ಲಿ ಜಿ.ಪಂ ಮಾಜಿ ಸದಸ್ಯ ಶ್ರೀನಿವಾಸರಡ್ಡಿ ಪಾಟೀಲ್ ಚೆನ್ನೂರ ಮಾತನಾಡಿ,ಎಲ್ಲಾ ಧರ್ಮಗಳು ಶಾಂತಿ, ಸಹಬಾಳ್ವೆ, ಮಾನವೀಯ ಸಂದೇಶಗಳನ್ನು ನೀಡಿವೆ, ನಮ್ಮ ಭಾಗದಲ್ಲಿ ಎಲ್ಲಾ ವರ್ಗದ ಜನರು ಶಾಂತಿ ಪ್ರೀಯರು, ಕೃಷಿಯನ್ನೆ ಅವಲಂಭಿಸಿ ಅವರವರ ಗ್ರಾಮಗಳಲ್ಲಿ ನಡೆಯುವ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಎಲ್ಲರೂ ಒಗ್ಗಟ್ಟಾಗಿ ಪಾಲ್ಗೋಳ್ಳುವ ಮೂಲಕ ನಡೆದುಕೊಂಡು ಬಂದಿದ್ದಾರೆ, ಅದು ಮುಂದೇಯೂ ಮುಂದುವರೆಯಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.ಈ

ಕಾರ್ಯಕ್ರಮದಲ್ಲಿ ಮೌಲಾಸಾಬ್, ಸುಗೂ–ರೆಡ್ಡಿ ಪೊಲೀಸ್ ಪಾಟೀಲ್, ಶಿವಣ್ಣ ಪೂಜಾರಿ, ಬಸವರಾಜ ಪಾಟೀಲ್, ನಿಂಗಣ್ಣ ದಿನ್ನಿ, ಮರಿಗೌಡ ಬಸಪ್ಪ ಪೂಜಾರಿ ಶರಣಪ್ಪ ದಾಳಿ, ದೇವಪ್ಪ ಅಂಬಿಗೇರ,ಮರೆಪ್ಪ ಮಡಿವಾಳ ಸೇರಿದಂತೆ ಚೆನ್ನೂರ, ಗೊಂದೆನೂರ, ಕೊಂಕಲ್ ಹಾಗೂ ಇನ್ನಿತರ ಗ್ರಾಮದ ಜನರು ಭಾಗವಹಿಸಿದ್ದರು.

# ಖಾಯಂ ಜನತಾ ನ್ಯಾಯಾಲಯ ಕುರಿತು ಕಾನೂನು ಅರಿವು ಮತ್ತು ನೆರವು

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಜೂ 20: ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಯಾದಗಿರಿ ವತಿಯಿಂದ ವಡಗೇರಾ ತಾಲೂಕಿನ ಬಿಳ್ಹಾರ್ ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ಖಾಯಂ ಜನತಾ ನ್ಯಾಯಾಲಯ (ಕಜಡಿಟಚಿಟಿಜಟಿಣ ಐಛಿಇ ಂಜಚಿಟಚಿಣ) ಕುರಿತು ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಿಳ್ಹಾರ್ ಗ್ರಾಮ ಪಂಚಾಯಿತಿಯ ಅಧ್ಯಕ್ಷ ನಾಗಪ್ಪ ಅವರು ವಹಿಸಿದ್ದರು. ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ ಪರಶುರಾಮ ಜಿ. ರಾಮನಹಳ್ಳಿ ಅವರು ಖಾಯಂ ಜನತಾ ನ್ಯಾಯಾಲಯದ ಉದ್ದೇಶ, ಕಾರ್ಯವೈಖರಿ ಹಾಗೂ ಸಾರ್ವಜನಿಕರಿಗೆ ದೊರೆಯುವ ಅನುಕೂಲಗಳ ಕುರಿತು ಸವಿಸ್ತಾರವಾಗಿ ಮಾಹಿತಿ ನೀಡಿದರು. ಸಾರ್ವಜನಿಕ ಉಪಯುಕ್ತ ಸೇವೆಗಳಿಗೆ ಸಂಬಂಧಿಸಿದ ವಿವಾದಗಳನ್ನು ನ್ಯಾಯಾಲಯದ ದೀರ್ಘ ಪ್ರಕ್ರಿಯೆ ಇಲ್ಲದೆ ಸೌಹಾರ್ದಯುತವಾಗಿ ಮತ್ತು ಶೀಘ್ರವಾಗಿ ಇತ್ಯರ್ಥಪಡಿಸಿಕೊಳ್ಳಲು ಖಾಯಂ ಜನತಾ ನ್ಯಾಯಾಲಯವು ಪರಿಣಾಮಕಾರಿ ವೇದಿಕೆಯಾಗಿದೆ ಎಂದು ತಿಳಿಸಿದರು.

ಅಧ್ಯಕ್ಷೀಯ ಭಾಷಣದಲ್ಲಿ ನಾಗಪ್ಪ ಅವರು ಗ್ರಾಮೀಣ ಪ್ರದೇಶದ ಜನರು ಕಾನೂನು ಸೇವೆಗಳ ಸದುಪಯೋಗ ಪಡೆದುಕೊಂಡು ತಮ್ಮ ಸಮಸ್ಯೆಗಳನ್ನು ಕಾನೂನುಬದ್ಧವಾಗಿ ಪರಿಹರಿಸಿಕೊಳ್ಳಬೇಕು ಎಂದು ಕರೆ ನೀಡಿದರು.

# ಸರ್ಕಾರದ ನಿರ್ಲಕ್ಷ್ಯ ಧೋರಣೆ ಖಂಡಿಸಿ ಜು. ೩ರಂದು ದಲಿತ ನ್ಯಾಯಕ್ಕಾಗಿ ಸಮಾವೇಶ

• ಮಲ್ಲಮ್ಮ ನುಡಿ ವಾರ್ತೆ ಸೈದಾಪುರ

ದಲಿತ ಸಮುದಾಯಗಳ ವಿವಿಧ ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರ ಸಮರ್ಪಕವಾಗಿ ಸ್ಪಂದಿಸುತ್ತಿಲ್ಲ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ಜುಲೈ3ರಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ದಲಿತ ನ್ಯಾಯಕ್ಕಾಗಿ ಸಮಾವೇಶ' ಹಾಗೂ ಅನಿರ್ದಿಷ್ಟ ಪ್ರತಿಭಟನಾ ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದು ಡಿಎಸ್ಎಸ್ ತಾಲ್ಲೂಕ ಸಂಚಾಲಕ ಆಂಜನೇಯ ಬಳಿಚಕ್ರ ಅಭಿಪ್ರಾಯಪಟ್ಟರು. ಪಟ್ಟಣದಲ್ಲಿ ಶನಿವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದರು.

ಪರಿಶಿಷ್ಟ ಸಮುದಾಯಗಳ ಹಕ್ಕುಗಳು, ವಿವಿಧ ಬೇಡಿಕೆಗಳ ಈಡೇರಿಕೆ ಹಾಗೂ ಸಮುದಾಯ ಎದುರಿಸುತ್ತಿರುವ ಸಮಸ್ಯೆಗಳ ಪರಿಹಾರಕ್ಕೆ ಒತ್ತಾಯಿಸಿ ಈ ಹೋರಾಟ ನಡೆಸಲಾಗುತ್ತದೆ.

ದಲಿತ ಸಮುದಾಯಗಳ ಬಗ್ಗೆ ಸರ್ಕಾರ ನಿರ್ಲಕ್ಷ್ಯ ಧೋರಣೆ ಅನುಸರಿಸುತ್ತಿದೆ ಕೂಡಲೇ ಸಮಸ್ಯೆಗಳಿಗೆ ಸ್ಪಂದಿಸಿ ನ್ಯಾಯ ಒದಗಿಸಬೇಕು ಎಂದು ಸಂಘಟನೆ ಆಗ್ರಹಿಸುತ್ತಿದೆ.



ಬೆಂಗಳೂರಿನ ಫ್ರೀಡಂ ಪಾರ್ಕ್ ಹಮ್ಮಿಕೊಂಡಿರುವ ಈ ಸಮಾವೇಶದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ದಲಿತ ಸಂಘಟನೆಗಳ ಮುಖಂಡರು, ಕಾರ್ಯಕರ್ತರು ಹಾಗೂ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕರೆ ನೀಡಿದರು.

ಈ ವೇಳೆ ಜಿಲ್ಲಾ ಸಂಘಟನ ಸಂಚಾಲಕ ನಿಂಗಪ್ಪ ಬೀರನಾಳ, ಭೀಮರಾಯ ಕೊಟಗೇರಾ, ಸಂಘಟನಾ ಸಂಚಾಲಕ ಮಲ್ಲು ಸಂಗವಾರ, ಸೈದಾಪುರ ವಲಯಾಧ್ಯಕ್ಷ ಚೆನ್ನಮಲ್ಲಿಕಾರ್ಜುನ ಚೇಗುಂಟಾ, ದೇವಿಂದ್ರಪ್ಪ ಕಲ್ಲಪ್ಪ, ಕೂಡ್ಲೂರು, ಆಂಜಪ್ಪ ಸಂಗವಾರ ಸೇರಿದಂತೆ ಇತರರಿದ್ದರು.

# ಒತ್ತಡ ಬಿಡಿ ಪೌಷ್ಟಿಕಾಹಾರ ಸೇವಿಸಿ ಆರೋಗ್ಯವಾಗಿರಿ

• ಮಲ್ಲಮ್ಮ ನುಡಿ ವಾರ್ತೆವಡಗೇರಾ

ಮನುಷ್ಯ ಹುಟ್ಟಿನ ಮೊದಲು ಯಾವುದೇ ರೋಗವೂ ಕಟ್ಟಿಕೊಂಡು ಬರಲ್ಲ, ಜೀವನದ ಕಷ್ಟ, ಸುಖಗಳ ಮಧ್ಯದಲ್ಲಿ ಕೆಲವು ರೋಗಗಳು ದೇಹಕ್ಕೆ ಸೇರಿ ತೊಂದರೆಗೆ ಒಳಗಾಗುತ್ತಾನೆ, ಅವುಗಳಿಂದ ಒತ್ತಡಕ್ಕೆ ಒಳಗಾಗದೆ ಧೈರ್ಯವಾಗಿ ನಿವಾರಿಸಿಕೊಂಡು ಬದುಕು ಸಾಗಿಸಬೇಕಿದೆ ಎಂದು ಇಓ ಶಶಿಧರ ಹೀರೆಮಠ ರವರು ಹೇಳಿದರು. ತಾಲ್ಲೂಕಿನ ಗುಂಡಗುರ್ತಿ ಗ್ರಾಮ ಪಂಚಾಯತಿಗೆ ಸೇರಿದ ಟೋಕಾಪುರ ಗ್ರಾಮದ ಹೊರವಲಯದಲ್ಲಿ ಗ್ರಾಮ ಪಂಚಾಯತಿ ಹಾಗೂ ಆರೋಗ್ಯ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ನರೇಗಾ ಕೂಲಿ ಕಾರ್ಮಿಕರಿಗಾಗಿ ಏರ್ಪಡಿಸಿದ್ದ ಉಚಿತ ಆರೋಗ್ಯ ತಪಾಸಣೆ ಶಿಬಿರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ನೂರಾರು ಕೂಲಿ ಕಾರ್ಮಿಕರು ದಿನಾಲು ಕೆಲಸ ಮಾಡುತ್ತಿದ್ದು. ಕೆಲಸ ಮಾಡುವ ಕಾರ್ಮಿಕರಿಗೆ ಗ್ರಾಪಂ ವ್ಯಾಪ್ತಿಯಲ್ಲಿ ಸಾಕಷ್ಟು ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದ್ದು, ಅದ್ರಲ್ಲಿ ವಿಶೇಷವಾಗಿ ಕೆಲಸ ಮಾಡುವ ಸ್ಥಳದಲ್ಲಿ ಉಚಿತ ಆರೋಗ್ಯ ಶಿಬಿರ ಗಳು ಆಗಾಗ ಏರ್ಪಡಿಸಿ, ಬಿಪಿ, ಶುಗರ್ ದಂತ ಹಾಗೂ ಇತರ ಕಾಯಿಲೆಗಳು ಬಗ್ಗೆ ತಪಾಸಣೆ ಇಲಾಖೆ ಕಾಳಜಿ ವಹಿಸುತ್ತಿದೆ.ಇನ್ನೂ ವೈದ್ಯರು ತಪಾಸಣೆ ವೇಳೆ ಅಧಿಕ ರಕ್ತದೊತ್ತಡ, ಸಕ್ಕರೆ ಕಾಯಿಲೆ ಹೆಚ್ಚಿರುವವರಿಗೆ ಸಲಹೆ ಸೂಚನೆ ನೀಡಿ, ಉಚಿತ ಔಷಧಿಗಳನೀಡಲಾಗುತ್ತಿದೆ.




ಕೆಲವರು ನಾಮಕವಸ್ತೆ ಎನ್ನುವಂತೆ ಶಿಬಿರದಲ್ಲಿ ಔಷಧಿ ನಿವಾರಿಸಿಕೊಂಡು ನಂತರ ಮರೆತು ಬಿಡುವುದು ಸರಿಯಲ್ಲ, ಪ್ರತಿಯೊಬ್ಬರೂ ಆರೋಗ್ಯವು ಜೀವಮೃತ ಎನ್ನುವಂತೆ ಬದುಕಬೇಕಿದೆ. ನಾವು ಆರೋಗ್ಯವಾಗಿದ್ದರೆ ಮಕ್ಕಳು,ತಂದೆ,ತಾಯಿ ಹಾಗೂ ಗಂಡ ಕುಟುಂಬವೇಂದು ಎಂದು ನೂರಾರು ಕನಸು ಕಟ್ಟಿಕೊಂಡು ಜೀವಿಸುತ್ತೇವೆ. ಆಗಾಗ ಏರ್ಪಡಿಸುವ ಇಂತಹ ಆರೋಗ್ಯ ಶಿಬಿರ ಗಳ ಸದುಪಯೋಗ ಪಡೆದು ಅನಾರೋಗ್ಯ ಮುಕ್ತವಾಗಿ ಬದುಕಬೇಕಿದು,ತರಕಾರಿ, ಹಣ್ಣುಗಳು ಸೇರಿದಂತೆ ಇತರ ಪೌಷ್ಟಿಕಾಹಾರ ಸೇವಿಸಿ ಸದೃಢ ಆರೋಗ್ಯ ಕಾಪಾಡಿಕೊಳ್ಳಲು ಸಾಧ್ಯವಾಗುತ್ತೆ ಎಂದರು.ಇದೇ ಸಮಯದಲ್ಲಿ ಸಹಾಯಕ ನಿರ್ದೇಶಕ ಕಿರಾಣಬಾಬು ಅವರು ಮಾತನಾಡಿ,ನರೇಗಾ ಕೂಲಿ ಕೆಲಸಕ್ಕೆ ಬರುವ ಕಾರ್ಮಿಕರು ಬೆಳಿಗ್ಗೆ ಉಪವಾಸ ಬರಬಾರದು, ಸಮಯಕ್ಕೆ ಸರಿಯಾಗಿ ಆಹಾರ, ನೀರು ಸೇವಿಸಿ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು, ನಿರ್ಲಕ್ಷ್ಯತನ ತೋರದೆ ಅನಾರೋಗ್ಯದ ಸಮಸ್ಯೆ ಎದುರಾದಗ ಸಮೀಪದ ಆಸ್ಪತ್ರೆಗೆ ಹೋಗಿ ತಪಾಸಣೆ ಮಾಡಿಸಿಕೊಂಡು ಔಷಧಿ ತೆಗೆದುಕೊಳ್ಳಬೇಕಿದೆ ಎಂದರು ಈ ಸಂದರ್ಭದಲ್ಲಿ ಟಿಸಿ ರವೀಂದ್ರ ದೇಸಾಯಿ, ಪಿಡಿಓ ಶರಣಬಸವ, ಟಿಐಇಸಿ ದುರ್ಗೇಶ್, ಆರೋಗ್ಯ ಇಲಾಖೆ ಸಿಬ್ಬಂದಿ ನಾಗರಾಜ್, ಸುನೀತ್ ಹಾಗೂ ಮೋಹಿತ್, ಸಿದ್ದಣ್ಣ, ಮಲ್ಲಿಕಾರ್ಜುನ ನಾಯಕ ಸೇರಿದಂತೆ ಗ್ರಾಪಂ ಸಿಬ್ಬಂದಿಗಳು, ನರೇಗಾ ಕಾರ್ಮಿಕರು ಇದ್ದರು.

# ಬೆಳೆ ವಿಮೆ ರೈತರಿಗೆ ಆರ್ಥಿಕ ರಕ್ಷಾಕವಚ ತಪ್ಪದೇ ನೋಂದಾಯಿಸಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮಳೆ–ಬೆಳೆಗಳ ಅನಿಶ್ಚಿತತೆ ಹೆಚ್ಚಾಗಿರುವ ಈ ಕಾಲಘಟ್ಟದಲ್ಲಿ ಪ್ರಕೃತಿ ವಿಕೋಪಗಳಿಂದ ಉಂಟಾಗುವ ಬೆಳೆ ಹಾನಿಯನ್ನು ತಡೆದುಕೊಳ್ಳಲು ಪ್ರತಿಯೊಬ್ಬ ರೈತರು ಕಡ್ಡಾಯವಾಗಿ ಬೆಳೆ ವಿಮೆ ಮಾಡಿಸಿಕೊಳ್ಳಬೇಕು ಎಂದು ಕರ್ನಾಟಕ ಕೃಷಿಕ ಸಮಾಜದ ರಾಜ್ಯ ಪ್ರತಿನಿಧಿ ಹಾಗೂ ಬಿಜೆಪಿ ಹಿರಿಯ ಮುಖಂಡ ರಾಚನಗೌಡ ಮುದ್ನಾಳ ಮನವಿ ಮಾಡಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಜ್ಯದಲ್ಲಿ ಮುಂಗಾರು ಆರಂಭವಾಗಿದ್ದು,ರೈತರು ಬಿತ್ತನೆ ಕಾರ್ಯದಲ್ಲಿ ತೊಡಗಿದ್ದಾರೆ. ಅತಿವೃಷ್ಟಿ, ಅನಾವೃಷ್ಟಿ, ಬೆಳೆ ರೋಗ, ಕೀಟಬಾಧೆ, ಆಲಿಕಲ್ಲು ಮಳೆಯಂತಹ ಪ್ರಕೃತಿ ವಿಕೋಪಗಳು ಯಾವಾಗ ಸಂಭವಿಸುತ್ತವೆ ಎಂಬುದನ್ನು ಊಹಿಸಲು ಸಾಧ್ಯವಿಲ್ಲ. ಇಂತಹ ಸಂದರ್ಭದಲ್ಲಿ ವರ್ಷದ ಶ್ರಮ ನೀರಿನಲ್ಲಿ ಹೋಮವಾದಂತಾಗುತ್ತದೆ. ಈ ನಷ್ಟವನ್ನು ಸರಿದೂಗಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ಬೆಳೆ ವಿಮೆ ಮಾಡಿಸಿಕೊಳ್ಳುವುದು ರೈತರಿಗೆ ಇರುವ ಏಕೈಕ ಆರ್ಥಿಕ ರಕ್ಷಾಕವಚವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.



ರೈತರು ತಮ್ಮ ಹತ್ತಿರದ ಗ್ರಾಮ ಒನ್, ಕರ್ನಾಟಕ ಒನ್, ಸಿಎಸ್‌ಸಿ ಕೇಂದ್ರ ಅಥವಾ ಬ್ಯಾಂಕ್‌ಗಳಿಗೆ ಭೂಮಿಯ ಪಹಣಿ, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್, ಬಿತ್ತನೆ ದೃಢೀಕರಣ ಪತ್ರದಂತಹ ಅಗತ್ಯ ದಾಖಲೆಗಳನ್ನು ತೆಗೆದುಕೊಂಡು ಹೋಗಿ ನಿಗದಿತ ಅವಧಿಯೊಳಗೆ ತಮ್ಮ ಬೆಳೆಗಳಿಗೆ ವಿಮೆ ಮಾಡಿಸಬೇಕು. ಮುಂಗಾರು ಹಂಗಾಮಿನ ಬೆಳೆಗಳಿಗೆ ವಿಮೆ ಮಾಡಿಸಲು ಜುಲೈ 31 ಕೊನೆಯ ದಿನವಾಗಿದ್ದು, ಯಾವುದೇ ರೈತರು ನಿರ್ಲಕ್ಷ್ಯ ತೋರದೆ ಕೊನೆಯ ದಿನಕ್ಕಾಗಿ ಕಾಯದೆ ಕೂಡಲೇ ನೋಂದಾಯಿಸಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದ್ದಾರೆ.

'ಬೆಳೆ ವಿಮೆಗೆ ತಗಲುವ ಒಟ್ಟು ಪ್ರೀಮಿಯಂ ಮೊತ್ತದಲ್ಲಿ ರೈತರು ಶೇ. 2 ರಷ್ಟು ಮಾತ್ರ ಪಾವತಿಸಿದರೆ ಸಾಕು. ಉಳಿದ ಮೊತ್ತವನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರ ಭರಿಸುತ್ತವೆ. ಹೀಗಾಗಿ ಅತ್ಯಂತ ಕಡಿಮೆ ವೆಚ್ಚದಲ್ಲಿ ರೈತರಿಗೆ ದೊಡ್ಡ ಮಟ್ಟದ ಭದ್ರತೆ ಸಿಗಲಿದೆ. ಸಂಕಷ್ಟ ಬಂದಾಗ ಪರಿಹಾರಕ್ಕಾಗಿ ಸರ್ಕಾರದ ಕಡೆ ಕೈಚಾಚುವ ಬದಲು, ಮೊದಲೇ ವಿಮೆ ಮಾಡಿಸಿಕೊಂಡರೆ ನಷ್ಟದ ಹೊರೆಯನ್ನು ತಗ್ಗಿಸಬಹುದು' ಎಂದು ರಾಚನಗೌಡ ಮುದ್ನಾಳ ವಿವರಿಸಿದ್ದಾರೆ.

ಕೃಷಿ ಇಲಾಖೆ ಅಧಿಕಾರಿಗಳು, ಗ್ರಾಮ ಆಡಳಿತ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ರೈತರಿಗೆ ಬೆಳೆ ವಿಮೆಯ ಮಹತ್ವದ ಕುರಿತು ಜಾಗೃತಿ ಮೂಡಿಸಿ, ಎಲ್ಲಾ ಅರ್ಹ ರೈತರು ಯೋಜನೆಯ ಲಾಭ ಪಡೆಯುವಂತೆ ನೋಡಿಕೊಳ್ಳಬೇಕು. ಯಾವುದೇ ಮಧ್ಯವರ್ತಿಗಳಿಗೆ ಹಣ ನೀಡದೆ ರೈತರೇ ಖುದ್ದಾಗಿ ಹೋಗಿ ವಿಮೆ ನೋಂದಾಯಿಸಿಕೊಳ್ಳಬೇಕು ಎಂದು ಅವರು ಕಿವಿಮಾತು ಹೇಳಿದ್ದಾರೆ.

# ಪತ್ರಕರ್ತರ ಸಂಘಕ್ಕೆ ಪದಾಧಿಕಾರಿಗಳ ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ.

ನಗರದ ಚನ್ನಬಸವಾಶ್ರಮ ಪರಿಸರದಲ್ಲಿ ಈಚೆಗೆ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜೈರಾಜ ಪಾತ್ರೆ ಅಧ್ಯಕ್ಷತೆಯಲ್ಲಿ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ನಡೆಯಿತು. ಈ ಸಂದರ್ಭದಲ್ಲಿ ತಾಲೂಕು ಪ್ರಧಾನ ಕಾರ್ಯದರ್ಶಿ ಸಂತೋಷ ಬಿಜಿ ಪಾಟೀಲ್ ಸೇರಿದಂತೆ ಹಿರಿಯ ಪತ್ರಕರ್ತರು ಇದ್ದರು.

ಪದಾಧಿಕಾರಿಗಳ ವಿವರ :

ಅಶೋಕ ರಾಜೋಳೆ(ಗೌರವಾಧ್ಯಕ್ಷರು), ಪರಶುರಾಮ ಕರ್ಣ(ಉಪಾಧ್ಯಕ್ಷರು), ಭದ್ರೇಶ್ ಸ್ವಾಮಿ(ಖಜಾಂಚಿ), ದಿಲೀಪ ಶೇರಿಕಾರ, ಮಲ್ಲಿಕಾರ್ಜುನ ಪಾಟೀಲ್(ಸಹ ಕಾರ್ಯದರ್ಶಿ), ಚಂದ್ರಕಾಂತ ಪಾಟೀಲ್, ಜೈರಾಜ ದಾಬಶೆಟ್ಟೆ, ಗಣಪತಿ ಬೋಚರೆ, ರಾಜೇಶ ಮುಗಟೆ, ಚಂದ್ರಶೇಖರ ಎಮ್ಮೆ(ಗೌರವ ಸಲಹೆಗಾರರು), ಬಸವರಾಜ ಪ್ರಭಾ, ಸಂತೋಷ ಹಡಪದ, ಪ್ರವೀಣ ಮೇತ್ರೆ (ಸಂಘಟನಾ ಕಾರ್ಯದರ್ಶಿಗಳು) ಮತ್ತು ವಿಜಯಕುಮಾರ ಪರ್ಮಾ, ಮಾಣಿಕ ಮರಕಲೆ, ದೀಪಕ ಠಮಕೆ, ನರೇಂದ್ರ ಸೋಮಶೆಟ್ಟಿ, ರಮೇಶ ಚಿದ್ರೆ, ವೀರೇಶಕುಮಾರ ಸ್ವಾಮೀಜಿ, ಶಿವಕುಮಾರ ಮೋರೆ, ಶೇಖ ಸಾಬೇರ ಪಟೇಲ್, ಇಂದ್ರಜೀತ ಪಂಚಾಳ, ಪ್ರಜ್ವಲ ಮುಗಟೆ, ಶೇಖ ಮುಜಾಹಿದ ಮತ್ತು ಜೈಭೀಮ ಅವರನ್ನು ಕಾರ್ಯಕಾರಿಣಿ ಸದಸ್ಯರನ್ನಾಗಿ ಆಯ್ಕೆ ಮಾಡಲಾಗಿದೆ.

# ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ನೆಪದಲ್ಲಿ ಪ್ರತಿಪಕ್ಷಗಳ ಹತ್ತಿಕ್ಕುವ ಹುನ್ನಾರ

• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ

ಕೇಂದ್ರ ಸರ್ಕಾರ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ನೆಪದಲ್ಲಿ ವಿರೋಧ ಪಕ್ಷಗಳನ್ನು ಹತ್ತಿಕ್ಕಲು ಹುನ್ನಾರ ನಡೆಸುತ್ತಿದೆ ಎಂದು ಶಾಸಕ ಕೆ.ವೆಂಕಟೇಶ್ ಆರೋಪಿಸಿದರು.

ಪಟ್ಟಣದ ಆದಿ ಚುಂಚನಗಿರಿ ಸಮುದಾಯ ಭವನದಲ್ಲಿ ಆಯೋಜಿಸಿದ್ದ ಪಿರಿಯಾಪಟ್ಟಣ ವಿಧಾನಸಭಾ ಕ್ಷೇತ್ರದ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಕುರಿತ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಮತದಾರರ ವಿಶೇಷ ತೀವ್ರ ಪರಿಷ್ಕರಣೆಯು ಸಂವಿಧಾನದ ಮೂಲ ಆಶಯಕ್ಕೆ ಧಕ್ಕೆ ಉಂಟಾಗಲಿದೆ. ಸಂವಿಧಾನವು ದೇಶದ ಪ್ರತಿ ನಾಗರಿಕರಿಗೆ ಮತದಾನದ ಹಕ್ಕು ನೀಡಿದೆ. ಆದರೆ ಕೇಂದ್ರದಲ್ಲಿ ಆಡಳಿತ ನಡೆಸುತ್ತಿರುವ ಬಿಜೆಪಿ ಸರ್ಕಾರ ಇದನ್ನು ತೀವ್ರ ಪರಿಷ್ಕರಣೆ ಹೆಸರಿನಲ್ಲಿ ಕಸಿದುಕೊಳ್ಳುವ ಹುನ್ನಾರ ನಡೆಯುತ್ತಿದೆ. ಯಾವುದೇ ಅರ್ಹ ಮತದಾರನ ಹೆಸರು ಮತದಾರ ಪಟ್ಟಿಯಿಂದ ಕೈ ಬಿಟ್ಟು



ಹೋದರೆ, ಪೌರತ್ವ ಕಳೆದುಕೊಂಡು ಆಗ ಹಲವು ಸಮಸ್ಯೆಗಳು ಉದ್ಭವಿಸುತ್ತವೆ. ಈ ಬಗ್ಗೆ ಎಲ್ಲರೂ ಎಚ್ಚರಿಕೆಯಿಂದ ಇರಬೇಕು. ಮತದಾರ ಪಟ್ಟಿಯಲ್ಲಿ ತಮ್ಮ ಹೆಸರು ಇರುವುದನ್ನು ಖಚಿತಪಡಿಸಿಕೊಳ್ಳಬೇಕು.

ಪಕ್ಷದ ಬೂತ್ ಮಟ್ಟದ ಕಾರ್ಯಕರ್ತರು ಇದಕ್ಕೆ ಅವಕಾಶ ನೀಡಬಾರದು. ಪಶ್ಚಿಮ ಬಂಗಾಳದಲ್ಲಿ ಎಸ್ಐಆರ್ ಮೂಲಕ ಮತದಾರರನ್ನು ಹೊರಗಿಡಲಾಯಿತು.

ಬಿಜೆಪಿ ವಾಮ ಮಾರ್ಗದಲ್ಲಿ ಅಧಿಕಾರ ಹಿಡಿಯಲು ಇಂತಹ ಪ್ರಯತ್ನ ನಡೆಸುತ್ತಿದೆ. ಆದ್ದರಿಂದ ನಮ್ಮ ಮತದಾರರನ್ನು ಗಟ್ಟಿಗೊಳಿಸಿಕೊಳ್ಳಲು ಬೂತ್ ಮಟ್ಟದಲ್ಲಿ ಬಿಎಲ್ಒಗಳು ಮತದಾರರ ಪಟ್ಟಿ ಪರಿಷ್ಕರಣೆ ಸಂದರ್ಭದಲ್ಲಿ ನೈಜ ಮತದಾರನ್ನು ಪಟ್ಟಿಯಿಂದ ಕೈಬಿಡದಂತೆ ನೋಡಿಕೊಳ್ಳಬೇಕು. ಮುಂದಿನ ದಿನಗಳಲ್ಲಿ ಮತದಾರರ ಪಟ್ಟಿಯಲ್ಲಿ ಹೆಸರಿದ್ದರೆ ಮಾತ್ರ ಸರ್ಕಾರದ ಸವಲತ್ತುಗಳನ್ನು ಪಡೆದುಕೊಳ್ಳಲು ಸಾಧ್ಯವಿದೆ. ಇದನ್ನು ಮತದಾರರಿಗೆ ಮನದಟ್ಟು ಮಾಡಿಕೊಡಿ ಎಂದರು.

ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಮಾತನಾಡಿ, ಮತದಾರರ ವಿಶೇಷ ಪಟ್ಟಿ ಪರಿಷ್ಕರಣೆಯ ನೆಪದಲ್ಲಿ ಕೇಂದ್ರ ಸರ್ಕಾರ ಕಾಂಗ್ರೆಸ್ ಮತದಾರರ ಸಂಖ್ಯೆಯನ್ನು ಕಡಿತಗೊಳಿಸಲು ಮುಂದಾಗಿದೆ. ಈ ಕ್ಷೇತ್ರಗಳಲ್ಲಿ ಮತದಾರರನ್ನು ಕಡಿತಗೊಳಿಸುವ ಪಿತೂರಿ ಮಾಡುತ್ತಿದೆ. ಇದನ್ನು ತಡೆಯಲು ಹಾಗೂ ರಾಜ್ಯದಾದ್ಯಂತ ಕಾಂಗ್ರೆಸ್ ಪಕ್ಷವನ್ನು ಬಲಿಷ್ಠಗೊಳಿಸಲು ಎಲ್ಲರೂ ಶ್ರಮಿಸೋಣ ಎಂದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಘಟಕದ ವಾಸು ಮತದಾರರ ವಿಶೇಷ ಪರಿಷ್ಕರಣೆ ಕುರಿತಾಗಿ ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್, ಮೈಸೂರು ಪೇಂಟ್ಸ್ ಮತ್ತು ವಾರ್ನಿಸ್ ನಿಗಮದ ಅಧ್ಯಕ್ಷ ಹೆಚ್.ಡಿ.ಗಣೇಶ್, ಕೆಪಿಸಿಸಿ ಸದಸ್ಯ ಅನಿಲ್ ಕುಮಾರ್, ಎಂಡಿಸಿಸಿ ಬ್ಯಾಂಕ್ ನಿರ್ದೇಶಕ ಈಚೂರು ಲೋಕೇಶ್, ಮೈಮುಲ್ ಮಾಜಿ ನಿರ್ದೇಶಕ ಬಿ.ಎ.ಪ್ರಕಾಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಡಿ.ಟಿ.ಸ್ವಾಮಿ, ರಹಮತ್ ಜಾನ್ ಬಾಬು ಪಿಎಲ್ಡಿ ಬ್ಯಾಂಕ್ ಅಧ್ಯಕ್ಷ ಹೊಲದಪ್ಪ, ಜಿಲ್ಲಾ ಮತ್ತು ತಾಲೂಕು ಪಂಚಾಯತ್ ಮಾಜಿ ಸದಸ್ಯರು ಗ್ರಾಪಂ ಮಾಜಿ ಅಧ್ಯಕ್ಷರು ಮತ್ತು ಸದಸ್ಯರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಹಳ್ಳಿಯಲ್ಲಿನ ರೈತರು ಕೆಲಸದ ಒತ್ತಡದಿಂದ ತಮ್ಮ ಆರೋಗ್ಯವನ್ನು ಮರೆತಿದ್ದಾರೆ




• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಇಂದಿನ ದಿನಮಾನಗಳಲ್ಲಿ ಒಳ್ಳೆಯ ಆರೋಗ್ಯ ವ್ಯವಸ್ಥೆ ಇಲ್ಲದೇ ಹಳ್ಳಿಯಲ್ಲಿನ ರೈತರು ಕೆಲಸದ ಒತ್ತಡದಿಂದ ತಮ್ಮ ಆರೋಗ್ಯವನ್ನು ಮರೆತು ತಮ್ಮ – ತಮ್ಮ ಕೆಲಸದಲ್ಲಿ ತಲ್ಲಿನರಾಗಿರುತ್ತಾರೆ ಎಂದು ಠಾಣಗುಂದಿ ಗ್ರಾಮ ಪಂಚಾಯಿತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶಿವಕುಮಾರ ಹೇಳಿದರು.

ಯಾದಗಿರಿ ತಾಲೂಕಿನ ಹೆಡಗಿಮದ್ರಾ ಗ್ರಾಮದಲ್ಲಿ ಅಖಿಲ ಭಾರತ ರೈತ ಕೃಷಿ ಕಾರ್ಮಿಕ ಸಂಘಟನೆ (ಎಐಕೆಕೆಎಂಎಸ್) ಯ ನೇತೃತ್ವದಲ್ಲಿ ನರೇಗಾ ಕೂಲಿ ಕಾರ್ಮಿಕರ ಆರೋಗ್ಯದ ದೃಷ್ಟಿಯಿಂದ ಉಚಿತ ನೇತ್ರ ತಪಾಸಣೆ ಶಿಬಿರ ಮತ್ತು ಕನ್ನಡಕ ವಿತರಣಾ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಆಗಮಿಸಿ ಠಾಣಗುಂದಿ ಗ್ರಾಮ ಪಂಚಾಯಿತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶಿವಕುಮಾರ್ ರವರು ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದರು.

ತೀರಾ ಗಂಭೀರ ಅನಾರೋಗ್ಯ ಪರಿಸ್ಥಿತಿಯಲ್ಲೂ ಮಾತ್ರ ಆಸ್ಪತ್ರೆಗೆ ಹೋಗುತ್ತಾರೆ, ಹೀಗಿರುವಾಗ ಅವರಿಗಾಗಿ ಈ ತರಹದ ಶಿಬಿರಗಳ ಅಗತ್ಯ ತುಂಬಾ ಇದೆ. ಆದ್ದರಿಂದ ನಾವು ಇಂದು ನಮ್ಮ ನರೇಗಾ ಕೂಲಿ ಕಾರ್ಮಿಕರ ಹಿತದೃಷ್ಟಿಯಿಂದ ಅವರ ಕಣ್ಣಿನ ಆರೋಗ್ಯ ಕಾಪಾಡುವ ಉದ್ದೇಶದಿಂದ ಉಚಿತ ನೇತ್ರ ತಪಾಸಣಾ ಶಿಬಿರ ಮತ್ತು ಕನ್ನಡಕ ವಿತರಣಾ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದೇವೆ ಎಂದರು. ನಂತರ ನೇತ್ರ ಚಿಕಿತ್ಸಕರಾದ ಡಾ. ಶುಕುರ ಮಾತನಾಡಿ, ನರೇಗಾ ಕೂಲಿ ಕಾರ್ಮಿಕರು ತಮ್ಮ ಮನೆಗಳ ಕೆಲಸದ ಮಧ್ಯೆ ಕೂಡ ತಮ್ಮ – ತಮ್ಮ ಆರೋಗ್ಯದ ಕಡೆ ಗಮನ ಹರಿಸಬೇಕು, ನಮ್ಮ ಆರೋಗ್ಯ ಇಲಾಖೆಯಿಂದ ಏನೆಲ್ಲಾ ಸೌಲಭ್ಯಗಳಿವೆಯೋ ಆ ಎಲ್ಲಾ ಸೌಲಭ್ಯಗಳನ್ನು ಜನಸಾಮಾನ್ಯರು ಸದುಪಯೋಗ ಪಡಿಸಿಕೊಳ್ಳಬೇಕು. ನಮ್ಮ ಇಲಾಖೆಯಲ್ಲಿ ನೇತ್ರ ತಪಾಸಣೆ ಮಾಡಿ ಕನ್ನಡಕ ಕೊಡುವುದಲ್ಲದೆ ನೇತ್ರ ಚಿಕಿತ್ಸೆ ಕೂಡ ಉಚಿತವಾಗಿ ಮಾಡುತ್ತೇವೆ, ನಿಮ್ಮ ಗ್ರಾಮದಲ್ಲಿ ಯಾರ್ಯಾರು ನೇತ್ರ ಚಿಕಿತ್ಸೆಗೆ ಬರುವವರು ಇದ್ದೀರಿ ಅವರಿಗೆ ಬಸ್ಸಿನ ವ್ಯವಸ್ಥೆ ಕೂಡ ಕಲ್ಪಿಸುತ್ತೇವೆಂದು ಭರವಸೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಎಲ್ಲರೂ ಸಕ್ರಿಯವಾಗಿ ಭಾಗವಹಿಸಿ ತಮ್ಮ– ತಮ್ಮ ಕಣ್ಣುಗಳ ತಪಾಸಣೆಯನ್ನು ಮಾಡಿಕೊಂಡರು ಹಾಗೂ ಕನ್ನಡಕವನ್ನು ತೆಗೆದುಕೊಂಡರು. ಈ ಶಿಬಿರವು ಬೆಳಿಗ್ಗೆ 11 ಗಂಟೆಯಿಂದ ಸಾಯಂಕಾಲ 5:30 ಗಂಟೆಯವರೆಗೆ ನಡೆಯಿತು. ಶಿಬಿರದಲ್ಲಿ ಸುಮಾರು 128 ಕನ್ನಡಕಗಳನ್ನು ವಿತರಿಸಲಾಯಿತು. 38 ಜನರಿಗೆ ನೇತ್ರ ಶಸ್ತ್ರ ಚಿಕಿತ್ಸೆಗೆ ದಿನಾಂಕ ಗೊತ್ತು ಮಾಡುವುದಾಗಿ ಹೇಳಲಾಯಿತು.

ಈ ಶಿಬಿರದಲ್ಲಿ ಸುಮಾರು 200 ಕ್ಕಿಂತ ಹೆಚ್ಚು ರೈತರು, ರೈತ ಮಹಿಳೆಯರು ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಜಮಾಲ್ ಸಾಬ್ ಹೆಡಗಿಮದ್ರಾ, ಭೀಮಣ್ಣ ನಾಯಕ್, ಶಿವಪ್ಪ ಭಜಂತ್ರಿ, ಅಯ್ಯಮ್ಮ ಚೂರಿ, ಅಂಬರೀಶ್ ಧಣಿ, ಮರೆಪ್ಪ ಶಂಕರ ಬಂಡಿ, ಸುರೇಶ್ ತೆಳಿಗೇರಿ, ಮರೆಪ್ಪ ಕೋಟೆಕಲ್, ಮುದಿಯಪ್ಪ ಸುಲಗಿತ್ತಿ, ಬಸ್ಸಮ್ಮ ನಾಯ್ಕಲ್, ಮಲ್ಲಮ್ಮ ಅಂಬಿಗೇರ, ಸುಮಂಗಲ ದಾಸರ್, ಮೆಹಬೂಬಿ ಹುಲ್ಕಲ್, ಸಲಿಮಾ ಮುಲ್ಲಾ, ಸುವರ್ಣ ಕಟಕಟಿ, ನಂದಪ್ಪ ಬೈರಪುರ್, ಈಶಪ್ಪ ಹಬ್ಬಳ್ಳಿ ಇನ್ನಿತರರು ಇದ್ದರು.

# ಸಾಮೂಹಿಕ ಯೋಗಾಭ್ಯಾಸದಲ್ಲಿ ಭಾಗವಹಿಸಿ: ಶಾಸಕ ಪ್ರಭು ಚವ್ಹಾಣ

• ಮಲ್ಲಮ್ಮ ನುಡಿ ವಾರ್ತೆ ಔರಾದ



ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ನಿಮಿತ್ತ ಜೂನ್ 21ರ ಬೆಳಗ್ಗೆ 6.30 ಗಂಟೆಗೆ ಔರಾದ(ಬಿ) ತಾಲ್ಲೂಕು ಕ್ರೀಡಾಂಗಣದಲ್ಲಿ ಸಾಮೂಹಿಕ ಯೋಗಾಭ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಭಾರತದ ಪ್ರಾಚೀನ ಸಂಸ್ಕೃತಿ ಮತ್ತು ಪರಂಪರೆಯ ಭಾಗವಾಗಿರುವ ಯೋಗ ಇಂದು ವಿಶ್ವದಾದ್ಯಂತ ಆರೋಗ್ಯಕರ ಜೀವನಶೈಲಿಯ ಪ್ರತೀಕವಾಗಿ ಗುರುತಿಸಿಕೊಂಡಿದೆ. ಸಮಾಜವು ಆಧುನಿಕತೆಗೆ ಒಗ್ಗಿಕೊಳ್ಳುತ್ತಿದ್ದಂತೆ ಆಹಾರ ಪದ್ಧತಿ, ಕೆಲಸದೊತ್ತಡ, ಜೀವನ ಶೈಲಿಯಲ್ಲಿ ಆದ ಬಲಾವಣೆಗಳಿಂದಾಗಿ ರಕ್ತದೊತ್ತಡ, ಮಧುಮೇಹ, ಸ್ಥೂಲಕಾಯತೆ, ಮಾನಸಿಕ ಒತ್ತಡ, ಖಿನ್ನತೆಯಂತಹ ಹತ್ತಾರು ರೋಗಗಳು ಜನರನ್ನು ಪೀಡಿಸುತ್ತಿವೆ. ಇವೆಲ್ಲವುಗಳಿಗೆ ಯೋಗದಲ್ಲಿ ಪರಿಹಾರವಿದ್ದು, ದೈಹಿಕ ಹಾಗೂ ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಯೋಗವು ಅತ್ಯಂತ ಪರಿಣಾಮಕಾರಿ ಮಾರ್ಗವಾಗಿದೆ ಎಂದಿದ್ದಾರೆ.

ಭಾರತದ ಯೋಗ ಪರಂಪರೆಯನ್ನು ಜಗತ್ತಿಗೆ ಪರಿಚಯಿಸುವಲ್ಲಿ ಹಾಗೂ ಯೋಗದ ಮಹತ್ವವನ್ನು ವಿಸ್ತರಿಸುವಲ್ಲಿ ಮಹರ್ಷಿ ಪತಂಜಲಿ, ಸ್ವಾಮಿ ವಿವೇಕಾನಂದ, ಪರಮಹಂಸ ಯೋಗಾನಂದ, ತಿರುಮಲೈ ಕೃಷ್ಣಮಾಚಾರ್ಯ, ಬಿ.ಕೆ.ಎಸ್.ಅಯ್ಯಂಗಾರ್, ಬಾಬಾ ರಾಮದೇವ ಸೇರಿದಂತೆ ಅನೇಕ ಮಹನೀಯರು ಅಪಾರ ಕೊಡುಗೆ ನೀಡಿದ್ದಾ–ರೆ. ಭಾರತದ ಮೂಲದ ಯೋಗಕ್ಕೆ ಜಾಗತಿಕ ಮನ್ನಣೆ ದೊರಕುವಂತೆ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ವಿಶ್ವಸಂಸ್ಥೆಯಲ್ಲಿ ಪ್ರಸ್ತಾಪ ಮಾಡಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ಮಾನ್ಯತೆ ದೊರಕುವಂತೆ ಮಹತ್ವದ ಪಾತ್ರ ವಹಿಸಿದ್ದಾರೆ.

ಪ್ರತಿಯೊಬ್ಬರ ಜೀವನದಲ್ಲೂ ಅತ್ಯಂತ ಅವಶ್ಯಕತೆಯಾಗಿರುವ ಯೋಗವನ್ನು ನಿತ್ಯಜೀವನದ ಭಾಗವಾಗಿಸುವ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ಔರಾದನಲ್ಲಿಯೇ ಆಯೋಜಿಸಿರುವ ಸಾಮೂಹಿಕ ಯೋಗಾಭ್ಯಾಸ ಕಾರ್ಯಕ್ರಮದಲ್ಲಿ ನುರಿತ ಯೋಗ ಪಂಡಿತರು ಆಗಮಿಸಿ ಯೋಗಾಭ್ಯಾಸದ ಕುರಿತು ತರಬೇತಿ ನೀಡುತ್ತಾರೆ. ಹಾಗೆಯೇ ಉತ್ತಮ ಆರೋಗ್ಯಕ್ಕಾಗಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ತಿಳಿಸಿಕೊಡಲಿದ್ದು, ಶಾಲಾ–ಕಾಲೇಜು ವಿದ್ಯಾರ್ಥಿಗಳು, ಸರ್ಕಾರಿ, ಅರೆ ಸರ್ಕಾರಿ, ಖಾಸಗಿ ನೌಕರರು, ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡೆಯಬೇಕೆಂದು ಶಾಸಕರು ಮನವಿ ಮಾಡಿದ್ದಾರೆ.

# ಕಮಲನಗರದಲ್ಲಿ ಪಠ್ಯಕ್ರಮ ಬೋಧನೆಯ ಮಹತ್ವ ವಿಶೇಷ ಉಪನ್ಯಾಸ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ಪಟ್ಟಣದ ಶಾಂತಿ ವರ್ಧಕ ಪದವಿ ಪೂರ್ವ ಕಾಲೇಜಿನಲ್ಲಿ ಶನಿವಾರ ರಂದು ಕರ್ನಾಟಕ ಸಾಹಿತ್ಯ ಅಕಾಡೆಮಿ, ಬೆಂಗಳೂರು, ಚಕೋರ ಸಾಹಿತ್ಯ ವಿಚಾರ ವೇದಿಕೆ ಬೀದರ್ ಹಾಗೂ ಶಾಂತಿ ವರ್ಧಕ ಪದವಿ ಪೂರ್ವ ಕಾಲೇಜು ಕಮಲನಗರ ಇವರ ಜಂಟಿ ಸಹಯೋಗದೊಂದಿಗೆ 'ಪಠ್ಯಕ್ರಮ ಬೋಧನೆಯ ಮಹತ್ವ' ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಒತ್ತಡವಿಲ್ಲದ ಶಿಕ್ಷಣ ಅಗತ್ಯ – ಡಾ. ವಿಶ್ವನಾಥ್ ಕಿವ್ಡೆ:

ಕಾರ್ಯಕ್ರಮದ ಉದ್ಘಾಟನೆಯನ್ನು ಶ್ರೀ ಸಿದ್ಧರಾಮೇಶ್ವರ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ವಿಶ್ವನಾಥ್ ಕಿವ್ಡೆ ಅವರು ನೆರವೇರಿಸಿದರು. ಸಸಿಗೆ ನೀರೆರೆಯುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, "ವಿದ್ಯಾರ್ಥಿಗಳು ಯಾವುದೇ ಮಾನಸಿಕ ಒತ್ತಡವಿಲ್ಲದೆ ಶಿಕ್ಷಣವನ್ನು ಕಲಿಯಬೇಕು. ಅಂದಾಗ ಮಾತ್ರ ಜ್ಞಾನಾರ್ಜನೆ ಸಾಧ್ಯ. ವಿದ್ಯಾರ್ಥಿಗಳು ತಮ್ಮ ಬದುಕನ್ನು ಉತ್ತಮವಾಗಿ ರೂಪಿಸಿಕೊಳ್ಳಲು ಶಿಕ್ಷಣದ ಜೊತೆಗೆ ನಿರಂತರವಾಗಿ ಕ್ರಿಯಾಶೀಲರಾಗಿರಬೇಕು," ಎಂದು ಕರೆ ನೀಡಿದರು.

ಶಿಕ್ಷಣ ಇಂದಿನ ದಿನಮಾನದ ಅತ್ಯಾವಶ್ಯಕತೆ:

ಕಾರ್ಯಕ್ರಮದಲ್ಲಿ ಆಶಯ ನುಡಿಗಳನ್ನಾಡಿದ ಕಮಲನಗರ ತಾಲೂಕು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ವಿಜಯಕುಮಾರ ನುದನೂರೆ ಅವರು, ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಶಿಕ್ಷಣವು ಪ್ರತಿಯೊಬ್ಬರಿಗೂ ಅತ್ಯಂತ ಅತ್ಯಾವಶ್ಯಕವಾಗಿದೆ ಎಂದರು. ಕೇವಲ ಅಂಕ ಗಳಿಕೆಗೆ ಸೀಮಿತವಾಗದೆ, ನಾವೆಲ್ಲರೂ ಬಹುಮುಖ ಪ್ರತಿಭೆಯಾಗಿ ಹೊರಹೊಮ್ಮಬೇಕು ಎಂದು ಅವರು ಆಶಯ ವ್ಯಕ್ತಪಡಿಸಿದರು.

ಜೀವನದ ಉದ್ದಗಲಕ್ಕೂ ಶಿಕ್ಷಣದ ಅವಶ್ಯಕತೆಯಿದೆ:

ವಿಶೇಷ ಉಪನ್ಯಾಸ ನೀಡಿದ ಕಮಲನಗರ ಕಸಾಪ ಗೌರವ ಕಾರ್ಯದರ್ಶಿಗಳಾದ ಮಾಧಪ್ಪ ಎಸ್. ಮಡಿವಾಳ ಅವರು, "ಇಂದಿನ ದಿನಗಳಲ್ಲಿ ವಿದ್ಯಾರ್ಥಿಗಳ ಬದುಕು ತುಂಬಾ ಕಷ್ಟಕರ ಹಾಗೂ ಸವಾಲಿನಿಂದ ಕೂಡಿದೆ. ಇಂತಹ ಸಂದರ್ಭದಲ್ಲಿ ಕಷ್ಟಪಟ್ಟು ಉತ್ತಮ ಶಿಕ್ಷಣವನ್ನು ಕಲಿತು ಇತಿಹಾಸದ ಪುಟಗಳಲ್ಲಿ ಸೇರುವಂತಹ ಸಾಧನೆ ಮಾಡಬೇಕು. ಶಿಕ್ಷಣದ ಅವಶ್ಯಕತೆ ಕೇವಲ ಶಾಲಾ ದಿನಗಳಿಗಷ್ಟೇ ಸೀಮಿತವಾಗಿರದೆ, ಜೀವನದ ಉದ್ದಗಲಕ್ಕೂ ಇರುತ್ತದೆ," ಎಂದು ಮಾರ್ಗದರ್ಶನ ನೀಡಿದರು.

ಮೊಬೈಲ್‌ಗಳಿಂದ ದೂರವಿರಿ – ಸಂಗಮೇಶ್ವರ ಮುರ್ಕೆ:

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಕಮಲನಗರ ತಾಲೂಕಿನ ಹಿರಿಯ ಸಾಹಿತಿಗಳಾದ ಶ್ರೀ ಸಂಗಮೇಶ್ವರ ಎಸ್. ಮುರ್ಕೆ ಅವರು ಮಾತನಾಡುತ್ತಾ, ಮಕ್ಕಳು ಶಿಕ್ಷಣದ ಮೂಲಕ ಉತ್ತಮ ವ್ಯಕ್ತಿತ್ವವನ್ನು ರೂಪಿಸಿಕೊಂಡು ಸದಾ ಕ್ರಿಯಾಶೀಲರಾಗಿರಬೇಕು. ಇಂದಿನ ವಿದ್ಯಾರ್ಥಿಗಳು ತಮ್ಮ ಅಮೂಲ್ಯ ಸಮಯವನ್ನು ಹಾಳುಮಾಡುವ ಮೊಬೈಲ್‌ಗಳಿಂದ ದೂರವಿರಬೇಕು ಎಂದು ಕಿವಿಮಾತು ಹೇಳಿದರು.

ಚಕೋರ ಸಾಹಿತ್ಯ ವಿಚಾರ ವೇದಿಕೆಯ ಡಾ. ಮಕ್ತುಂಬಿ ಎಂ. ಅವರು ಮಾತನಾಡುತ್ತಾ, ಇಂದಿನ ಮಕ್ಕಳೇ ನಾಳಿನ ಪ್ರಜೆಗಳಾಗಿದ್ದು, ಅವರನ್ನು ಸೂಕ್ತ ರೀತಿಯಲ್ಲಿ ಬೆಳೆಸುವುದು ಇಂದಿನ ತುರ್ತು ಅಗತ್ಯ ಎಂದರು. ಅಲ್ಲದೆ, ಜಿಲ್ಲಾ ಸಂಚಾಲಕಿಯೂ ಆಗಿರುವ ಅವರು ಮಕ್ಕಳಿಗೆ ಸಾಹಿತ್ಯದ ಕಡೆಗೆ ಒಲವು ಇರಬೇಕು ಎಂದು ಪ್ರತಿಪಾದಿಸಿದರು.

ಬಹುಮುಖ ವ್ಯಕ್ತಿತ್ವ ಬೆಳೆಸಿಕೊಳ್ಳಿ:

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಂತಿ ವರ್ಧಕ ಪದವಿ ಕಾಲೇಜಿನ ಪ್ರಾಚಾರ್ಯರಾದ ಓಂಕಾರ ಸೂರ್ಯವಂಶಿ ಅವರು ಮಾತನಾಡಿ, ವಿದ್ಯಾರ್ಥಿಗಳು ತಮ್ಮಲ್ಲಿ ಬಹುಮುಖ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಬೇಕು. ತಮ್ಮ ಉಜ್ವಲ ಭವಿಷ್ಯವನ್ನು ತಾವೇ ಸ್ವತಃ ಕಷ್ಟಪಟ್ಟು ಶ್ರಮ ವಹಿಸಿ ಕಟ್ಟಿಕೊಳ್ಳಲು ಮುನ್ನಡೆಯಬೇಕು ಎಂದು ಹಾರೈಸಿದರು.

ಈ ಸಮಾರಂಭದಲ್ಲಿ ಶಿವಶಂಕರ್ ಕಾಂಬ್ಳೆ, ಶ್ರೀಕಾಂತ್ ಬಾಗಿ, ಶಿವಶಂಕರ್ ಸಿದ್ದಪ್ಪ ಹಳ್ಳಿ, ಡಾ. ಬಾಲಾಜಿ ಬೋಂಡ್ಲೆ, ನಿಖಿತಾ ಬರ್ಗೆ, ಸೋನಾಲಿ ಗಾಯಕವಾಡ್, ವೆಂಕಟ್ ಮೊರೆ ಸೇರಿದಂತೆ ಕಾಲೇಜಿನ ಎಲ್ಲಾ ವಿಭಾಗದ ಉಪನ್ಯಾಸಕ ವೃಂದ ಹಾಗೂ ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

?ಅದಿಬಾ ಅಸ್ಲಂ ಅವರು ಪ್ರಾರ್ಥನೆ ನೆರವೇರಿಸಿದರು, ಜೊತೆಗೆ ಕಾರ್ಯಕ್ರಮದ ನಿರೂಪಣೆ ಹಾಗೂ ಕೊನೆಯಲ್ಲಿ ವಂದನಾರ್ಪಣೆಯನ್ನು ಅಚ್ಚುಕಟ್ಟಾಗಿ ನೆರವೇರಿಸಿಕೊಟ್ಟರು.

# ಸರ್ಕಾರಿ ಶಾಲಾ ಮಕ್ಕಳಿಗೆ ಉಚಿತ ಟೀ–ಶರ್ಟ್ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಕೇವಲ ಭಾವನಾತ್ಮಕವಾಗಿ ಮಾತನಾಡುವುದರಿಂದ ಸರ್ಕಾರಿ ಶಾಲೆಗಳನ್ನು ಉಳಿಸಲು ಸಾಧ್ಯವಿಲ್ಲ. ಅವುಗಳ ಉಳಿವಿಗಾಗಿ ಮತ್ತು ಪ್ರಗತಿಗಾಗಿ ಸಾರ್ವಜನಿಕರು ಹಾಗೂ ಸಮುದಾಯದ ಸಹಭಾಗಿತ್ವ ಅತ್ಯಗತ್ಯ ಎಂದು ನಿವೃತ್ತ ಪ್ರಾಚಾರ್ಯ ಎಸ್.ಎಸ್. ಮೈನಾಳೆ ಅವರು ಪ್ರತಿಪಾದಿಸಿದರು.

ತಾಲೂಕಿನ ಮುರ್ಕಿ ಗ್ರಾಮದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ 12ನೇ ಯೋಗ ದಿನಾಚರಣೆ ನಿಮಿತ್ತ ಶನಿವಾರ ಹಮ್ಮಿಕೊಂಡಿದ್ದ ವಿದ್ಯಾರ್ಥಿಗಳಿಗೆ ಉಚಿತ ಟೀ–ಶರ್ಟ್ ವಿತರಣಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡುತ್ತಿದ್ದರು.

ಉದ್ಯಮಿ ವಿಜಯಕುಮಾರ್ ಬಿರಾದಾರ್ ಅವರು ಸರ್ಕಾರಿ ಶಾಲೆಯ ಮಕ್ಕಳಿಗೆ ಉಚಿತ ಟೀ–ಶರ್ಟ್‌ಗಳನ್ನು ಕೊಡುಗೆಯಾಗಿ ನೀಡುವ ಮೂಲಕ ಮಕ್ಕಳ ಶೈಕ್ಷಣಿಕ ಚಟುವಟಿಕೆಗಳಿಗೆ ಉತ್ತಮ ಪ್ರೋತ್ಸಾಹ ನೀಡಿದ್ದಾರೆ ಎಂದು ಶ್ಲಾಘಿಸಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಪ್ರಮುಖರಾದ ಸಂತೋಷ್ ಬಾರೋಳೆ ಅವರು, ಸರ್ಕಾರಿ ಶಾಲೆ ಹಾಗೂ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಸಮುದಾಯದ ನೆರವು ಬಹಳ ಮುಖ್ಯ. ದಾನಿಗಳು ಮತ್ತು ಸಂಘ–ಸಂಸ್ಥೆಗಳ ಸಹಕಾರದೊಂದಿಗೆ ಶಾಲೆಯನ್ನು ಪ್ರಗತಿಯತ್ತ ಕೊಂಡೊಯ್ಯುತ್ತಿರುವ ಇಲ್ಲಿನ ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು ಹಾಗೂ ಶಿಕ್ಷಕರ ಕಾರ್ಯ ಶ್ಲಾಘನೀಯ ಎಂದರು. ಈ ಸಂದರ್ಭದಲ್ಲಿ ಉದ್ಯಮಿ ವಿಜಯಕುಮಾರ್ ಬಿರಾದಾರ್, ಎಸ್‌ಡಿಎಂಸಿ ಅಧ್ಯಕ್ಷ ಅಮರಜೀತ್ ಠಾಕೂರ್, ಮುಖ್ಯ ಶಿಕ್ಷಕ ವೆಂಕಟರಾವ್ ಮಲಗೊಂಡ, ಮಹೇಶ್ ಬಾರೋಳೆ, ಉಮೇಶ್ ಬಿರಾದಾರ್, ದೀಪಕ್ ಬಾರೋಳೆ, ವಿಲಾಸ್ ಖಿಂಡಿವಾಲೆ, ನಾಗನಾಥ್ ಆಡೆ, ನಿಜಾಮ್ ಖೋರಿವಾಲೆ, ಅಂಕುಶ್ ಖಿಂಡಿವಾಲೆ, ಗಣಪತಿ ಬಿರಾದಾರ್, ಮಹೇಶ್ ಬಿರಾದಾರ್, ಗಣೇಶ್ ಡೋಣಗಾಪುರೆ, ಪ್ರವೀಣ್ ಬಿರಾದಾರ್, ರಾಜು ಪೂಜಾರಿ, ಶಶಿಕಾಂತ್, ಗುಂಡೇರಾವ್, ರವಿಕಾಂತ್, ಸಂಗೀತ, ಸುನಿತಾ, ನಿರ್ಮಲಾ, ಅರ್ಚನಾ, ಚಂಪಾವತಿ, ರಶೀಕಾಬಾಯಿ, ಮಧುಕರ್ ಖಂದಾರೆ, ಬಸವಂತ್ ದೇವರಸೆ, ಪ್ರಕಾಶ್ ಎಡವೆ, ಸಂಜುಕುಮಾರ್ ಸೇರಿದಂತೆ ಶಾಲೆಯ ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ತಹಸೀಲ್ದಾರರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ



• ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ

ಬೀದರ ಪತ್ರಿಕಾ ಭವನದ ನಿರ್ವಹಣೆಯನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ವಹಿಸಬೇಕು ಎಂದು ಒತ್ತಾಯಿಸಿ ಇಲ್ಲಿನ

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬಸವಕಲ್ಯಾಣ ತಾಲೂಕು ಘಟಕದಿಂದ ತಹಶಿಲ್ದಾರರ ಮೂಲಕ ಜಿಲ್ಲಾಧಿಕಾರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕಾ ಅಧ್ಯಕ್ಷರಾದ ಮಾರ್ಥಂಡ್ ಜೋಶಿ. ಪ್ರಧಾನ ಕಾರ್ಯದರ್ಶಿ ಉದಯ ಕುಮಾರ ಮುಳೆ. ಜಿಲ್ಲಾ ಕಾರ್ಯ ಕಾರಿ ಸದಸ್ಯರಾದ ಗುರುನಾಥ ಗಡ್ಡೆ. ಹಾಗೂ ಡಿ. ಕೆ. ಪ್ರಹ್ಲಾದ. ಪ್ರವಿಣ ವಿಸಾಜಿ. ವಿರಶೇಟ್ಟಿ ಮಲಶೇಟ್ಟಿ. ಶಿವಪುತ್ರ ಪಾಟೀಲ. ಕುತಬೊದ್ದೀನ್. ಖಾಜಾ ಸರ್ತಾಜೋದ್ದಿನ್. ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ವಿಶೇಷ ಅಗತ್ಯವುಳ್ಳ ಮಕ್ಕಳ ಬಗ್ಗೆ ಕಾರ್ಯಕ್ರಮ



• ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ

ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ಪ್ರೌಢ ಶಾಲಾ ವಿಭಾಗದ ವತಿಯಿಂದ 'ಸಂಭ್ರಮ ಶನಿವಾರದ" ಅಂಗವಾಗಿ ವಿಷೇಶ ಅಗತ್ಯವುಳ್ಳ ಮಕ್ಕಳ ಬಗ್ಗೆ ಕಾರ್ಯಕ್ರಮ ಹಮ್ಮಿಕೋಳ್ಳಲಾಯಿತು. ಕ್ಷೇತ್ರಸಂಪನ್ಮೂಲ ಕೇಂದ್ರ ಸಂಪನ್ಮೂಲ ವ್ಯಕ್ತಿಯಾದಬಿ.ಆಯ್. ಇ. ಆರ್. ಟಿ. ಡಾ.ಶರಣಪ್ಪ ಕೆ. ಜಿ ಅವರು ಉದ್ಘಾಟಿಸಿ ಮಾತನಾಡಿ ವಿಶೇಷ ಅಗತ್ಯವುಳ್ಳ ಮಕ್ಕಳು ಅಂದರೆ 21 ಪ್ರಕಾರ ಗುರುತಿಸಲಾಗಿದೆ ದೃಷ್ಟಿದೋಷ, ಶ್ರವಣ ದೋಷ,ಕುಬ್ಜತೆ, ಬೌದ್ಧಿಕ ಅಂಗವೈಕಲ್ಯ,ಸ್ನಾಯುಕ್ಷಯ,ಹೀಮೋಫಿಲಿಯಾ , ಮಾನಸಿಕ ಅಸ್ವಸ್ಥತೆ ಇತ್ಯಾದಿ. ಪ್ರಾಥಮಿಕ ಶಾಲೆ ಹಂತದಿಂದ ಪಿ ಯು ಸಿ ವರೆಗೆ ಉಚಿತ ಶಿಕ್ಷಣ ಕಲ್ಪಿಸಲಾಗಿದೆ.ಇವರ ಸ್ಥಿತಿ ಅನುಗುಣವಾಗಿ ಸರ್ಕಾರ ಹಲವಾರು ಸಾಮಗ್ರಿಗಳನ್ನು ನೀಡುತ್ತದೆ.ಅಲ್ಲದೇ ದೇಶದ ನುರಿತ ವೈದ್ಯರಿಂದ ಉಚಿತ ತಪಾಸಣೆ ಮಾಡಿಸಿ ಗುಣಮುಖರಾಗುವ ಹಾಗೆ ಮಾಡಲಾಗುತ್ತದೆ ಎಂದರು. ಅತಿಥಿಗಳಾದ ಉದ್ಧವರಾವ ಉಪಾಸೆ ಮಾತನಾಡಿ ವಿಶೇಷ ಅಗತ್ಯವುಳ್ಳ ಮಕ್ಕಳೆಂದರೆ ದೇವರ ಮಕ್ಕಳು ಇವರಿಗೆ ಕಾಳಜಿ ವಹಿಸುವುದು ಪಾಲಕರ ಹಾಗೂ ಶಿಕ್ಷಕರ ಆದ್ಯ ಕರ್ತವ್ಯವಾಗಿದೆ ಎಂದರು. ಅಧ್ಯಕ್ಷತೆ ವಹಿಸಿದ ಉಪ ಪ್ರಾಂಶುಪಾಲರಾದ ರಾಜೇಂದ್ರ ಟಿಳೆ ಮಾತನಾಡಿ ಪ್ರತಿ ತಿಂಗಳ ಮೂರನೇ ಶನಿವಾರ ಬ್ಯಾಗ ರಹಿತ ದಿನದಿಂದು ಸರ್ಕಾರ ಸೂಚಿಸಿದಂತೆ ವಿವಿಧ ಕಾರ್ಯಕ್ರಮಗಳ ಮುಖಾಂತರ ಮಕ್ಕಳಲ್ಲಿ ಹೊಸ ಅನುಭವ ನೀಡುತ್ತಿರುವುದರಿಂದ ಮಕ್ಕಳು ತಮ್ಮ ದೈನಂದಿನ ಜೀವನದಲ್ಲಿ ಪ್ರತಿಯೊಂದು ಮಾಹಿತಿಯನ್ನು ಅಳವಡಿಸಿಕೊಳ್ಳಬೇಕು ಎಂದರು.

# ಉಚಿತ ನೋಟ್‌ಬುಕ್, ಪೆನ್ನು ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ತಾಲೂಕಿನ ಕೋಟಗ್ಯಾಳ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ಶೈಕ್ಷಣಿಕ ಪ್ರೋತ್ಸಾಹಕ್ಕಾಗಿ ಹ್ಯುಮನಿಟಿ ಟ್ರಸ್ಟ್ ವತಿಯಿಂದ ಉಚಿತವಾಗಿ ನೋಟ್‌ಬುಕ್ ಹಾಗೂ ಪೆನ್ನುಗಳನ್ನು ವಿತರಿಸಲಾಯಿತು.

ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳಿಗೆ ಶಿಕ್ಷಣದ ಜೊತೆಗೆ ಅಗತ್ಯ ಸಾಮಗ್ರಿಗಳನ್ನು ಒದಗಿಸುವ ಮೂಲಕ ಅವರ ಮುನ್ನಡೆಗೆ ನೆರವಾಗುವ ನಿಟ್ಟಿನಲ್ಲಿ ಹ್ಯುಮನಿಟಿ ಟ್ರಸ್ಟ್ ಈ ಶ್ಲಾಘನೀಯ ಕಾರ್ಯಕ್ರಮವನ್ನು ಹಮ್ಮಿಕೊಂಡಿತ್ತು. ನೋಟ್‌ಬುಕ್ ಹಾಗೂ ಪೆನ್ನುಗಳನ್ನು ಪಡೆದ ಶಾಲಾ ಮಕ್ಕಳು ಅತ್ಯಂತ ಹರ್ಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ನಿವೃತ್ತ ಮುಖ್ಯ ಗುರುಗಳಾದ ಪ್ರಕಾಶ್ ಮಾನಕರಿ, ಶಿವಕುಮಾರ್ ಧರಣಿ ಹಾಗೂ ಗ್ರಾಮದ ಮುಖಂಡರಾದ ಕಾಶಿನಾಥ್ ಪಾಟೀಲ್ ಉಪಸ್ಥಿತರಿದ್ದು ಮಕ್ಕಳನ್ನು ಹರಸಿದರು. ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯಗುರುಗಳಾದ ಪ್ರಕಾಶ್ ಮಹಾಜನ, ಸಹ ಶಿಕ್ಷಕರುಗಳಾದ ರಾಜಕುಮಾರ್ ನವಾಡೆ, ನಾಗೇಶ ಸಂಗಮೆ ಹಾಗೂ ಸುವರ್ಣ ಮಡಿವಾಳ ಸೇರಿದಂತೆ ಶಾಲಾ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

ಟ್ರಸ್ಟ್‌ನ ಈ ಸಾಮಾಜಿಕ ಕಳಕಳಿಗೆ ಶಾಲಾ ಮಂಡಳಿ ಹಾಗೂ ಗ್ರಾಮಸ್ಥರು ಧನ್ಯವಾದ ಸಮರ್ಪಿಸಿದ್ದಾರೆ.

# ಸರ್ಕಾರಿ ಶಾಲಾ ಮಕ್ಕಳಿಗೆ ಊಟದ ತಟ್ಟೆಗಳ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ 35ನೇ ವಾರ್ಡಿನ ಇಂದಿರಾನಗರದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಇನ್ನರ್ ವೀಲ್ ಕ್ಲಬ್ ಆಫ್ ಬಳ್ಳಾರಿ ವತಿಯಿಂದ ಸುಮಾರು 250 ಊಟದ ತಟ್ಟೆಗಳನ್ನು ವಿತರಿಸಲಾಯಿತು.

ವಾರ್ಡ್ ಸದಸ್ಯ ಶ್ರೀನಿವಾಸುಲು ಮಿಂಚು ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳ ಮಧ್ಯಾಹ್ನದ ಊಟದ ವ್ಯವಸ್ಥೆಗೆ ನೆರವಾಗುವ ಉದ್ದೇಶದಿಂದ ತಟ್ಟೆಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಗಣ್ಯರು, ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಹಾಗೂ ಮಕ್ಕಳ ಮೂಲಭೂತ ಅಗತ್ಯಗಳ ಪೂರೈಕೆಗೆ ಸಮಾಜದ ವಿವಿಧ ಸಂಘ-ಸಂಸ್ಥೆಗಳು ಕೈಜೋಡಿಸುವುದು ಶ್ಲಾಘನೀಯ ಕಾರ್ಯ ಎಂದು ಅಭಿಪ್ರಾಯಪಟ್ಟರು.

ಈ ಕಾರ್ಯಕ್ರಮದಲ್ಲಿ ಇನ್ನರ್ ವೀಲ್ ಕ್ಲಬ್ ಆಫ್ ಬಳ್ಳಾರಿಯ ಸಂಸ್ಥಾಪಕ ಅಧ್ಯಕ್ಷೆ ಅಲ್ಲಂ ರಚನಾ, ನಾಮ ಸುಧಾ, ಅಶ್ವಿನಿ ಮುರಾರಿ, ರೂಪ ನಾಗಳ್ಳಿ ಸೇರಿದಂತೆ ಕ್ಲಬ್‌ನ ಸದಸ್ಯರು ಭಾಗವಹಿಸಿದ್ದರು ಹಾಗೂ

ಶಾಲೆಯ ಮುಖ್ಯ ಶಿಕ್ಷಕರಾದ ಹೊನ್ನೂರ್ ಬಿ. ಶಿಕ್ಷಕರಾದ ಎಂ. ಶಾಂತಕುಮಾರಿ, ಸಿದ್ದಪ್ಪ, ಗೋನಾಲ್, ಮಲ್ಲಿಕಾ ಬೇಗಂ, ಕೆ. ಕಲ್ಪನಾ, ಅನುಪಮ, ನೀಲಾವತಿ, ರಾಜೇಶ್ವರಿ, ರೇಣುಕಾ ಹಾಗೂ ಸುವರ್ಣ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಪರವಾಗಿ ದಾನಿಗಳ ಸೇವಾ ಮನೋಭಾವವನ್ನು ಅಭಿನಂದಿಸಿದರು.

# ಬಾಡಿಗೆ ಕಟ್ಟಡ ಬೇಕಾಗಿದೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಹೊಸದಾಗಿ ಮಂಜೂರಾಗಿರುವ ಮೆಟ್ರಿಕ್ ನಂತರದ ಪುರುಷ ಹಾಗೂ ಮಹಿಳಾ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಬಾಡಿಗೆ ಆಧಾರದ ಮೇಲೆ ಖಾಸಗಿ ಕಟ್ಟಡಗಳ ಅವಶ್ಯಕತೆ ಇದ್ದು, ಆಸಕ್ತ ಮಾಲೀಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಸರ್ಕಾರದ ಆದೇಶ ಹಾಗೂ ಸುತ್ತೋಲೆಯ ಮಾನದಂಡಗಳ ಪ್ರಕಾರ, ಲೋಕೋಪಯೋಗಿ ಇಲಾಖೆಯು ನಿಗದಿಪಡಿಸುವ ಬಾಡಿಗೆ ದರಕ್ಕನುಗುಣವಾಗಿ ತಮ್ಮ ಕಟ್ಟಡಗಳನ್ನು ಬಾಡಿಗೆಗೆ ನೀಡಲು ಇಚ್ಛಿಸುವ ಮಾಲೀಕರು ಇಲಾಖೆಯನ್ನು ಸಂಪರ್ಕಿಸಬಹುದಾಗಿದೆ.

ಬಳ್ಳಾರಿ ನಗರದಲ್ಲಿ ಹೊಸದಾಗಿ ಒಟ್ಟು 02 (ಪುರುಷ ಹಾಗೂ ಮಹಿಳಾ) ವಿದ್ಯಾರ್ಥಿನಿಲಯಗಳನ್ನು ಆರಂಭಿಸಲಾಗುತ್ತಿದ್ದು, ಅದಕ್ಕೆ ಸೂಕ್ತವಾದ ಖಾಸಗಿ ಕಟ್ಟಡ ಬೇಕಾಗಿದೆ. ಮಾಲೀಕರು ಕಚೇರಿ ವೇಳೆಯಲ್ಲಿ ಈ ಕೆಳಗಿನ ವಿಳಾಸಕ್ಕೆ ಭೇಟಿ ನೀಡಬಹುದಾಗಿದೆ.

*ಸಂಪರ್ಕಿಸಬೇಕಾದ ಕಚೇರಿ ವಿಳಾಸ:*

ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, 1ನೇ ಮಹಡಿ, ಡಿಸ್ನಿ ಫಂಕ್ಷನ್ ಹಾಲ್ ಎದುರುಗಡೆ, ಎಲ್.ಎಲ್.ಸಿ ಕಾಲೋನಿ, ಓ.ಪಿ. ಸರ್ಕಲ್ ಹತ್ತಿರ, ಕಂಟೋನ್ಮೆಂಟ್, ಬಳ್ಳಾರಿ - 583104.

ಹೆಚ್ಚಿನ ಮಾಹಿತಿ ಹಾಗೂ ವಿವರಗಳಿಗಾಗಿ ದೂ.08392-294492 ಗೆ ಸಂಪರ್ಕಿಸಬಹುದಾಗಿದೆ ಎಂದು ಬಳ್ಳಾರಿ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೀಟ್ ಪರೀಕ್ಷೆ ನಿಷೇಧಿತ ಪ್ರದೇಶ ಘೋಷಣೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆಯು ಜೂ.21 ರಂದು ಮಧ್ಯಾಹ್ನ 02 ರಿಂದ ಸಂಜೆ 05.30 ರವರೆಗೆ ನಡೆಯಲಿದ್ದು, ಪರೀಕ್ಷೆಯನ್ನು ಸುಗಮವಾಗಿ ಮತ್ತು ಪಾರದರ್ಶಕವಾಗಿ ನಡೆಸಲು ಪರೀಕ್ಷಾ ಕೇಂದ್ರಗಳ ಸುತ್ತ-ಮುತ್ತಲಿನ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತ ಪ್ರದೇಶ ಎಂದು ಘೋಷಿಸಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಆದೇಶಿಸಿದ್ದಾರೆ.

ಬಳ್ಳಾರಿ ನಗರದ ಒಟ್ಟು 11 ಪರೀಕ್ಷಾ ಕೇಂದ್ರಗಳಲ್ಲಿ ಈ ಪರೀಕ್ಷೆ ನಡೆಯಲಿದ್ದು, ಕಾನೂನು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023 ರ ಕಲಂ 163 ರ ಅಡಿಯಲ್ಲಿ ತಮಗಿರುವ ಅಧಿಕಾರವನ್ನು ಚಲಾಯಿಸಿ ಈ ಆದೇಶವನ್ನು ಹೊರಡಿಸಿದ್ದಾರೆ.

ಪರೀಕ್ಷಾ ಕೇಂದ್ರದ ಸುತ್ತಮುತ್ತ ಅನಧಿಕೃತ ವ್ಯಕ್ತಿಗಳು ಹಾಗೂ ವ್ಯಕ್ತಿಗಳ ಗುಂಪುಗಳು ಜಮಾಯಿಸುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ.

ಪರೀಕ್ಷಾ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿರುವ ಎಲ್ಲಾ ಜೆರಾಕ್ಸ್ ಅಂಗಡಿಗಳು ಹಾಗೂ ಇಂಟರ್ನೆಟ್ ಸೆಂಟರ್‌ಗಳು ಕಾರ್ಯನಿರ್ವಹಿಸದಂತೆ ಕಟ್ಟುನಿಟ್ಟಿನ ಪ್ರತಿಬಂಧಕ ಆದೇಶ ಜಾರಿಗೊಳಿಸಲಾಗಿದೆ.

ಈ ಕಟ್ಟುನಿಟ್ಟಿನ ನಿಯಮಗಳು ಪರೀಕ್ಷೆಯ ಮೇಲ್ವಿಚಾರಣೆ ಹಾಗೂ ಕರ್ತವ್ಯ ನಿರ್ವಹಿಸುವ ಸಿಬ್ಬಂದಿ ವರ್ಗದವರಿಗೆ ಅನ್ವಯಿಸುವುದಿಲ್ಲ ಎಂದು ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.

# ಹೊಸ ಕಾರ್ಮಿಕ ಸಂಹಿತೆ-2025' ಜಾಗೃತಿ ಕಾರ್ಯಾಗಾರ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಹಾಗೂ ಮಿತ್ರಾ ಟೆಕ್ನಾಲಜೀಸ್ ಅವರ ಜಂಟಿ ಆಶ್ರಯದಲ್ಲಿ 'ಹೊಸ ಕಾರ್ಮಿಕ ಸಂಹಿತೆ-2025'ರ ಜಾಗೃತಿ ಕಾರ್ಯಾಗಾರವು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಸಭಾಂಗಣದಲ್ಲಿ ಶನಿವಾರ ನಡೆಯಿತು.

ಇಎಸ್‌ಐಸಿನ ನಿವೃತ್ತ ಅಧಿಕಾರಿ ಶೇಖ್ ಹನೀಫ್ ಅವರು, ಇಎಸ್‌ಐಸಿ ಮತ್ತು ಇಪಿಎಫ್‌ಒಗಳ ಹೊಸ ನಿಯಮಗಳು ಮತ್ತು ಉದ್ಯೋಗಿಗಳ ಸಾಮಾಜಿಕ ಭದ್ರತೆ, ಕಾನೂನುಬದ್ಧ ಸೌಲಭ್ಯಗಳು ಹಾಗೂ ವೇತನ ಪಾವತಿಯ ದಾಖಲೆಗಳ ನಿರ್ವಹಣಾ ವ್ಯವಸ್ಥೆಯ ಕುರಿತು ಸಮಗ್ರ ಮಾಹಿತಿ ನೀಡಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಅವ್ವಾರ್ ಮಂಜುನಾಥ್ ಅವರು, ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ, ಹೊಸ ಕಾರ್ಮಿಕ ಸಂಹಿತೆ-2025ರ ಕುರಿತು ಕೈಗಾರಿಕಾ ಮತ್ತು ಉದ್ಯೋಗ ಕ್ಷೇತ್ರದಲ್ಲಿ ಇರುವ ಮಾನವ ಸಂಪನ್ಮೂಲ ವಿಭಾಗದ ಪ್ರತಿಯೊಬ್ಬರೂ ತಿಳಿದುಕೊಂಡು, ಅರ್ಥ ಮಾಡಿಕೊಳ್ಳಬೇಕು. ಈ ಮೂಲಕ ಕೆಲಸಗಾರರಿಗೆ ಹೆಚ್ಚಿನ ಪ್ರಮಾಣದಲ್ಲಿ ಕೇಂದ್ರ ಸರ್ಕಾರದ ಸೌಲಭ್ಯಗಳು ಸಿಗುವಂತೆ ಮುಂಜಾಗ್ರತೆಗಳನ್ನು ಕೈಗೊಳ್ಳಲು ಅನುಕೂಲವಾಗಲಿದೆ ಎಂದರು. ಅಷ್ಟೇ ಅಲ್ಲ, ಕೆಲಸಗಾರರ ಸಾಮಾಜಿಕ ಭದ್ರತೆ, ಕಾನೂನುಬದ್ಧ ಸೌಲಭ್ಯಗಳು ಹಾಗೂ ಉತ್ತಮವಾದ ಆಡಳಿತವನ್ನು ಪಾಲನೆ ಮಾಡಲು ಅನುಕೂಲವಾಗಲಿದೆ. ಈ




ನಿಟ್ಟಿನಲ್ಲಿ ಕೇಂದ್ರ ಸರ್ಕಾರದ 'ಹೊಸ ಕಾರ್ಮಿಕ ಸಂಹಿತೆ-2025' ಅನ್ನು ಪ್ರತಿಯೊಂದು ಸಂಸ್ಥೆಯೂ ಪಾಲನೆ ಮಾಡಬೇಕು ಎಂದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಗೌರವ ಕಾರ್ಯದರ್ಶಿಗಳಾದ ಕೆ.ಸಿ. ಸುರೇಶಬಾಬು ಅವರು ವಂದನಾರ್ಪಣೆ ಸಲ್ಲಿಸಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಹಿರಿಯ ಉಪಾಧ್ಯಕ್ಷರಾದ ಎಸ್. ದೊಡ್ಡನಗೌಡ, ಉಪಾಧ್ಯಕ್ಷರಾದ ಸೊಂತಾ ಗಿರಿಧರ್, ಜಂಟಿ ಕಾರ್ಯದರ್ಶಿಗಳಾದ, ಡಾ. ಮರ್ಚೇಡ್ ಮಲ್ಲಿಕಾರ್ಜುನಗೌಡ, ವಿ. ರಾಮಚಂದ್ರ, ಖಜಾಂಚಿಗಳಾದ ಸಿ.ಎಸ್. ಸತ್ಯನಾರಾಯಣ, ಈವೆಂಟ್ಸ್ ಕಮಿಟಿ ಚೇರ್ಮನ್ ನೇಕಾರ್ ನಾಗರಾಜ್, ಪತ್ರಿಕಾ ಹಾಗೂ ಮಾಧ್ಯಮ ಕಮಿಟಿ ಚೇರ್ಮನ್ ಟಿ. ಶ್ರೀನಿವಾಸರಾವ್, ಮ್ಯಾಗ್ಜಿನ್ ಕಮಿಟಿ ಚೇರ್ಮನ್ ಕೌಡಕಿ ಹನುಮೇಶ್, ಬುಸ್ಮಾದ ಮರಿಸ್ವಾಮಿರೆಡ್ಡಿ,

ಖಾಸಗಿ ಶಾಲೆಗಳ ಮಾನವ ಸಂಪನ್ಮೂಲ ವಿಭಾಗದ ಮುಖ್ಯಸ್ಥರು, ವಿವಿಧ ಕೈಗಾರಿಗಳು - ಸಂಘ ; ಸಂಸ್ಥೆಗಳ ಮುಖ್ಯಸ್ಥರು ಈ ಕಾರ್ಯಾಗಾರದಲ್ಲಿ ಪಾಲ್ಗೊಂಡಿದರು.

# ಬಳ್ಳಾರಿ ಜಿಲ್ಲೆಯಲ್ಲಿ ವಿಶೇಷ 'ರೌಡಿ ನಿಗ್ರಹ ತಂಡ' ರಚನೆ: ಎಸ್ಪಿ ಆದೇಶ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲೆಯಲ್ಲಿ ರೌಡಿ ಆಸಾಮಿಗಳ ಕಾನೂನು ಬಾಹಿರ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಹಾಗೂ ಸಾರ್ವಜನಿಕರ ಶಾಂತಿಗೆ ಭಂಗ ತರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಜಿಲ್ಲಾ ಪೊಲೀಸ್ ಅಧೀಕ್ಷಕರ ನೇರ ಉಸ್ತುವಾರಿಯಲ್ಲಿ ಜಿಲ್ಲೆಯಾದ್ಯಂತ 03 ವಿಶೇಷ "ರೌಡಿ ನಿಗ್ರಹ ತಂಡ"ಗಳನ್ನು ರಚಿಸಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್ ಅವರು ಆದೇಶಿಸಿದ್ದಾರೆ.

*ಮೂರು ಉಪ-ವಿಭಾಗಗಳಲ್ಲಿ ಹದ್ದಿನ ಕಣ್ಣು:*

ರೌಡಿಗಳ ಚಟುವಟಿಕೆಗಳನ್ನು ಸಂಪೂರ್ಣವಾಗಿ ನಿಯಂತ್ರಿಸುವ ನಿಟ್ಟಿನಲ್ಲಿ ಬಳ್ಳಾರಿ ನಗರ, ಸಿರುಗುಪ್ಪ ಹಾಗೂ ತೋರಣಗಲ್ಲು ಉಪ-ವಿಭಾಗದ ಮೂವರು




ಡಿ.ಎಸ್.ಪಿ. ಗಳ ನೇತೃತ್ವದಲ್ಲಿ ಈ ತಂಡಗಳನ್ನು ರಚಿಸಲಾಗಿದೆ. ಈ ತಂಡಗಳಲ್ಲಿ ಸಿ.ಪಿ.ಐ., ಪಿ.ಎಸ್.ಐ. ಹಾಗೂ ನುರಿತ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳು ಕಾರ್ಯನಿರ್ವಹಿಸಲಿದ್ದಾರೆ.

*ರೌಡಿ ನಿಗ್ರಹ ತಂಡದ ಜವಾಬ್ದಾರಿಗಳು:*

ನಿರಂತರ ನಿಗಾ: ಉಪ-ವಿಭಾಗದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ರೌಡಿ ಆಸಾಮಿಗಳ ಚಲನವಲನಗಳ ಮೇಲೆ ಹದ್ದಿನ ಕಣ್ಣಿಡುವುದು.

ಹಳೆ ಪ್ರಕರಣಗಳ ಮರುಪರಿಶೀಲನೆ: ರೌಡಿಗಳ ವಿರುದ್ಧ ಈಗಾಗಲೇ ದಾಖಲಾಗಿರುವ ಪ್ರಕರಣಗಳ ಪರಿಶೀಲನೆ ಹಾಗೂ ಸೂಕ್ತ ದಾಖಲಾತಿಗಳನ್ನು ನಿರ್ವಹಿಸುವುದು.

ಗೂಂಡಾ ಕಾಯ್ದೆ ಪ್ರಸ್ತಾಪ: ಪದೇ ಪದೇ ಕಾನೂನು ಕೈಗೆತ್ತಿಕೊಳ್ಳುವ ಹಾಗೂ ಶಾಂತಿ ಕದಡುವ ವ್ಯಕ್ತಿಗಳ ವಿರುದ್ಧ ಗಡಿಪಾರು, ಗೂಂಡಾ ಕಾಯ್ದೆ ಹಾಗೂ ಕೋಕಾ ಕಾಯ್ದೆಯಡಿ ಕಠಿಣ ಕಾನೂನು ಕ್ರಮ ಜರುಗಿಸುವುದು.

ಹಠಾತ್ ದಾಳಿ: ಜಿಲ್ಲೆಯ ಸೂಕ್ಷ ?? ಪ್ರದೇಶಗಳಲ್ಲಿ ಹಠಾತ್ ದಾಳಿಗಳನ್ನು ನಡೆಸಿ, ರೌಡಿ ಆಸಾಮಿಗಳನ್ನು ತಪಾಸಣೆ ನಡೆಸಿ ಕಾನೂನು ಕ್ರಮ ಕೈಗೊಳ್ಳುವುದು.

ಜಿಲ್ಲೆಯಲ್ಲಿ ಒಟ್ಟಾರೆಯಾಗಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ನಿಟ್ಟಿನಲ್ಲಿ ಈ ಮೂರು ವಿಶೇಷ ತಂಡಗಳು ಸತತವಾಗಿ ಕಾರ್ಯಾಚರಣೆಯಲ್ಲಿ ತೊಡಗಿರುತ್ತವೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿಂದುಳಿದವರ, ಕಡುಬಡವರ ಸ್ವಾವಲಂಬನೆಗೆ ಸರ್ಕಾರ ಬದ್ಧ: ಶಾಸಕಿ ಅನ್ನಪೂರ್ಣ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಸಮಾಜದ ಹಿಂದುಳಿದ ಹಾಗೂ ಬಡವರ ಸ್ವಾವಲಂಬಿ ಬದುಕಿಗೆ ಅಗತ್ಯವಿರುವ ಸೌಕರ್ಯಗಳನ್ನು ಕಲ್ಪಿಸಿಕೊಡುವ ಪ್ರಾಮಾಣಿಕ ಪ್ರಯತ್ನವನ್ನು ನಮ್ಮ ಸರ್ಕಾರ ನಿರಂತರವಾಗಿ ಮಾಡುತ್ತಿದೆ ಎಂದು ಸಂಡೂರು ಶಾಸಕಿ ಈ. ಅನ್ನಪೂರ್ಣ ಅವರು ಹೇಳಿದರು.

ಭವಿಷ್ಯ ನಿಧಿ ಸಂಸ್ಥೆ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ, ತೋರಣಗಲ್ಲು ವಿದ್ಯಾನಗರದ ಜೆಎಸ್‌ಡಬ್ಲ್ಯೂ ಟೌನ್‌ಶಿಪ್‌ನಲ್ಲಿರುವ 'ಜೆಮ್ಯಾಕ್ಸ್' ಸಭಾಂಗಣದಲ್ಲಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ 'ಪ್ರಧಾನ್ ಮಂತ್ರಿ ವಿಕಸಿತ್ ಭಾರತ್ ರೋಜ್‌ಗಾರ್ ಯೋಜನೆ' ಅಡಿ ಶುಕ್ರವಾರ ಹಮ್ಮಿಕೊಂಡಿದ್ದ ಬೃಹತ್ ಸಾರ್ವಜನಿಕ ಸಂಪರ್ಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಂಡೂರು ತಾಲೂಕು ಸುತ್ತಮುತ್ತ ಬೆಟ್ಟಗುಡ್ಡಗಳಿಂದ ಆವೃತವಾಗಿದ್ದು, ಬೇಸಾಯದ ಭೂಮಿ ತೀರಾ ಕಡಿಮೆಯಿದೆ. ಹೀಗಾಗಿ ಇಲ್ಲಿನ ಬಹುತೇಕ ಜನರು ಜೆಎಸ್‌ಡಬ್ಲ್ಯೂ ಸಂಸ್ಥೆಯನ್ನೇ ಆಶ್ರಯಿಸಿ ಬದುಕುತ್ತಿದ್ದಾರೆ. ಅವರ ಉದ್ಯೋಗ ಮತ್ತು ಜೀವನ ಭದ್ರತೆಗೆ ಸಂಸ್ಥೆ ಸದಾ ಒತ್ತು ನೀಡಬೇಕು ಎಂದು ತಿಳಿಸಿದರು.

ಕೈಗಾರಿಕಾವಲಯದ ಸುತ್ತಮುತ್ತಲಿನ ರಾಸಾಯನಿಕ




ಮಿಶ್ರಿತ ಗಾಳಿಯಿಂದಾಗಿ ಸಾರ್ವಜನಿಕರಲ್ಲಿ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುತ್ತಿದ್ದು, ಈ ಬಗ್ಗೆ ಜೆಎಸ್‌ಡಬ್ಲ್ಯೂ ಸಂಸ್ಥೆಯು ವಿಶೇಷ ಗಮನಹರಿಸಬೇಕು. ಇಲ್ಲಿನ ಸುತ್ತಮುತ್ತಲಿನ ಜನರೆಲ್ಲರೂ ಗಣಿ ಕಾರ್ಮಿಕರು ಹಾಗೂ ಬಡ ವರ್ಗದವರಾಗಿದ್ದಾರೆ. ಇವರ ಹಿತದೃಷ್ಟಿಯಿಂದ ತಾಲೂಕಿನಲ್ಲಿ ಸುಸಜ್ಜಿತ ಉಚಿತ ಆಸ್ಪತ್ರೆಯೊಂದನ್ನು ಸ್ಥಾಪಿಸಿಕೊಡಬೇಕು ಎಂದು ಪ್ರಸ್ತಾಪಿಸಿದರು.

ನಮ್ಮ ಸಂಡೂರು ತಾಲೂಕಿನ ಅಸ್ಮಿತೆ ಎಂದರೆ ಅದು ಜೆಎಸ್‌ಡಬ್ಲ್ಯೂ ಸಂಸ್ಥೆ. ಹೊರಗಿನವರು ಯಾರೇ ಸಂಡೂರು ಎಲ್ಲಿದೆ ಎಂದು ಕೇಳಿದಾಗ, ಜೆಎಸ್‌ಡಬ್ಲ್ಯೂ ಸಂಸ್ಥೆ ಇರುವ ಕ್ಷೇತ್ರ ಎಂದು ಗುರುತಿಸಿದರೆ ತಕ್ಷಣವೇ ಜನ ಗುರುತಿಸುತ್ತಾರೆ. ಸಂಸ್ಥೆಯ ಸಿಎಸ್‌ಆರ್ ಯೋಜನೆಯಡಿ ತಾಲೂಕಿನ ಸರ್ವಾಂಗೀಣ ಅಭಿವೃದ್ಧಿಗೆ ಸಾಕಷ್ಟು ನೆರವು ಸಿಗುತ್ತಿದ್ದು, ಸಂಸ್ಥೆಯು ಸಮಾಜಸೇವೆಯಲ್ಲಿಯೂ ಕೈಜೋಡಿಸುತ್ತಿರುವುದು ಶ್ಲಾಘನೀಯ ಎಂದರು.

ವಿಕಸಿತ ಭಾರತ ಯಾತ್ರೆಯಲ್ಲಿ ಹಲವು ಕೈಗಾರಿಕಾ ಸಂಸ್ಥೆಗಳೊಂದಿಗೆ ನಾವೆಲ್ಲರೂ ಸದೃಢ ಹೆಜ್ಜೆ ಇಡುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಕೈಗಾರಿಕಾ ಸಂಸ್ಥೆಗಳು ಇನ್ನು ದೊಡ್ಡ ಮಟ್ಟದಲ್ಲಿ ಬೆಳೆದು, ದೇಶಕ್ಕೆ ಹೆಚ್ಚಿನ ಕೊಡುಗೆ ನೀಡಲಿ ಹಾಗೂ ಯುವಜನತೆಗೆ ಹೆಚ್ಚಿನ ಉದ್ಯೋಗಾವಕಾಶಗಳನ್ನು ಸೃಷ್ಟಿಸಲಿ ಎಂದು ಆಶಿಸಿದರು.

ಬಳ್ಳಾರಿ ಪ್ರಾದೇಶಿಕ ಭವಿಷ್ಯ ನಿಧಿ ಕಚೇರಿಯ ಆಯುಕ್ತ ಕೆ.ವಿ. ಪ್ರವೀಣ್ ಅವರು ಮಾತನಾಡಿ, ಮೊದಲ ಬಾರಿಗೆ ಉದ್ಯೋಗಕ್ಕೆ ಸೇರಿ ಭವಿಷ್ಯ ನಿಧಿ ಖಾತೆ ಪಡೆಯುತ್ತಿರುವ ಹೊಸ ಉದ್ಯೋಗಿಗಳಿಗೆ ಇದು ಅನ್ವಯಿಸುತ್ತದೆ. ಬಳ್ಳಾರಿ ವಲಯದಲ್ಲಿ ಇದುವರೆಗೆ ಇಂತಹ 1,374 ಹೊಸ ಕಾರ್ಮಿಕರು ಈ ಯೋಜನೆಯಡಿ ನೇರ ಹಣಕಾಸು ನೆರವು ಪಡೆಯಲು ಅರ್ಹರಾಗಿದ್ದಾರೆ. ಈ ಭಾಗದಡಿ ಉದ್ಯೋಗಿಗಳಿಗೆ ನೇರ ಲಾಭ ಸಿಗದಿದ್ದರೂ, ಉದ್ಯೋಗದಾತ ಸಂಸ್ಥೆಗಳಿಗೆ ಆರ್ಥಿಕ ನೆರವು ಸಿಗುತ್ತದೆ. ಬಳ್ಳಾರಿ ವಲಯದಲ್ಲಿ ಇಂತಹ 248 ಉದ್ಯೋಗದಾತ ಸಂಸ್ಥೆಗಳು ಈ ಸೌಲಭ್ಯ ಪಡೆದುಕೊಂಡಿವೆ. ಕೇಂದ್ರ ಸರ್ಕಾರದ ಈ ವಿನೂತನ ಯೋಜನೆಯು ಬಳ್ಳಾರಿ ಭಾಗದ ಸಾವಿರಾರು ಉದ್ಯೋಗಿಗಳಿಗೆ ಮತ್ತು ಉದ್ಯೋಗದಾತ ಸಂಸ್ಥೆಗಳಿಗೆ ಆರ್ಥಿಕವಾಗಿ ದೊಡ್ಡ ಆಸರೆಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನವದೆಹಲಿಯ ವಿಜ್ಞಾನ ಭವನದಲ್ಲಿ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರಮೋದಿಯವರು ಹೊಸದಾಗಿ ಉದ್ಯೋಗಕ್ಕೆ ಸೇರಿದ ಅರ್ಹ ಉದ್ಯೋಗಿಗಳಿಗೆ ಪ್ರೋತ್ಸಾಹ ಸೌಲಭ್ಯ ವಿತರಣೆ ಮಾಡಿದ ಕಾರ್ಯಕ್ರಮದ ನೇರಪ್ರಸಾರವನ್ನು ವೀಕ್ಷಿಸಲಾಯಿತು.

ಬಳಿಕ ಮೊದಲ ಬಾರಿ ಉದ್ಯೋಗಕ್ಕೆ ಸೇರಿ ಇಪಿಎಫ್‌ಓ ಖಾತೆ ಹೊಂದಿದ ಉದ್ಯೋಗಿಗಳಿಗೆ ಪ್ರೋತ್ಸಾಹ ಧನ ವಿತರಣೆ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ ವಿಶ್ವಜಿತ್ ಮೆಹೆತಾ, ಇಪಿಎಫ್‌ಓ ಸಂಸ್ಥೆಯ ಹಿರಿಯ ಅಧಿಕಾರಿಗಳು, ಜೆಎಸ್‌ಡಬ್ಲ್ಯೂ ಸಂಸ್ಥೆಯ ಅಧಿಕಾರಿಗಳು ಇದ್ದರು.

# ರಂಗಭೂಮಿಗೆ ಹೇಮೇಶ್ವರ ಕೊಡುಗೆ ಅಪಾರ

• ಮಲ್ಲಮ್ಮ ನುಡಿ ವಾರ್ತೆಕಂಪ್ಲಿ

ತಾಲೂಕಿನ ಜೂನ್ 20 ರಂದು 12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ಶ್ರೀ ಸಿದ್ದೇಶ್ವರ ರಂಗ ಸಂಸ ಕಲ್ಚರಲ್ ಟ್ರಸ್ಟ್ (ರಿ)ಮಾವಿನಹಳ್ಳಿ ಟ್ರಸ್ಟ್ ವತಿಯಿಂದ ಯೋಗ ದಿನಾಚರಣೆ ಪ್ರಯುಕ್ತ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸರಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ವಸತಿ ನಿಲಯದ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ರಂಗಭೂಮಿ ನಿರಂತರವಾಗಿ ಕಾರ್ಯಗತಗೊಳಿಸಲು ಹೇಮೇಶ್ವರ ಗ್ರಾಮೀಣ ಭಾಗದಲ್ಲಿ ಸಾಂಸ್ಕೃತಿಕ ಕಲೆಗಳನ್ನು ಬೆಳಸಲು ಮುಂದಾಗಿದ್ದಾರೆ. ಯಾವಾಗಲೂ ಗ್ರಾಮೀಣ ಭಾಗದ ಜನಪದ, ತತ್ವಪದಗಳು, ಭಾವಗೀತೆಗಳು, ಲಾವಣಿ ಪದಗಳು, ಬಯಲಾಟ, ನಾಟಕ,ಸಂಗೀತ ಮತ್ತು ನೃತ್ಯ ಕಾರ್ಯಕ್ರಮಗಳನ್ನು ಉಳಿಸಿ ಬೆಳೆಸುವ ಕೆಲಸ ಮಾಡುತ್ತಿದ್ದಾರೆ ಹೇಮೇಶ್ವರ ಎಂದು ಸಸಿಗೆ ನೀರು ಹಾಕುವುದರ ಮೂಲಕ ಉದ್ಘಾಟನಾ ಕಾರ್ಯಕ್ರಮ ನೇರವೇರಿಸಿದ ಭಜನೆ ಮತ್ತು ತತ್ವಪದಗಳು ಕಲಾವಿದರು ಶ್ರೀ ಬಿ.ಸಿದ್ದಪ್ಪನವರು ಉದ್ಘಾಟಕರ ನುಡಿಯನ್ನು ನುಡಿದರು.

ಇಂದಿನ ದಿನಗಳಲ್ಲಿ ಮಕ್ಕಳು ಕಲೆಗಳು ಪರಿಚಯ ಇಲ್ಲದೆ ಇರುವುದು ಕಂಡುಬರುತ್ತದೆ. ಅದಕ್ಕಾಗಿ ಗ್ರಾಮೀಣ ಭಾಗದಲ್ಲಿ ಇಂತಹ ಕಲೆಗಳನ್ನು ಬೆಳಿಸುವ ಕೆಲಸ ಸರಕಾರ ಮಾಡಬೇಕು ಎಂದು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ರಂಗಭೂಮಿ ಕಲಾವಿದರಾದ ಶ್ರೀ ಜಿ.ಪಾಂಡುರಂಗ ಹೇಳಿದರು.

ರಂಗಭೂಮಿ ಚಿಕ್ಕ ವಯಸ್ಸಿನಲ್ಲಿ ಕಲೆಸುವ ಕೆಲಸ ಮನೆಯಲ್ಲಿ ತಂದೆ ತಾಯಿ ಮತ್ತು ಗುರುಗಳು ಮಾಡಬೇಕು ಅದಕ್ಕಾಗಿ ಸರ್ಕಾರ ಶಾಲೆಯಲ್ಲಿ ರಂಗಭೂಮಿ ಶಿಕ್ಷಕರು ನೇಮಕಾತಿ ಮಾಡುವುದರ ಮೂಲಕ ನಾಟಕ ಶಿಕ್ಷಕರ, ಸಂಗೀತ ಶಿಕ್ಷಕರ ಮತ್ತು ನೃತ್ಯ ಶಿಕ್ಷಕರ ನೇಮಕಗೊಳಿಸಿ ರಂಗಭೂಮಿ ಶಿಕ್ಷಣ ನೀಡಲು ಮುಂದಾಗಬೇಕೆಂದು ಮುಖ್ಯ ಅತಿಥಿಗಳಾಗಿ ಬಾಗವಹಿಸಿದ ರಂಗಭೂಮಿ ಕಲಾವಿದರಾದ ಶ್ರೀ ಡಿ.ಜಡೀಯಪ್ಪ ಹೇಳಿದರು.

ಯೋಗದಿಂದ ರೋಗ ಮುಕ್ತಿ ಎಲ್ಲರೂ ಪ್ರತಿದಿನ ಯೋಗ,ಧ್ಯಾನ ಕೈಗೊಂಡು ನಡೆಯಬೇಕು ನಮ್ಮ ಆರೋಗ್ಯ ದಿನ ದಿನ ಅನಾರೋಗ್ಯದ ಕಡೆ ಸರಿಯುತ್ತಿದೆ ಅದಕ್ಕಾಗಿ ಮಕ್ಕಳು ದೈಹಿಕ ಮತ್ತು ಮಾನಸಿಕವಾಗಿ ಸಧೃಡರಾಗಲು ಯೋಗವನ್ನು ಕೈಗೊಳ್ಳಬೇಕೆಂದು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಆಯುಷ್ಮಾನ್ ಆರೋಗ್ಯ ಮಂದಿರ ಸಣಾಪುರದ ವೈದ್ಯರು ಶ್ರೀ ಡಾ.ಬಸವರಾಜ ಹೇಳಿದರು.

ಕಲೆ,ಸಾಹಿತ್ಯ, ಮತ್ತು ಯೋಗ ಈ ನಂಟು ಬೆಸೆಯುವ ಗಂಟು ಪ್ರತಿಯೊಬ್ಬರೂ ನಮ್ಮ ಆರೋಗ್ಯ ನಮ್ಮ ಕೈಯಲ್ಲಿ ನಮ್ಮ ಕುಟುಂಬದ ರಕ್ಷಣೆ ನಮ್ಮೆಲ್ಲರ ಹೊಣೆ ಎಂಬಂತೆ ಪ್ರತಿದಿನ ನಾವು ಯೋಗ ಮತ್ತು ಧ್ಯಾನ ಕೈಗೊಂಡು ನಡೆಯಬೇಕು ನಾವು ಯೋಗ ಕಲಿತು ನಮ್ಮ ಮನೆಯಲ್ಲಿ ಇರುವ ಎಲ್ಲರೂ ಯೋಗ ಮಾಡಲು ಪ್ರೇರಪಿಸಬೇಕೆಂದು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಆಯುಷ್ಮಾನ್ ಆರೋಗ್ಯ ಮಂದಿರ ಹಂಪಾದೇವನಹಳ್ಳಿ ವೈದ್ಯಾಧಿಕಾರಿಳು ಶ್ರೀ ಡಾ.ಪ್ರಲ್ಹಾದ ಆರ್. ಐಲಿಯವರು ಹೇಳಿದರು.



ಸಾಂಸ್ಕೃತಿಕ ಕಾರ್ಯಕ್ರಮಗಳು:- ತತ್ವಪದಗಳು:-ಶ್ರೀ ಸದಾಶಿವ ಗೌಡ.ಬಿ ಮತ್ತು ತಂಡದವರು ಎಮ್ಮಿಗನೂರು. ಯೋಗ ನೃತ್ಯ ಶ್ರೀ ಕಗ್ಗಲ್ ಲೋಕಣ್ಣ ಮತ್ತು ತಂಡದವರು ಕುರುಗೋಡು. ಹಾಗೂ ಸಮೂಹ ನೃತ್ಯ :- ಶ್ರೀ ಹೆಚ್ ಲೋಕರಾಜ್ ಮತ್ತು ತಂಡದವರು ಕುರುಗೋಡು ನೇರವೇರಿಸಿದರು.ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿದವರು:-ಬಯಲಾಟ ಮತ್ತು ರಂಗಭೂಮಿ ಕಲಾವಿದರು ಶ್ರೀ ಬಿ.ಸಿದ್ದಪ್ಪ ಧರ್ಮಪ್ಪ ಮಾವಿನಹಳ್ಳಿ,ಸರಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದ ಕಿರಿಯ ಮೇಲ್ವಿಚಾರಕ ಶ್ರೀ ಮಾರೇಶ,ತತ್ವಪದಗಳು ಕಲಾವಿದರಗಳು ಶರಣ,ಸ್ವಾಮಯ್ಯ,ಬೆಳಗೋಡು ತಿಪ್ಪೇಶ,ಶಂಕರಪ್ಪ, ಚಾನಾಳ ಈರಣ್ಣ, ಬಸವ,ಹಳೆಮನೆ ವಿರೇಶ, ಪಕ್ಕೀರಪ್ಪ,ಜಡೇಶ,ಸಾದ 'ಕಲಿ,ಹೊನ್ನುರಸಾಬ್, ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಕರಾಟೆ ಮತ್ತು ಸಮಾಜ ಸೇವಕ ಶ್ರೀ ಹೆಚ್ ಪೀರಾವಲಿ, ಶ್ರೀ ಸಿದ್ದೇಶ್ವರ ರಂಗ ಸಂಸ ಕಲ್ಚರಲ್ ಟ್ರಸ್ಟ್(ರಿ) ಅಧ್ಯಕ್ಷ ಶ್ರೀ ಗುರುಮಹಾಂತೇಶ. ಬಿ ಕಾರ್ಯದರ್ಶಿ ಶ್ರೀ ಕುರುಬರ ಹೇಮೇಶ್ವರ,ಖಜಾಂಚಿ ಶ್ರೀ ಕೆ ಹಿಮಂತರಾಜ ನಿರೂಪಣೆ ಶ್ರೀ ಶಕುರುಬರ ಹೇಮೇಶ್ವರ, ಸ್ವಾಗತ ಶ್ರೀ ಹೆಚ್.ಪೀರಾವಲಿ,ಶ್ರೀ ಗುರು ಮಹಾಂತೇಶ ಬಿ ವಂದಿಸಿದರು.

# ನಾಮನಿರ್ದೇಶಿತ ಸದಸ್ಯರ ಆಯ್ಕೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.20:ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಡಿ ಬರುವ ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಕೆಳಕಂಡ ಐದು ಜನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಲೆಮಾರಿ ಸಮುದಾಯದವರು ಜಿಲ್ಲಾ ಅನುಷ್ಠಾನ ಸಮಿತಿಗೆ ನಾಮನಿರ್ದೇಶಿತ ಸದಸ್ಯರನ್ನಾಗಿ ಆಯ್ಕೆಗೊಂಡಿರುತ್ತಾರೆ. ಅಚಲ್ ತಂದೆ ಯುವರಾಜ ಉಪಾಧ್ಯಾ, ಶಂಭುಲಿಂಗರಾಮಯ್ಯ, ಸಾಯಿಕೃಷ್ಣ ತಂದೆ ಮೋಹನ,ಜಗನ್ನಾಥ ತಂದೆ ರುಕ್ಮಣ್ಣ ಭಜಂತ್ರಿ ಹಾಗೂ ಮಹಾದೇವಿ ಗಂಡ ರಾಜು ಇವರು ನಾಮನಿರ್ದೇಶಿತ ಸದಸ್ಯರನ್ನಾಗಿ ಆಯ್ಕೆಗೊಂಡಿರುತ್ತಾರೆ ಎಂದು ಕರ್ನಾಟಕ ಪ.ಪಂ. ಅಲೆಮಾರಿ ಅಭಿವೃದ್ಧಿ ನಿಗಮದ ಸದಸ್ಯ ಕಾರ್ಯದರ್ಶಿಗಳು ಹಾಗೂ ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

# ಬಿಜೆಪಿ ಸಂಸದ ರಮೇಶ್ ಜಿಗಜಿಣಗಿ ಹೇಳಿಕೆಗೆ ಡಿಎಸ್‌ಎಸ್ ತಿರುಗೇಟು

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಜೂ 20: ಬಿಜೆಪಿ ಸಂಸದ ರಮೇಶ್ ಜಿಗಜಿಣಗಿ ಅವರು ಆರ್‌ಎಸ್‌ಎಸ್ ಕುರಿತು ನೀಡಿರುವ ಹೇಳಿಕೆಗೆ ಡಿಎಸ್‌ಎಸ್ (ಕ್ರಾಂತಿಕಾರಿ ಬಣ) ಗುರುಮಠಕಲ್ ತಾಲೂಕು ಸಂಚಾಲಕ ಆನಂದ್ ಭಜಂತ್ರಿ ತಿರುಗೇಟು ನೀಡಿದ್ದಾರೆ.

"ಈ ದೇಶಕ್ಕೆ ಸಂವಿಧಾನ ನೀಡಿದವರು ಬಾಬಾ ಸಾಹೇಬ್ ಡಾ. ಬಿಆರ್ ಅಂಬೇಡ್ಕರ್ ರವರು ದಲಿತರು, ತಾವು ದಲಿತ ಮೀಸಲು ಕ್ಷೇತ್ರದಿಂದ ಆಯ್ಕೆಯಾಗಿ ಬಂದಿರುವ ನೀವು ದಲಿತರ



ಪ್ರಶ್ನೆಗಳನ್ನು ಕಡೆಗಣಿಸುವುದು ಸರಿಯಲ್ಲ" ಎಂದು ಅವರು ಹೇಳಿದ್ದಾರೆ.

ರಾಜ್ಯದ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಆರ್‌ಎಸ್‌ಎಸ್ ನೋಂದಣಿ ಕುರಿತು ಕೇಳಿರುವ ಪ್ರಶ್ನೆ ಸಮಂಜಸವಾಗಿದೆ. ಉತ್ತರ ಇದ್ದರೆ ನೀಡಲಿ, ಇಲ್ಲದಿದ್ದರೆ ಅನಗತ್ಯ ಹೇಳಿಕೆಗಳನ್ನು ನೀಡಬಾರದು ದಲಿತರ ಕುರಿತು ಅವರು ನೀಡಿರುವ ಹೇಳಿಕೆ ಖಂಡನೀಯ ಎಂದು ಆನಂದ್ ಭಜಂತ್ರಿ ಆಗ್ರಹಿಸಿದ್ದಾರೆ.

## ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ



**ಗಂಗಾವತಿ:** ದಿನಾಂಕ 20–06–2026 ರಂದು ಇಲ್ಲಿನ ಬಿಷಪ್ ಹೋಗನ್ ಅನುದಾನಿತ ಕನ್ನಡ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಇನ್ಫಂಟ್ ಜೀಸಸ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ 2026–27ನೇ ಶೈಕ್ಷಣಿಕ ಸಾಲಿನ ಶಾಲಾ ಪ್ರಾರಂಭೋತ್ಸವ ಅತ್ಯಂತ ಸಂಭ್ರಮದಿಂದ ಜರುಗಿತು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲಾ ಸಂಚಾಲಕರಾದ ವಂ.ಫಾದರ್.ಅನಿಲ್ ಕುಮಾರ್ ರವರು ವಹಿಸಿ ಮಾತನಾಡಿ ಪೋಷಕರು ಎಷ್ಟೋ ಕೊರತೆಗಳ ಮಧ್ಯೆ ಕಷ್ಟಪಟ್ಟು ದುಡಿದು ಬಹುಪಾಲು ಶ್ರಮವನ್ನು ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಬಳಸುತ್ತಾರೆ ಆದುದರಿಂದ ವಿದ್ಯಾರ್ಥಿಗಳು ಚನ್ನಾಗಿ ಅಭ್ಯಾಸಮಾಡಿ ಅವರ ಆಯಾಸವನ್ನು ಕಡಿಮೆ ಮಾಡುವ ಜವಾಬ್ದಾರಿಯುತ ನಾಗರಿಕರಾಗಬೇಕು ಎಂದು ಕಿವಿ ಮಾತು ಹೇಳಿದರು. ಮುಖ್ಯ ಅತಿಥಿಗಳಾಗಿ ಶ್ರೀರಾಮನಗರದ ಪ್ರಾಂಶುಪಾಲರಾದ ಡಾ.ಕರಿಗೂಳಿ ಸುಂಕೇಶ್ವರರವರು ಆಗಮಿಸಿದ್ದರು. ಅವರು ಮಾತನಾಡಿ ವಿದ್ಯಾರ್ಥಿಗಳು ತಮ್ಮ ಬಾಲ್ಯವನ್ನು ಆನಂದಿಸುತ್ತಲೇ ಪ್ರೀತಿಯಿಂದ ಕಲಿಯುವುದು ಹೇಗೆ ಎಂಬುದನ್ನು PATH (Positivity(ಧನಾತ್ಮಕತೆ) Ambition, (ಗುರಿ) Time Sense (ಸಮಯಪಾಲನೆ) Hardwork (ಪರಿಶ್ರಮ)ಎಂಬ ಸೂತ್ರದ ಮೂಲಕ ತಿಳಿಸಿದರು, ಬಹುಮುಖ್ಯವಾಗಿ ಪ್ರಾಥಮಿಕ ಶಿಕ್ಷಣದ ಈ ಅವಧಿಯಲ್ಲಿ ತುಂಬಾ ಮೂಲಭೂತ ಕಲಿಕೆಯ ಅಂಶಗಳಾದ ಓದುವುದು, ಬರೆಯುವುದು, ಮಾತನಾಡುವುದು ಹಾಗೂ ಆಲಿಸುವುವದು (LRWS) ಹೇಗೆ ಪರಿಣಾಮಕಾರಿಯಾಗಿ ರೂಢಿಸಿಕೊಳ್ಳಬೇಕು ಹಾಗೂ ಅವುಗಳ ಧೀರ್ಘಕಾಲದ ಮಹತ್ವ ಏನು ಎಂದು ವಿದ್ಯಾರ್ಥಿಗಳಿಗೆ ಮನಮುಟ್ಟುವಂತೆ ತಿಳಿಸಿದರು. ವಿದ್ಯಾರ್ಥಿಗಳ ಅಂತಸತ್ವದ ಸಾಮರ್ಥ್ಯವನ್ನು ಗುರುತಿಸಿ ಪ್ರೋತ್ಸಾಹಿಸುವ ಬಹುಮುಖ್ಯ ಜವಾಬ್ದಾರಿಯನ್ನ ಶಿಕ್ಷಕರು ಪೋಷಿಸುತ್ತಿರುವದರಿಂದ ಪ್ರತಿಯೊಬ್ಬ ಶಿಕ್ಷಕರನ್ನು ಅನನ್ಯವಾಗಿ ಗೌರವಿಸಲೇಬೇಕು ಎಂದರು. ಶಾಲಾ ಮುಖ್ಯೋಪಾಧ್ಯಾಯಿನಿಯಾದ ಶ್ರೀಮತಿ ಆಶಾ ಎಲ್ ಆರ್ ಹಾಗೂ ಶಿಕ್ಷಕ ವೃಂದ, ಮಕ್ಕಳು ಈ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು. ಕಾರ್ಯಕ್ರಮದಲ್ಲಿ ವಿಶೇಷವಾಗಿ ಸರ್ವಧರ್ಮ ಪ್ರಾರ್ಥನೆ, ಸಮರ್ಪಣಾ ಪ್ರಾರ್ಥನೆ, ಶಾಲಾ ಸಂಸತ್ತಿನ ನಾಯಕರುಗಳಿಗೆ ಪದಕ ಪ್ರಧಾನ ಕಾರ್ಯಕ್ರಮ ಗಳು ವಿಶೇಷವಾಗಿ ಜರುಗಿದವು.

## ಜಾಗೃತಿ ಯೋಗ ನಡಿಗೆಗೆ ಚಾಲನೆ



**ಬಾಗಲಕೋಟೆ:** ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಯೋಗದ ಮಹತ್ವ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ಹಮ್ಮಿಕೊಂಡ ಜಾಗೃತಿ ಯೋಗ ನಡಿಗೆಗೆ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಶನಿವಾರ ಚಾಲನೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಆಯುಷ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಜಾಗೃತಿ ನಡಿಗೆಗೆ ಚಾಲನೆ ನೀಡಿ ಮಾತನಾಡಿದ ಅವರು, ಯೋಗ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡುವ ಪರಿಣಾಮಕಾರಿ ಸಾಧನವಾಗಿದ್ದು, ಪ್ರತಿಯೊಬ್ಬರೂ ದಿನನಿತ್ಯದ ಜೀವನದಲ್ಲಿ ಯೋಗವನ್ನು ಅಳವಡಿಸಿಕೊಳ್ಳಬೇಕು ಎಂದರು.

ಪ್ರತಿ ವರ್ಷ ಜೂನ್ 21 ರಂದು ಆಚರಿಸಲ್ಪಡುವ ಅಂತರಾಷ್ಟ್ರೀಯ ಯೋಗ ದಿನಾಚರಣೆ ಯೋಗದ ಬಗ್ಗೆ ಜಾಗತಿಕ ಮಟ್ಟದಲ್ಲಿ ಅರಿವು ಮೂಡಿಸುವ ಉದ್ದೇಶ ಹೊಂದಿದೆ. ಈ ವರ್ಷದ ಆಚರಣೆಯಲ್ಲಿ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮಕ್ಕೆ ಮೆರಗು ತರಬೇಕೆಂದು ತಿಳಿಸಿದರು. ನಂತರ ಜಾಗೃತಿ ನಡಿಗೆ ಜಿಲ್ಲಾಡಳಿತ ಭವನದ ಆವರಣದಿಂದ ಪ್ರಾರಂಭವಾಗಿ ನವನಗರ ಬಸ್ ನಿಲ್ದಾಣ, ಪೊಲೀಸ್ ಪ್ಯಾಲೇಸ್ ಮಾರ್ಗವಾಗಿ ಎಲ್‌ಐಸಿ ವೃತ್ತದ ಬಳಿ ಇರುವ ಜಿಲ್ಲಾ ಆಯುರ್ವೇದ ಆಸ್ಪತ್ರೆಗೆ ಮುಕ್ತಾಯಗೊಂಡಿತು. ಜಾಗೃತಿ ನಡಿಗೆಯಲ್ಲಿ ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರ ನ್ಯಾ.ಡಿ.ವೈ.ಬಸಾಪೂರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮಂಜುನಾಥ ಕೆ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಅಲ್ಲಮಪ್ರಭು, ಜಿಲ್ಲಾ ಆಯುಷ್ ಅಧಿಕಾರಿ ಎಸ್.ಜಿ.ಮಠ, ಆಯುಷ ವೈದ್ಯಾಧಿಕಾರಿಗಳು, ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಮತ್ತು ಯೋಗಾಸಕ್ತರು, ವಿವಿಧ ಸಂಘಟನೆಯ ಪ್ರತಿನಿಧಿಗಳು ಪಾಲ್ಗೊಂಡಿದ್ದರು.

## ಗ್ಯಾಸ್ ಸಿಲಿಂಡರ್ ಕೊರತೆ ಇಲ್ಲ: ಹೆಚ್ಚುವರಿ ಹಣ ವಸೂಲಿ, ಕ್ರಮ



**ಗುರುಮಠಕಲ್:** ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಯಾದಗಿರಿ ಉಪನಿರ್ದೇಶಕರಾದ ಸೋಮಶೇಖರ್ ಅವರು ಶನಿವಾರ ಗುರುಮಠಕಲ್ ಪಟ್ಟಣಕ್ಕೆ ಭೇಟಿ ನೀಡಿ ಗೃಹಬಳಕೆಯ ಎಲ್‌ಪಿಜಿ ಗ್ಯಾಸ್ ಸಿಲಿಂಡರ್‌ಗಳ ವಿತರಣೆ, ಸಂಗ್ರಹ ಹಾಗೂ ಗ್ರಾಹಕರಿಗೆ ನೀಡಲಾಗುತ್ತಿರುವ ಸೇವೆಗಳ ಕುರಿತು ಪರಿಶೀಲನೆ ನಡೆಸಿದರು. ಪಟ್ಟಣದ ಬನಶಂಕರಿ ಗ್ಯಾಸ್ ಏಜೆನ್ಸಿಗೆ ಭೇಟಿ ನೀಡಿದ ಅವರು, ಏಜೆನ್ಸಿಯಲ್ಲಿರುವ ಗ್ಯಾಸ್ ಸಿಲಿಂಡರ್ ಸಂಗ್ರಹ, ಬಾಕಿ ಬುಕ್ಕಿಂಗ್‌ಗಳು ಹಾಗೂ ವಿತರಣಾ ವ್ಯವಸ್ಥೆಯ ಬಗ್ಗೆ ಮಾಹಿತಿ ಪಡೆದು ದಾಖಲೆಗಳನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಏಜೆನ್ಸಿಯಲ್ಲಿ ಪ್ರಸ್ತುತ 538 ಬುಕ್ಕಿಂಗ್‌ಗಳು ಬಾಕಿ ಇದ್ದು, 662 ಗ್ಯಾಸ್ ಸಿಲಿಂಡರ್‌ಗಳ ಸ್ಟಾಕ್ ಲಭ್ಯವಿದೆ ಎಂದು ತಿಳಿಸಿದರು. ಸಿಲಿಂಡರ್‌ಗಳ ಸಮರ್ಪಕ ಸಂಗ್ರಹ ಇರುವುದರಿಂದ ಗ್ರಾಹಕರು ಯಾವುದೇ ರೀತಿಯ ಆತಂಕ ಅಥವಾ ಗೊಂದಲಕ್ಕೆ ಒಳಗಾಗುವ ಅಗತ್ಯವಿಲ್ಲ. ಅಗತ್ಯ ಪ್ರಮಾಣದಲ್ಲಿ ಗ್ಯಾಸ್ ಸಿಲಿಂಡರ್‌ಗಳು ಲಭ್ಯವಿದ್ದು, ಬುಕ್ಕಿಂಗ್ ಮಾಡಿದ ಗ್ರಾಹಕರಿಗೆ ನಿಯಮಾನುಸಾರ ವಿತರಣೆ ಮಾಡಲಾಗುತ್ತಿದೆ ಎಂದು ಹೇಳಿದರು. ಇತ್ತೀಚಿನ ದಿನಗಳಲ್ಲಿ ಕೆಲವೆಡೆ ಗ್ಯಾಸ್ ವಿತರಣೆಯ ಸಂದರ್ಭದಲ್ಲಿ ಹೆಚ್ಚುವರಿ ಹಣ ವಸೂಲಿ ಮಾಡಲಾಗುತ್ತಿದೆ ಎಂಬ ದೂರುಗಳು ಕೇಳಿಬರುತ್ತಿವೆ. ಈ ಕುರಿತು ಗ್ರಾಹಕರು ಇಲಾಖೆಗೆ ದೂರು ನೀಡಿದಲ್ಲಿ ಅಥವಾ ಪರಿಶೀಲನೆ ವೇಳೆ ಅಂತಹ ಪ್ರಕರಣಗಳು ಕಂಡುಬಂದಲ್ಲಿ ಸಂಬಂಧಪಟ್ಟವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

# ಸುರೇಶ್ ಸ್ವಾಮಿಗಳ ಜನ್ಮದಿನ: ಆರೋಗ್ಯ ಶಿಬಿರದ ಮೆರುಗು

• **ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ**

ತಾಲೂಕಿನ ಪ್ರಸಿದ್ಧ ಧಾರ್ಮಿಕ ಕ್ಷೇತ್ರಗಳಲ್ಲಿ ಒಂದಾದ ಶ್ರೀ ಕ್ಷೇತ್ರ ಅಲಾಸ್ತಿಮ್ಮನಹಳ್ಳಿಯ ದೊಡ್ಡಮ್ಮ ದೇವಾಲಯದಲ್ಲಿ ಶನಿವಾರ ಭಕ್ತಿ, ಸೇವೆ ಹಾಗೂ ಮಾನವೀಯತೆಯ ಸಂಗಮವೇ ಕಂಡುಬಂತು. ದೇವಾಲಯದ ಪ್ರಧಾನ ಅರ್ಚಕರಾದ ಸುರೇಶ್ ಸ್ವಾಮಿಗಳ ಜನ್ಮದಿನದ ಅಂಗವಾಗಿ ವಿಶೇಷ ಪೂಜೆ, ರಕ್ತದಾನ ಶಿಬಿರ,ಉಚಿತ ಆರೋಗ್ಯ ತಪಾಸಣಾ ಶಿಬಿರ ಹಾಗೂ ಅನ್ನಸಂತರ್ಪಣೆ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು,ಸಹಸ್ರಾರು ಭಕ್ತರು ಭಾಗವಹಿಸಿ ಕಾರ್ಯಕ್ರಮಕ್ಕೆ ಮೆರುಗು ತಂದರು.



ಬೆಳಿಗ್ಗೆಯಿಂದಲೇ ದೇವಾಲಯದಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ಆರಂಭಗೊಂಡಿದ್ದು,ವಿವಿಧ ಭಾಗಗಳಿಂದ ಆಗಮಿಸಿದ್ದ ಭಕ್ತರು ದೊಡ್ಡಮ್ಮ ದೇವಿಯ ದರ್ಶನ ಪಡೆದು ಆಶೀರ್ವಾದ ಪಡೆದರು. ಕ್ಷೇತ್ರದ ಆವರಣದಲ್ಲಿ ಭಕ್ತಿಭಾವದ ವಾತಾವರಣ ನಿರ್ಮಾಣವಾಗಿದ್ದು,ದೇವಿಯ ನಾಮಸ್ಮರಣೆ ಹಾಗೂ ಪೂಜಾ ಕಾರ್ಯಕ್ರಮಗಳು ಭಕ್ತರ ಮನಸ್ಸಿನಲ್ಲಿ ಆಧ್ಯಾತ್ಮಿಕ ಭಾವನೆ ಮೂಡಿಸಿದವು.

ಇದೇ ಸಂದರ್ಭದಲ್ಲಿ ಆರೋಗ್ಯ ಸೇವೆಗೆ ಹೆಚ್ಚಿನ ಒತ್ತು ನೀಡುವ ಉದ್ದೇಶದಿಂದ ಸ್ವಾಮಿ ವಿವೇಕಾನಂದ ವಾಲಂಟರಿ ಬ್ಲಡ್ ಸೆಂಟರ್ ಬೆಂಗಳೂರು ಹಾಗೂ ರೆಡ್ ಕ್ರಾಸ್ ನಿಧಿ,ಚಿಕ್ಕಬಳ್ಳಾಪುರ ಇವರ ಸಹಯೋಗದಲ್ಲಿ ರಕ್ತದಾನ ಶಿಬಿರ ಹಾಗೂ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಯಿತು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ನೂರಾರು ಜನರು ಆರೋಗ್ಯ ತಪಾಸಣೆ ಮಾಡಿಸಿಕೊಂಡು ವೈದ್ಯಕೀಯ ಸಲಹೆ ಪಡೆದರು. ಯುವಕರು ಹಾಗೂ ಭಕ್ತರು ಸ್ವಯಂಪ್ರೇರಿತವಾಗಿ ರಕ್ತದಾನ ಮಾಡುವ ಮೂಲಕ ಮಾನವೀಯ ಸೇವೆಗೆ ಕೈಜೋಡಿಸಿದರು.

ಹುಟ್ಟುಹಬ್ಬದ ಅಂಗವಾಗಿ ದೇವಾಲಯಕ್ಕೆ ಆಗಮಿಸಿದ್ದ ಭಕ್ತರು ಹಾಗೂ ಸಾರ್ವಜನಿಕರು ಸುರೇಶ್ ಸ್ವಾಮಿಗಳಿಗೆ ಶುಭಾಶಯ ಕೋರಿದರು.ಈ ವೇಳೆ ಮಾತನಾಡಿದ ಹಲವರು,ಕ್ಷೇತ್ರದ ಪ್ರಧಾನ ಅರ್ಚಕರು ಕೇವಲ ಧಾರ್ಮಿಕ ಕಾರ್ಯಗಳಲ್ಲಿ ಮಾತ್ರವಲ್ಲದೆ ಸಮಾಜಮುಖಿ ಚಟುವಟಿಕೆಗಳಲ್ಲಿಯೂ ತೊಡಗಿಸಿಕೊಂಡು ಜನಸೇವೆಗೆ ಮುಂದಾಗಿರುವುದು ಶ್ಲಾಘನೀಯ ಎಂದರು.

ಕ್ಷೇತ್ರದ ಮಹಿಮೆ ಕುರಿತು ಅಭಿಪ್ರಾಯ ಹಂಚಿಕೊಂಡ ಕೆಲವು ಭಕ್ತರು,ದೊಡ್ಡಮ್ಮ ದೇವಿಯ ಮೇಲಿನ ಅಪಾರ ನಂಬಿಕೆಯಿಂದ ತಮ್ಮ ಜೀವನದ ಹಲವು ಸಮಸ್ಯೆಗಳು ಪರಿಹಾರಗೊಂಡಿವೆ ಆರೋಗ್ಯ, ಕುಟುಂಬ ಹಾಗೂ ಜೀವನದ ಅನೇಕ ಸಂಕಷ್ಟಗಳಿಂದ ಮುಕ್ತಿ ದೊರೆತ ಅನುಭವಗಳನ್ನು ಹಂಚಿಕೊಂಡರು.

ಈ ವೇಳೆ ಮಾತನಾಡಿದ ದೇವಾಲಯದ ಪ್ರಧಾನ ಅರ್ಚಕರಾದ ಸುರೇಶ್ ಸ್ವಾಮಿ ಅವರು,2014ರ ನಂತರ ದೊಡ್ಡಮ್ಮ ತಾಯಿಯ ಮಹಿಮೆ ರಾಜ್ಯದ ವಿವಿಧ ಭಾಗಗಳಿಗೆ ತಲುಪಿದೆ ಇಲ್ಲಿ ಬರುವ ಭಕ್ತರಿಗೆ ತಾಯಿ ಎಂದಿಗೂ ನಿರಾಶೆ ಮಾಡುವುದಿಲ್ಲ.ನಾನು ಪ್ರಧಾನ ಅರ್ಚಕರಾಗಿ ಭಕ್ತರೊಂದಿಗೆ ನಿಂತು ಅವರ ನಂಬಿಕೆ ಮತ್ತು ಭಕ್ತಿಗೆ ಸ್ಪಂದಿಸುವ ಕೆಲಸ ಮಾಡುತ್ತಿದ್ದೇನೆ,ಕಳೆದ ಮೂರು ವರ್ಷಗಳಿಂದ ಕ್ಷೇತ್ರದಲ್ಲಿ ರಕ್ತದಾನ ಶಿಬಿರ ಆಯೋಜಿಸುತ್ತಿದ್ದು,ಈ ಬಾರಿ ಹೆಚ್ಚುವರಿಯಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ನಡೆಸಲಾಗಿದೆ ಈ ಕಾರ್ಯಕ್ರಮಗಳನ್ನು ನಡೆಸಲು ದೊಡ್ಡಮ್ಮ ತಾಯಿಯ ಆಶೀರ್ವಾದವೇ ಕಾರಣ ಎಂದು ಹೇಳಿದರು.ಇನ್ನೂ ಭಕ್ತರು ಸಂಪೂರ್ಣ ನಂಬಿಕೆ ಮತ್ತು ಶ್ರದ್ಧೆಯಿಂದ ದೇವಿಯ ಆರಾಧನೆ ಮಾಡಿದರೆ ತಾಯಿ ಆಶೀರ್ವದಿಸುತ್ತಾಳೆ ಎಂಬ ನಂಬಿಕೆ ಕ್ಷೇತ್ರದಲ್ಲಿ ಮತ್ತಷ್ಟು ಗಟ್ಟಿಯಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಸಮಾಜಸೇವಕರಾದ ಸಂದೀಪ್ ರೆಡ್ಡಿ, ಶ್ರೀ ಹರಿಕೃಷ್ಣ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಆನೆಮಡುಗು ಹರೀಶ್ ರೆಡ್ಡಿ ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಿ ಸುರೇಶ್ ಸ್ವಾಮಿಗಳಿಗೆ ಜನ್ಮದಿನದ ಶುಭಾಶಯಗಳನ್ನು ಸಲ್ಲಿಸಿದರು ಇದೇ ವೇಳೆ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿ ದೇವಿಯ ಕೃಪೆಗೆ ಪಾತ್ರರಾದರು. ಅನ್ನಸಂತರ್ಪಣೆ ಕಾರ್ಯಕ್ರಮದಲ್ಲಿ ಸಾವಿರಾರು ಭಕ್ತರು ಪ್ರಸಾದ ಸ್ವೀಕರಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಕೆಚ್ಚಿನಬಂಡಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ

• **ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ**

ಲೋಕೋಪಯೋಗಿ ಇಲಾಖೆಯ ವತಿಯಿಂದ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆ (CMIDP) ಅಡಿಯಲ್ಲಿ ಸುಮಾರು ₹1.65 ಕೋಟಿ (165 ಲಕ್ಷ) ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗಿರುವ ಹಗರಿಬೊಮ್ಮನಹಳ್ಳಿ–ಕೆಚ್ಚಿನಬಂಡಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಇಂದು ಭೂಮಿ ಪೂಜೆ ನೆರವೇರಿತು.



ಕಾರ್ಯಕ್ರಮದಲ್ಲಿ ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕ ಶ್ರೀ ಕೆ. ನೇಮಿರಾಜ ನಾಯ್ಕ ಅವರು ಭಾಗವಹಿಸಿ ಕಾಮಗಾರಿಗೆ ಚಾಲನೆ ನೀಡಿದರು. ಈ ರಸ್ತೆ ಅಭಿವೃದ್ಧಿಯಿಂದ ಕೆಚ್ಚಿನಬಂಡಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರಿಗೆ ಉತ್ತಮ ಸಂಚಾರ ಸೌಲಭ್ಯ ದೊರೆಯಲಿದ್ದು, ರೈತರು, ವಿದ್ಯಾರ್ಥಿಗಳು ಹಾಗೂ ವ್ಯಾಪಾರಿಗಳಿಗೆ ಅನುಕೂಲವಾಗಲಿದೆ ಎಂದು ಶಾಸಕರು ತಿಳಿಸಿದರು.

ಇದೇ ಸಂದರ್ಭದಲ್ಲಿ ಸರ್ಕಾರ ಗ್ರಾಮೀಣ ಭಾಗಗಳ ಮೂಲಸೌಕರ್ಯ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡುತ್ತಿದ್ದು, ಗುಣಮಟ್ಟದ ರಸ್ತೆ ನಿರ್ಮಾಣದ ಮೂಲಕ ಜನರ ಬಹುಕಾಲದ ಬೇಡಿಕೆಯನ್ನು ಈಡೇರಿಸಲಾಗುತ್ತಿದೆ ಎಂದು ಹೇಳಿದರು.

ಕೆಚ್ಚಿನಬಂಡಿ ರಸ್ತೆ ಬಿಸಿಎಂ ಹಾಸ್ಟಲ್ ಸಮೀಪ ನಡೆದ ಈ ಸಂದರ್ಭದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳು, ಬಾದಮಿ ಮೃಂತುಜಯ ಜಿಲ್ಲಾ ಅಧ್ಯಕ್ಷರು ಜೆಡಿಎಸ್. ವೈ ಮಲ್ಲಿಕಾರ್ಜುನ ತಾಲೂಕು ಅಧ್ಯಕ್ಷರು ಜೆಡಿಎಸ್. ಚಂದ್ರಶೇಖರ್ ಮುಖಂಡರು, ಸಿದ್ದರಾಸಿದ್ದರಾಜು ಮುಖಂಡರು. ಬ್ಯಾಟಿ ನಾಗರಾಜ ಅಪ್ತ ಸಹಾಯಕ. ಕನಕಪ್ಪ ಮುಖಂಡರು. ವಿ.ದೊಡ್ಡಬಸಪ್ಪ ಗುತ್ತಿಗೆದಾರರು. ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಪರಿಶ್ರಮದ ವೃತ್ತಿಯಿಂದ ಸಮುದಾಯದ ಗೌರವ ಸಾಧ್ಯ: ಡಾ.ಇಫ್ತಿಕರ್

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ವೈದ್ಯಕೀಯ ಕ್ಷೇತ್ರದಲ್ಲಿ ಪ್ರಾಮಾಣಿಕ ಹಾಗೂ ಪರಿಶ್ರಮದ ಸೇವೆಯಿಂದ ಸಮಾಜದ ಗೌರವ ಪಡೆಯಲು ಸಾಧ್ಯ ಎಂದು ಅಲೈಡ್ ಹೆಲ್ತ್ ಕೇರ್ ಕೌನ್ಸಿಲ್ ಚೇರಮನ್ ಹಾಗೂ ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಸಿಂಡಿ–ಕೇಟ್ ಸದಸ್ಯ ಡಾ.ಇಫ್ತಿಕರ್ ಫರಿದ ಹೇಳಿದರು.




ಶನಿವಾರ ನಗರದ ಬಿವಿವಿ ಸಂಘದ ಪಿಜಿಯೊಥೆ–ರಪಿ ಕಾಲೇಜಿನಲ್ಲಿ ಜರುಗಿದ ಪದವಿ ಪ್ರದಾನ ಸಮಾರಂಭದಲ್ಲಿ ಪದವಿ ಪ್ರದಾನ ಮಾಡಿ ಮಾತನಾಡಿ, ಫಿಜಿಯೋಥೆರಪಿ ಈಗ ವೈದ್ಯಕೀಯ ಕ್ಷೇತ್ರದಲ್ಲಿ ಅಗತ್ಯದ ಚಿಕಿತ್ಸೆಯಾಗಿದೆ. ತಾಂತ್ರಿಕವಾಗಿ ಮತ್ತು ವೈಜ್ಞಾನಿಕವಾಗಿ ಸಾಕಷ್ಟು ಬೆಳವಣಿಗೆ ಹೊಂದಿದೆ. ಈ ಕ್ಷೇತ್ರದಲ್ಲಿ ಯಶಸ್ಸು ಸಾಧಿಸಲು ಪರಿಶ್ರಮ ಮತ್ತು ಕೌಶಲ್ಯದ ಅಗತ್ಯವಿದೆ ಎಂದರು.

ವೈದ್ಯಕೀಯ ಕ್ಷೇತ್ರದಲ್ಲಿ ಸಮುದಾಯದ ಗೌರವಕ್ಕೆ ಪಾತ್ರರಾಗಲು ತಾವುಗಳು ಪರಿಶ್ರಮಪಡಬೇಕು, ಪ್ರಾಮಾಣಿಕ ಸೇವೆ ಮಾಡಬೇಕು ಎಂದು ಡಾ.ಫರಿದ ಕರೆಯಿತ್ತರು. ಅತಿಥಿ ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್ ಸದಸ್ಯೆ ಪ್ರೊ. ವೈಶಾಲಿ ಶ್ರೀಜೀತ ಮಾತನಾಡಿ, ವೃತ್ತಿ ಬದುಕಿನಲ್ಲಿ ಉತ್ತಮ ವರ್ತನೆ ಮೈಗೂಡಿಸಿಕೊಂಡು ರೋಗಿಗಳನ್ನು ಗೌರವಿಸಬೇಕು. ಇತರರಿಗೆ ಪ್ರೇರಣೆಯಾಗುವಂತಹ ಬದುಕು ನಡೆಸಬೇಕು. ಈಗ ರಾಷ್ಟ್ರೀಯ ಫಿಜಿಯೋಥೆರಪಿ ಮಂಡಳಿ ಅಸ್ತಿತ್ವಕ್ಕೆ ಬಂದಿದ್ದು ಅದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಹೇಳಿದರು.


ಅಧ್ಯಕ್ಷತೆ ವಹಿಸಿದ್ದ ಬಿ.ವಿ.ವಿ.ಸಂಘದ ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ (ಬೇವೂರ), ಮಾತನಾಡಿ, ಉತ್ತಮ ಸನ್ನಡತೆ ಮೈಗೂಡಿಸಿಕೊಂಡು ಸಮಾಜಕ್ಕೆ ಕೊಡುಗೆ ನೀಡಿ ಸಮಾಜದ ಗೌರವಕ್ಕೆ ಪಾತ್ರರಾಗಿ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಪ್ರಾಚಾರ್ಯ ಡಾ.ಮಹಾಂತೇಶ ಬಿರಡಿ ಸ್ವಾಗತಿಸಿ ಪ್ರಾಸ್ತಾವಿಕ ಮಾತುಗಳನ್ನಾಡಿದರು. ಡಾ.ಶ್ರೇಯಾ ಸೌಕಾರ್ ಮತ್ತು ಡಾ.ಶ್ರದ್ಧಾ ರಂಗದಾಳ ಪರಿಚಯಿಸಿದರು. ಡಾ.ಸುಚಿತ್ರಾ ದಿವಾನಮಲ್ ವೈದ್ಯಕೀಯ ಪದವೀಧರರಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ನೇಹಾ ಅತ್ತಾರ ಹಾಗೂ ವೈಭವ ಪಾಟೀಲ ಅನುಭವ ಹಂಚಿಕೊಂಡರು. ಡಾ.ಕರ್ನಾಲಿ ನಾಯಕ್ ವಂದಿಸಿದರು. ಸ್ವಾತಿ ಹಾಗೂ ಕಿರಣ ನಿರೂಪಿಸಿದರು.

ವೇದಿಕೆಯಲ್ಲಿ ವೈದ್ಯಕೀಯ ಮಹಾವಿದ್ಯಾಲಯದ ಹೈ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ ಇದ್ದರು. 30 ಜನ ಪದವೀದರ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. ಅಧಿಕ ಅಂಕಗಳನ್ನು ಪಡೆದು ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ ರ್ಯಾಂಕ್ ಗಳಿಸಿದ ಡಾ.ವಿನುತಾ ಮತ್ತು ಡಾ.ಪ್ರೀತಿ ಮತ್ತು ಉತ್ತಮ ಸಾಧನೆ ತೋರಿದ ಡಾ.ತುಷಾರ ಅವರುಗಳನ್ನು ಸನ್ಮಾನಿಸಲಾಯಿತು.

# ಯೋಗದ ಮಹತ್ವ ಸಾರಲು ಯೋಗ ಸಪ್ತಾಹ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**




ವಿಶ್ವಯೋಗ ದಿನಾಚರಣೆಯ ಅಂಗವಾಗಿ ಉತ್ತಮ ಆರೋಗ್ಯವನ್ನು ವೃದ್ಧಿಸಲು ಮತ್ತು ದೈನಂದಿನ ಜೀವನದಲ್ಲಿ ಯೋಗದ ಮಹತ್ವವನ್ನು ಸಾರುವ ಉದ್ದೇಶದಿಂದ ಜಿಲ್ಲೆಯಾದ್ಯಂತ ಯೋಗ ಸಪ್ತಾಹ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ

ಈಗಂತೂ ಮಾನವನ ಜೀವನ ಸಂಪೂರ್ಣ ಯಾಂತ್ರಿಕವಾಗಿದೆ ಈ ಯಂತ್ರಮಯ ಜೀವನದಲ್ಲಿ ನಮ್ಮ ಜೀವನ ಶೈಲಿಯೋ ಅಥವಾ ಆಹಾರದ ಪೌಷ್ಟಿಕಾಂಶದ ಕೊರತೆಯೊ ಗೊತ್ತಿಲ್ಲ ಪ್ರತಿಯೊಬ್ಬರು ಒಂದಿಲ್ಲ ಒಂದು ಕಾಯಿಲೆಯಿಂದ ನರಳುತ್ತಿದ್ದೇವೆ ಇಂತಹ ಒಂದು ಸಮಾಜಕ್ಕೆ ಒಳ್ಳೆಯ ಕೊಡುಗೆಯಾಗಿ ಜನಸಾಮಾನ್ಯರಿಗೆ ಯೋಗದ ರಸದೌತಣವನ್ನ ಸರಳ ಸುಂದರವಾಗಿ ಕಾರ್ಯವನ್ನ ಕೈಗೊಂಡಿರುವ ಶ್ರೀ ಗೋರಕನಾಥ ಕುಂಬಾರ ಸರ್ ಅವರಿಗೆ ಹೃತ್ಪೂರ್ವಕ ನಮನಗಳು ಇಂದಿನ ಒತ್ತಡದ ಜೀವನ ಶೈಲಿಯಲ್ಲಿ ಮನುಷ್ಯನಿಗೆ ದೈಹಿಕ ಆರೋಗ್ಯಕಿಂತ ಮಿಗಿಲಾಗಿ ಮಾನಸಿಕ ಶಾಂತಿಯ ಅಗತ್ಯವಿದೆ ಇಂತಹ ಸಂದರ್ಭದಲ್ಲಿ ಯೋಗ ಗುರುಗಳಾದ ಶ್ರೀ ಗೋರಕನಾಥ ಕುಂಬಾರ ಯೋಗ ಸಾಂಗತ್ಯ ಎಂಬ ಅದ್ಭುತವಾದ ಕೃತಿಯನ್ನು ಸಮಾಜಕ್ಕೆ ಅರ್ಪಿಸುತ್ತಿರುವುದು ತುಂಬಾ.ಸ್ಲಾಘನೀಯ ಮತ್ತು ಸಂತೋಷದ ವಿಷಯ. ಗುರುಗಳು ಕೇವಲ ಲೇಖ–ಕರಾಗಿರದೆ ಬರವಣಿಗೆಗೆ ಸೀಮಿತರಾಗಿರದೆ ಸ್ವತಹ ಯೋಗವನ್ನ ಜೀವನದಲ್ಲಿ ಅಳವಡಿಸಿಕೊಂಡಿದ್ದಾರೆ ಅಷ್ಟೇ ಅಲ್ಲದೆ ಲಕ್ಷಾಂತರ ಜನರಿಗೆ ಯೋಗ ಶಿಕ್ಷಣ ವನ್ನು ಕಲಿಸಿಕೊಡುತ್ತಿರುವ ಸಾರ್ಥಕ ಜೀವನ ಅವರದಾಗಿದೆ ಅವರ ಸುದೀರ್ಘ ಅನುಭವ ಸಾಧನೆ ಮತ್ತು ಯೋಗದ ಮೇಲಿರುವ ಶ್ರದ್ಧೆ



ಪುಸ್ತಕದ ಪ್ರತಿಪುಟದಲ್ಲಿ ಎದ್ದು ಕಾಣಿಸುತ್ತದೆ

ಯೋಗ ಸಾಂಗತ್ಯ ಹೆಸರೇ ಸೂಚಿಸುವಂತೆ ಪ್ರತಿಯೊಬ್ಬರು ಖರೀದಿಸಿ ಯೋಗವನ್ನ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವಂತಹ ಕೈಗನ್ನಡಿಯಾಗಿದೆ ಪ್ರತಿಯೊಬ್ಬರ ಆರೋಗ್ಯದ ದೃಷ್ಟಿಯಿಂದ ಪ್ರೇರೇಪಿಸುವ ಈ ಪುಸ್ತಕ ಮುಂದಿನ ಪೀಳಿಗೆಗೆ ದಾರಿದೀಪವಾಗಲಿ ಅದೇ ರೀತಿ ಲೇಖಕರಾದ ಗೋರಕನಾಥ ಕುಂಬಾರರ ಪ್ರಯತ್ನ ಯಶಸ್ವಿಯಾಗಲಿ ಅವರ ಪ್ರಯತ್ನ ಫಲಿಸಲಿ ಅವರಿಗೆ ಆಯುಷ್ಯ ಆರೋಗ್ಯ ನೆಮ್ಮದಿ ಸಿಗಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತಾ ಇವರು ಬರೆದ ಯೋಗ ಸಾಂಗತ್ಯ ಕೃತಿಗೆ ನನ್ನ ಹೃದಯಪೂರ್ವಕ ಶುಭ ಹಾರೈಕೆಗಳು. ಅಷ್ಟೇ ಅಲ್ಲದೆ ಇವರ ಒಂದು ನೇತೃತ್ವದಲ್ಲಿ ಯೋಗ ಗುರುಗಳಾದ ಆನಂದ್ ಜಡೆಗೆ ಮತ್ತು ಆನಂದ್ ಗುರೂಜಿ ಇವರು ಬೀದರ್ ಜಿಲ್ಲೆಯಲ್ಲಿಯೇ ಒಳ್ಳೆಯ ಯೋಗ ಕಾರ್ಯಕ್ರಮಗಳನ್ನ ತರಬೇತಿಗಳನ್ನ ನೆರವೇರಿಸುತ್ತಿದ್ದಾರೆ ಎಲೆಮರೆಕಾಯಿಯಂತೆ ಇವರ ಕಾರ್ಯವು ಯಶಸ್ವಿಯಾಗಿ ಸಮಾಜಕ್ಕೆ ಒಳ್ಳೆಯ ಕೊಡುಗೆಯಾಗಿ ರೋಗಮುಕ್ತ ಸಮಾಜ ನಿರ್ಮಾಣವಾಗಲಿ ಎಂದು ಆಚೀಸುತ್ತೇನೆ ಯೋಗ ಮಾಡಿ ನಿರೋಗಿಯಾಗಿ ಆರೋಗ್ಯಕರ ವಯಸ್ಸಾಗುವಿಕೆಗಾಗಿ ನಿರಂತರ ಯೋಗವನ್ನ ಜೀವನದಲ್ಲಿ ಅಳವಡಿಸಿಕೊಳ್ಳೋಣ ಅಂತರಾಷ್ಟ್ರೀಯ ಯೋಗ ದಿನಾಚರಣೆಗೆ ಶುಭವನ್ನ ಹೇಳೋಣ. ಆಗ ಮಾತ್ರ ಅಂತರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸಿದಕ್ಕೂ ಸಾರ್ಥಕವಾಗುತ್ತದೆ.

## ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ಕಿಟ್ ವಿತರಣೆ



**ವಿಜಯಪುರ:** ನಗರದ ವಾರ್ಡ್ ನಂಬರ್ 07 ರಲ್ಲಿ ಕಲಾಲ್ ಗಲ್ಲಿ ಹಾಗೂ ಡೋರ್ ಗಲ್ಲಿಯಲ್ಲಿ ಕಾರ್ಮಿಕರಿಗೆ ಕಾರ್ಮಿಕ ಇಲಾಖೆ ವತಿಯಿಂದ ಅಸಂಘಟಿಕ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ಅನ್ನು ಮಹಾನಗರ ಪಾಲಿಕೆಯ ಸದಸ್ಯರಾದ ರಾಹುಲ್ ಜಾದವ್ ಅವರು ವಿತರಿಸಿದರು. ಈ ಸಂದರ್ಭದಲ್ಲಿ ಕಾರ್ಮಿಕ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಲೆಟರ್ ಹೆಡ್ ದುರ್ಬಳಕೆ: ಕ್ರಮಕ್ಕೆ ಆಗ್ರಹ



**ಬೆಂಗಳೂರು:** ಟ್ರೇಡ್ ಯೂನಿಯನ್ ಆಕ್ಟ್ 1956 ಪ್ರಕಾರ ಕಾರ್ಮಿಕ ಇಲಾಖೆಯಲ್ಲಿನೋಂದಾಯಿತವಾಗಿರುವಕರ್ನಾಟಕಕಾರ್ಯನಿರತಪತ್ರಕರ್ತರ ಸಂಘದ ಹೆಸರನ್ನು ಕೆಲವರು ದುರ್ಬಳಕೆ ಮಾಡಿಕೊಳ್ಳುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿ ಕ್ರಮ ತೆಗೆದುಕೊಳ್ಳಬೇಕು ಎಂದು ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಒತ್ತಾಯಿಸಿದೆ.

ಕರ್ನಾಟಕ ಪೊಲೀಸ್ ಮಹಾ ನಿರ್ದೇಶಕರಾದ ಎಂ.ಎ.ಸಲೀಂ ಅವರನ್ನು ಭೇಟಿ ಮಾಡಿದ್ದ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು, ಪೊಲೀಸ್ ಠಾಣೆಯಲ್ಲಿಯೂ ಈ ಹೆಸರಿನ ಲೆಟರ್‌ಹೆಡ್ ಬಳಕೆ ಮಾಡುತ್ತಿರುವುದು ಗಮನಕ್ಕೆ ಬಂದಿದ್ದು, ಇದರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಮನವಿ ಮಾಡಿದರು.

1932ರಲ್ಲಿ ಡಿ.ವಿ.ಗುಂಡಪ್ಪ ಅವರಿಂದ ಸಂಸ್ಥಾಪಿತವಾದ ಸಂಘವು, ಕಾರ್ಮಿಕ ಇಲಾಖೆ ಅಡಿಯಲ್ಲಿ ಕಾರ್ಯ ನಿರ್ವಹಣೆ ಮಾಡುತ್ತಿದೆ. ಟ್ರೇಡ್ ಯೂನಿಯನ್ ಆಕ್ಟ್ ಪ್ರಕಾರ ಕಾಲ ಕಾಲಕ್ಕೆ ಚುನಾವಣೆಯನ್ನು ನಡೆಸುತ್ತಿದ್ದು, ರಾಜ್ಯ, ಜಿಲ್ಲೆ ಮತ್ತು ತಾಲೂಕುಗಳಲ್ಲಿ ಚುನಾಯಿತ ಆಡಳಿತ ಮಂಡಳಿಗಳು ಅಧಿಕಾರ ನಡೆಸುತ್ತಿವೆ. ರಾಜ್ಯದ ಎಲ್ಲಾ ಜಿಲ್ಲೆ ಮತ್ತು ತಾಲೂಕುಗಳಲ್ಲಿಯೂ ಘಟಕಗಳನ್ನು ಹೊಂದಿದ್ದು, ಸುಮಾರು 9 ಸಾವಿರಕ್ಕೂ ಹೆಚ್ಚು ವೃತ್ತಿ ನಿರತ ಪತ್ರಕರ್ತರು ಸಕ್ರೀಯ ಸದಸ್ಯರಿದ್ದಾರೆ. ಹೊರ ರಾಜ್ಯಗಳಾದ ಕೇರಳ ಮತ್ತು ಮಹಾರಾಷ್ಟ್ರದಲ್ಲಿಯೂ ಘಟಕಗಳನ್ನು ಹೊಂದಿದೆ ಎನ್ನುವುದನ್ನು ಅವರ ಗಮನಕ್ಕೆ ತಂದರು.

ಸಹಕಾರ ಇಲಾಖೆಗೆ ತಪ್ಪು ಮಾಹಿತಿ ನೀಡಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಎಂದು ನೋಂದಾಯಿಸಿಕೊಂಡಿರುವ ಖಾಸಗಿ ವ್ಯಕ್ತಿಯೊಬ್ಬ, ಆರ್‌ಟಿಐ ಹಾಕಲು ಮತ್ತು ಸರ್ಕಾರಿ ಮತ್ತು ಪೊಲೀಸ್ ಇಲಾಖೆಯಲ್ಲಿ ಪತ್ರ ವ್ಯವಹಾರಕ್ಕೆ ಹೆಸರನ್ನು ದುರ್ಬಳಕೆ ಮಾಡಿಕೊಳ್ಳುತ್ತಿರುವ ಬಗ್ಗೆ ಸಹಕಾರ ಇಲಾಖೆ ಮತ್ತು ಸರ್ಕಾರಕ್ಕೆ ದೂರು ನೀಡಲಾಗಿದೆ ಎನ್ನುವುದನ್ನು ಗಮನಕ್ಕೆ ತಂದರು.

ಎಲ್ಲೆಲ್ಲಿ ಈ ರೀತಿಯ ದೂರುಗಳು ಬಂದಿವೆ ಎನ್ನುವುದನ್ನು ನನ್ನ ಗಮನಕ್ಕೆ ತರುವಂತೆ ಮತ್ತು ಆ ರೀತಿಯ ವ್ಯಕ್ತಿಗಳ ಚಲನ ವಲನ, ಪೂರ್ವಾಪರ ವಿಚಾರಣೆ ಮಾಡಿ ವರದಿ ನೀಡುವಂತೆ ಪೊಲೀಸ್ ಠಾಣೆಗಳಿಗೆ ಸೂಕ್ತ ನಿರ್ದೇಶನ ನೀಡುವುದಾಗಿ ಪೊಲೀಸ್ ಮಹಾ ನಿರ್ದೇಶಕರು ಕೆಯುಡಬ್ಲ್ಯೂಣಟಿಜಜಜಿಟಿಜಜಜೆ ನಿಯೋಗಕ್ಕೆ ಭರವಸೆ ನೀಡಿದರು. ಸ್ಥಳದಲ್ಲಿಯೇ ಹೆಚ್ಚು ದೂರು ಬಂದ ಜಿಲ್ಲೆಯೊಂದರ ಪೊಲೀಸ್ ವರಿಷ್ಠಾಧಿಕಾರಿಗೆ ಫೋನ್ ಮಾಡಿ ಸೂಕ್ತ ನಿರ್ದೇಶನವನ್ನೂ ನೀಡಿದರು. 95 ವಸಂತಗಳನ್ನು ತುಂಬಿರುವ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ ಚಟುವಟಿಕೆಗಳನ್ನು ಗಮನಿಸಿದ್ದೇನೆ. ಸದಾ ಕ್ರೀಯಾಶೀಲವಾಗಿರುವ ಕೆಯುಡಬ್ಲ್ಯೂಣಟಿಜಜಜಿಟಿಜಜಜೆ ಬಗ್ಗೆ ಮೆಚ್ಚುಗೆಯನ್ನು ವ್ಯಕ್ತಪಡಿಸಿದರು. ಇದೇ ಸಂದರ್ಭದಲ್ಲಿ ಕೆಯುಡಬ್ಲ್ಯೂಣಟಿಜಜಜಿಟಿಜಜಜೆ ಹೊರ ತಂದಿರುವ ಪತ್ರಕರ್ತ ಮ್ಯಾಗಜೀನ್ ಮತ್ತು ಕೋವಿಡ್ ಕಥೆಗಳು ಹಾಗೂ ಅಮೃತ ಬೀಜ ಪುಸ್ತಕಗಳನ್ನು ಸಂಘದ ರಾಜ್ಯಧ್ಯಕ್ಷರಾದ ಶಿವಾನಂದ ತಗಡೂರು ಅವರು ಪೊಲೀಸ್ ಮಹಾ ನಿರ್ದೇಶಕರಾದ ಎಂ.ಎ.ಸಲೀಂ ಅವರಿಗೆ ನೀಡಿದರು. ಈ ಸಂದರ್ಭದಲ್ಲಿ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯರಾದ ವಿ.ಮುನಿರಾಜು ಮತ್ತಿತರರು ಹಾಜರಿದ್ದರು.

## ರೀಡಿಂಗ್ ಡೇ ಆಚರಣೆ



**ಗಂಗಾವತಿ:** ಪ್ರತಿಷ್ಠಿತ ಶಾಲೆಯಾದ ಲಿಟಲ್ ಹಾರ್ಟ್ಸ್ ಸ್ಕೂಲ್ ನಲ್ಲಿ ರಾಷ್ಟ್ರೀಯ ಓದುವ ದಿನವನ್ನು (National Reading Day) ಅತ್ಯಂತ ಉತ್ಸಾಹದಿಂದ ಆಚರಿಸಲಾಯಿತು.

ಭಾರತದ ಕೇರಳಂ ರಾಜ್ಯದ ಪಿ.ಎನ್ ಪಣಿಕ್ಕರ್ ಅವರ ಸ್ಮರಣಾರ್ಥಕವಾಗಿ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ನಮ್ಮ ದೇಶದ ಪ್ರಧಾನಮಂತ್ರಿಯವರು 2017ರಲ್ಲಿ ಇಡೀ ದೇಶಾದ್ಯಂತ 'ಪಣಿಕ್ಕರ್'ರವರ ಸ್ಮರಣಾರ್ಥವಾಗಿ "ರಾಷ್ಟ್ರೀಯ ಓದುವ ದಿನ"ವನ್ನು ದೇಶದ ಪ್ರಜೆಗಳಿಗೆ ಆಚರಿಸಲು ಕೋರಿದ್ದರು. ಅದರಂತೆ ಲಿಟಲ್ ಹಾರ್ಟ್ಸ್ ಶಾಲೆಯಲ್ಲೂ ಸಹ ರಾಷ್ಟ್ರೀಯ ಓದುವ ದಿನವನ್ನು ಆಚರಿಸಲಾಯಿತು.

# ಸಂಘ ಪರಿವಾರ ಕೆಣಕಿದವರು ಉಳಿದಿಲ್ಲ..!

• **ಮಲ್ಲಮ್ಮ ನುಡಿ ವಾರ್ತೆ ವಿಜಯಪುರ**

ಸಂಘ ಪರಿವಾರ ಕೆಣಕಿದವರು ಉಳಿದಿಲ್ಲ ಎಂಬ ವಿಜಯಪುರ ಸಂಸದರ ಮಾತು ಸತ್ಯ, ಅನೇಕ ವಿಚಾರವಾದಿಗಳ ಹತ್ಯೆ ನಡೆದಿರುವುದನ್ನು ನೋಡಿದರೆ ಸಂಸದ ರಮೇಶ ಜಿಗಜಿಣಗಿ ಅವರ ಹೇಳಿಕೆ ಸತ್ಯ ಎಂದು ತೋರುತ್ತದೆ ಎಂದು ಕಾಂಗ್ರೆಸ್ ವಕ್ತಾರ ಎಸ್.ಎಂ. ಪಾಟೀಲ ಗಣಿಹಾರ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪನ್ಸಾರೆ, ನರೇಂದ್ರ ದಾಬೋಲ್ಕರ್, ಗೌರಿ ಲಂಕೇಶ ಸೇರಿದಂತೆ ಅನೇಕ ವೈಚಾರಿಕವಾದಿಗಳ ಹತ್ಯೆ ನಡೆದಿರುವ ಹಿನ್ನೆಲೆಯಲ್ಲಿ ಈ ಎಚ್ಚರಿಕೆ ಮಾತು ಹೇಳುವ ಮೂಲಕ ಸಂಸದ ರಮೇಶ ಜಿಗಜಿಣಗಿ ಅವರು ಸಂಘ ಪರಿವಾರದ ನೈಜ ಮುಖವನ್ನು ಬಿಚ್ಚಿಟ್ಟಿದ್ದಾರೆ ಎಂದರು.

ಮದರಸಾಗಳಲ್ಲಿ ಒಂದೇ ಒಂದು ಬಂದೂಕು, ಬಾಂಬ್ ಸಿಕ್ಕಿಲ್ಲ, ಬೇಕಾದರೆ ಅದನ್ನು ಸಾಬೀತುಪಡಿಸಿ ಎಂದರು.

ರಾಮಕೃಷ್ಣ ಮಿಷನ್ 18 ನೇ ಶತಮಾನದಲ್ಲಿಯೇ ನೊಂದಣಿಯಾಗಿದೆ, ಸ್ವಾತಂತ್ರ್ಯಪೂರ್ವವಾಗಿ ಅನೇಕ ಸಂಘಟನೆಗಳು ನೊಂದಣಿಯಾಗಿವೆ, ಆದರೆ ಸಂಘ ಪರಿವಾರ ಏಕೆ ನೊಂದಣಿಯಾಗಿಲ್ಲ ಎಂದರು.

ಸಂಘ ಪರಿವಾರ ಹಿಂಬಾಗಿಲ ಮೂಲಕ ಅನೇಕ ಶಿಕ್ಷಣ ಸಂಸ್ಥೆಗಳ ಹೆಸರಿನಲ್ಲಿ ಬೆಲೆ ಬಾಳುವ



ಜಮೀನು ಸರ್ಕಾರದಿಂದ ಪಡೆದುಕೊಂಡಿದೆ, ಈ ಬಗ್ಗೆಯೂ ತನಿಖೆಯಾಗಬೇಕು ಎಂದು ಗಣಿಹಾರ ಒತ್ತಾಯಿಸಿದರು.

400 ಕೋಟಿ ರೂ.ಖರ್ಚು ಮಾಡಿ ಸಂಘ ಪರಿವಾರ ಭವನ ನಿರ್ಮಿಸಿದೆ, ಅದು ಯಾರ ಹೆಸರಿನಲ್ಲಿದೆ, ನೊಂದಣಿಯಾಗಿಲ್ಲ ಎಂದರೆ ಅದು ಖಾಸಗಿ ಆಸ್ತಿಯೇ ಎಂದರು.

ನಿಮ್ಮ ಬಳಿಯೇ ಯಾವ ದಾಖಲೆ ಇಲ್ಲ, ಆದರೆ ಎಸ್.ಐ.ಆರ್. ಪ್ರಕ್ರಿಯೆಗೆ ಪ್ರೇರಣೆ ನೀಡಿ ಇನ್ನೊಬ್ಬರಿಗೆ ದಾಖಲೆ ಕೇಳುತ್ತಿದ್ದಿರಿ ಎಂದರು.

ಎಲು ಜನರು ಸಮಾಗಮಗೊಂಡು ಚಟುವಟಿಕೆ ನಡೆಸಿದರೆ ಅದು ನೊಂದಣಿಯಾಗಬೇಕು, ನೊಂದಣಿ ಕಾನೂನು ಅಸ್ತಿತ್ವದಲ್ಲಿದೆ ಎಂದರು.

ನೊಂದಣಿ ಕಾಯ್ದೆ ಅನ್ವಯ 18 ವರ್ಷ ಮೇಲ್ಪಟ್ಟವರು ಮಾತ್ರ ಸದಸ್ಯರಾಗಿ ನೊಂದಣಿಯಾಗಬೇಕು, ಆದರೆ ಬಾಲಕರನ್ನು ಸಹ ಸಂಘ ಪರಿವಾರದ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ಸಂಘ ಪರವಾರ ನೊಂದಣಿ ಹಿಂದೇಟು ಹಾಕುತ್ತಿದ್ದಾರೆ, ರಾಜ್ಯದ ಖ್ಯಾತ ಲೇಖಕ ನರಕದ ಗರ್ಭಗುಡಿಯಲ್ಲಿ ಸಂಘ ಪರಿವಾರದ ಕರಾಳ ಮುಖವನ್ನು ಪರಿಚಯಿಸಿದ್ದಾರೆ, ಸಂಘ ಪರಿವಾರದಲ್ಲಿ ಒಡನಾಡಿಯಾಗಿದ್ದ ಎ.ಕೆ. ಸುಬ್ಬಯ್ಯ ಅವರು ಆರ್.ಎಸ್.ಎಸ್. ಅಂತರಂಗದ ಎಂಬ ಪುಸ್ತಕ ದಲ್ಲಿಯೂ ಸಂಘ ಪರಿವಾರದ ಕರಾಳ ಮುಖದ ಪರಿಚಯವಿದೆ ಎಂದರು.

ಸಂಘ ಪರಿವಾರಕ್ಕೆ ಪ್ರಶ್ನೆ ಮಾಡುವ ಅಧಿಕಾರ ಇಲ್ಲ ಎಂಬ ಬಿಜೆಪಿ ನಾಯಕರ ನಿಲುವು ಅತಾರ್ಕಿಕ, ಸಂಘ ಪರಿವಾರ ಚಟುವಟಿಕೆ ರಾಜ್ಯದಲ್ಲಿ ಇರದೇ ಹೋಗಿದ್ದರೆ ಅವರ ನಿಲುವು ಒಪ್ಪಿಕೊಳ್ಳಬಹುದಿತ್ತು, ಆದರೆ ರಾಜ್ಯದಲ್ಲಿ ಸಂಘ ಪರವಾರ ಚಟುವಟಿಕೆಗಳು ನಡೆಯವುದರಿಂದ ಅವರಿಗೆ ಪ್ರಶ್ನೆ ಮಾಡುವ ಸಂಪೂರ್ಣ ಅಧಿಕಾರವಿದೆ ಎಂದರು.

ಆರ್.ಎಸ್.ಎಸ್.ಮುಖ್ಯಸ್ಥ ಮೋಹನ್ ಭಾಗವತಜೀ ಅವರು ಹಿಂದೂ ಧರ್ಮ ನೊಂದಣಿಯಾಗಿಲ್ಲ ಹೀಗಾಗಿ ಆರ್.ಎಸ್.ಎಸ್. ನೊಂದಣಿ ಅವಶ್ಯಕತೆ ಇಲ್ಲಎಂದು ಅಸಂಬದ್ಧ ಹಾಗೂ ಅರಳು ಮರಳು ರೀತಿಯಲ್ಲಿ ಹೇಳಿಕೆ ನೀಡಿದ್ದಾರೆ.

ಬಂದೂಕು ತರಬೇತಿ, ಲಾಠಿ ತಿರುಗಿಸುವುದು ಯಾವ ರೀತಿಯ ದೇಶಪ್ರೇಮ?

ಅನೇಕ ಬಾಂಬ್ ಸ್ಫೋಟ ಪ್ರಕರಣದಲ್ಲಿ ಸಂಘ ಪರಿವಾರದ ಸದಸ್ಯರು ಭಾಗಿಯಾಗಿದ್ದರು, ಆದರೆ ಅನೇಕ ಕೇಸುಗಳು ಹಾಗೆಯೇ ಕಾಲಭರ್ಗದಲ್ಲಿ ಹುಗಿದುಹೋದವು. ಸಂಘ ಪರಿವಾರದವರು ಈ ರೀತಿಯ ಚಟುವಟಿಕೆಗಳಲ್ಲಿ ಭಾಗಿಯಾಗಿ ಸಿಕ್ಕರೆ ಆತ ಬುದ್ಧಿಮಾಂದ್ಯ ಎಂದು ಬಿಂಬಿಸುವ ಕೆಲಸ ನಡೆಯುತ್ತಿದೆ ಎಂದರು.

ಮಾಲೇಗಾಂವ್ ಸ್ಫೋಟದಲ್ಲಿ ಭಾಗಿಯಾದ ಆರೋಪಿಯನ್ನು ಸಂಸದೆಯನ್ನಾಗಿಸುವ ಅವಕಾಶ ಕಲ್ಪಿಸಿದ್ದು ಏಕೆ? ಎಂದರು.

ಮೋದಿ ಕೊಲೆಗಾರ ಎಂದು ಟ್ರಂಪ್ ಸಹ ಹೇಳಿದ್ದಾರೆ, ಸಂಘ ಪರಿವಾರ ಒಂದೇ ಒಂದು ಜನಪರ ಹೋರಾಟದಲ್ಲಿ ತೊಡಗಿಸಿಕೊಂಡಿದೆಯೇ? ಅದು ಸ್ವಯಂ ಉದ್ಧಾರಕ್ಕಾಗಿ ಮಾಡಿಕೊಂಡ ಸಂಘ ಎಂದರು. ಮುಖಂಡರಾದ ನಾಗರಾಜ ಲಂಬು ಮಾತನಾಡಿ, ಸಂಘ ಪರಿವಾರದಲ್ಲಿ ಜನಗಣನಮನ ಹಾಡುವುದಿಲ್ಲ, ರಾಷ್ಟ್ರ ಧ್ವಜ ಹಾರಿಸುವುದಿಲ್ಲ ಹಾಗಾದರೆ ಯಾವ ರೀತಿ ದೇಶಭಕ್ತಿ? ಈ ಸಂಘ ಪರಿವಾರ ಲಾಠಿ ಹಿಡಿದು ಭಯ ಹುಟ್ಟಿಸುವ ಕೆಲಸ ಮಾಡುತ್ತಿದೆ ಎಂದರು.

# ಗ್ರಾಮೀಣ ಮೂಲಸೌಕರ್ಯ: ಗುಣಮಟ್ಟದ ಖಾತ್ರಿಗೆ ಖಂಡ್ರೆ ಸೂಚನೆ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ಗ್ರಾಮೀಣ ಪ್ರದೇಶಗಳಲ್ಲಿ ಅಪೂರ್ಣವಾಗಿರುವ ಸಮುದಾಯ ಶೌಚಾಲಯಗಳ ಕಾಮಗಾರಿಯನ್ನು 1 ತಿಂಗಳಲ್ಲಿ ಪೂರ್ಣಗೊಳಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಕೆ.ಆರ್.ಐ.ಡಿ.ಎಲ್. ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದ್ದಾರೆ.

ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಯಮಿತದಲ್ಲಿಂದು ಪ್ರಗತಿ ಪರಿಶೀಲನೆ ನಡೆಸಿದ ಅವರು, ಶೌಚಾಲಯ ನಿರ್ಮಾಣ ಕಾಮಗಾರಿಯಲ್ಲಿ ಅನಗತ್ಯ ವಿಳಂಬಕ್ಕೆ ಅವಕಾಶ ನೀಡದಂತೆ ಸೂಚಿಸಿದರು.

ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಯಮಿತ ಕೈಗೊಳ್ಳುವ ಕಾರ್ಯದಲ್ಲಿ ಸೇವೆ, ನಿಷ್ಠೆ ಮತ್ತು ದಕ್ಷತೆಯನ್ನು ಕಾಪಾಡಿಕೊಳ್ಳಿ ಎಂದ ಅವರು, ವಿದ್ಯಾರ್ಥಿ ನಿಲಯ, ಸೇತುವೆ, ರಸ್ತೆ, ಚರಂಡಿ,



ಸಮುದಾಯ ಭವನ, ಕ್ರೀಡಾಂಗಣ, ಬಸ್ ನಿಲ್ದಾಣ ಮೊದಲಾದ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು, ದೀರ್ಘಕಾಲ ಬಾಳಿಕೆ ಬರಬೇಕು. ಜನ ಮೆಚ್ಚುಗೆಗೆ ಪಾತ್ರವಾಗಬೇಕು ಎಂದರು.

**ಅರ್ಧಕ್ಕೆ ನಿಂತ ಕಾಮಗಾರಿ ಪೂರ್ಣಗೊಳಿಸಲು ಸೂಚನೆ:** ನಿಯಮಿತ ಕೈಗೊಳ್ಳುವ ಯಾವುದೇ ಕಾಮಗಾರಿ ಅರ್ಧಕ್ಕೆ ನಿಲ್ಲುವಂತಾಗಬಾರದು, ಆ ಯೋಜನೆಗೆ ಅಗತ್ಯವಾದ ಹಣ, ಅನುಮತಿ ಎಲ್ಲವನ್ನೂ ಖಾತ್ರಿ ಪಡಿಸಿಕೊಂಡು ಕಾಮಗಾರಿ ಆರಂಭಿಸಬೇಕು ಎಂದು ತಿಳಿಸಿದ ಸಚಿವರು, ಇತರ ಇಲಾಖೆಗೆ ಸೇರಿದ ಕಾಮಗಾರಿಗಳು ಅರ್ಧಕ್ಕೆ ನಿಂತಿದ್ದರೆ ಅವರಿಗೆ ಪತ್ರ ಬರೆದು, ಹಣ ಬಿಡುಗಡೆ ಮಾಡಿಸಿ ಕಾಮಗಾರಿ ಪೂರ್ಣಗೊಳಿಸಲು ಕ್ರಮ ವಹಿಸುವಂತೆ ಸೂಚಿಸಿದರು.

ಕೆ.ಆರ್.ಐ.ಡಿ.ಎಲ್.ನಿಂದ ಕೈಗೊಳ್ಳುವ ಎಲ್ಲ ಕಾಮಗಾರಿಗಳ ಗುಣಮಟ್ಟವನ್ನು ಮೂರನೇ ವ್ಯಕ್ತಿಯಿಂದ (ಥರ್ಡ್ ಪಾರ್ಟಿ) ಮೌಲ್ಯಮಾಪನ ಮಾಡಿಸಬೇಕು, 50 ಲಕ್ಷಕ್ಕಿಂತ ಹೆಚ್ಚಿನ ಮೌಲ್ಯದ ಕಾಮಗಾರಿಯನ್ನು ಪ್ರತಿಷ್ಠಿತ ಮೂರನೇ ವ್ಯಕ್ತಿ ಸಂಸ್ಥೆಯಿಂದ ಮಾಡಿಸಬೇಕು ಎಂದು ತಿಳಿಸಿದರು.

**ಖಾಲಿ ಹುದ್ದೆಗಳ ಭರ್ತಿಗೆ ಸೂಚನೆ:** ಕೆ.ಆರ್.ಐ.ಡಿ.ಎಲ್.ನಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಹಣಕಾಸು ಇಲಾಖೆಯ ಅನುಮೋದನೆ ಪಡೆದು, ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನೇಮಕಾತಿ ಮಾಡಿಕೊಳ್ಳುವ ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಹಾಗೂ ಮೌಖಿಕ ಸಂದರ್ಶನ ಇರುವ ಹುದ್ದೆಗಳ ನೇಮಕಾತಿಯನ್ನು ಯುಪಿಎಸ್.ಸಿ.ಗೆ ವಹಿಸುವಂತೆ ಸೂಚಿಸಿದರು. ಸಭೆಯಲ್ಲಿ ಗ್ರಾಮೀಣಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ಸಮೀರ್ ಶುಕ್ಲ, ಕೆ.ಆರ್.ಐ.ಡಿ.ಎಲ್. ವ್ಯವಸ್ಥಾಪಕ ನಿರ್ದೇಶಕ ರಾಜೇಶ್ ಗೌಡ, ಮುಖ್ಯ ಎಂಜಿನಿಯರ್ ವೇಣುಗೋಪಾಲ್ ಮತ್ತಿತರರು ಪಾಲ್ಗೊಂಡಿದ್ದರು.

# ಮೈ ಹೂನ್ ಪರ್ವೇಜ್ ಖಾನ್ ಅಲ್ಬಮ್ ಹಾಡು ಬಿಡುಗಡೆ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಅಂತರರಾಷ್ಟ್ರೀಯ ಕಿಕ್ ಬಾಕ್ಸಿಂಗ್ ಕ್ರೀಡಾಪಟು ಹಾಗೂ ಕರ್ನಾಟಕ ರಾಜ್ಯ ಸ್ಪೋರ್ಟ್ ಕಿಂಗ್‌ನ ರಾಜ್ಯಾಧ್ಯಕ್ಷ ಪರ್ವೇಜ್ ಖಾನ್ ಅವರ ಜೀವನ ಮತ್ತು ಸಾಧನೆಯನ್ನು ಆಧರಿಸಿದ "ಮೈ ಹೂನ್ ಪರ್ವೇಜ್ ಖಾನ್" ಅಲ್ಬಮ್ ಹಾಡನ್ನು ಶನಿವಾರ ಬೀದರ ನಗರದ ಪತ್ರಿಕಾ ಭವನದಲ್ಲಿ ಬಿಡುಗಡೆ ಮಾಡಲಾಯಿತು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ತಂಡದ ವ್ಯವಸ್ಥಾಪಕ ನಿರ್ದೇಶಕ ಡಾ. ಮೊಹ್ಮದ್ ಇಮ್ರಾನ್ ಸಯೀದ್, ಈ ಹಾಡಿನಲ್ಲಿ ಪರ್ವೇಜ್ ಖಾನ್ ಅವರ ವ್ಯಕ್ತಿತ್ವ ಹಾಗೂ ಸಾಧನೆಗಳನ್ನು ಬಿಂಬಿಸುವುದರ ಜೊತೆಗೆ ಬೀದರ ಜಿಲ್ಲೆಯ ಐತಿಹಾಸಿಕ ತಾಣಗಳನ್ನು ಚಿತ್ರಿಸಲಾಗಿದೆ ಎಂದು ತಿಳಿಸಿದರು. ಯುವಜನತೆಗೆ ಪ್ರೇರಣೆ ನೀಡುವ ಉದ್ದೇಶದಿಂದ ಈ ಹಾಡು



ನಿರ್ಮಾಣವಾಗಿದ್ದು, ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡುವವರಿಗೆ ಇದು ಸ್ಫೂರ್ತಿದಾಯಕವಾಗಲಿದೆ ಎಂದು ಹೇಳಿದರು.

ಮಹಾರಾಷ್ಟ್ರ ಮೂಲದ ರೂಬಿನ್ ಮ್ಯೂಸಿಕ್ ಕಂಪನಿ ಈ ಹಾಡನ್ನು ನಿರ್ಮಿಸಿದ್ದು, ಜಗತ್ತಿನ 250ಕ್ಕೂ ಹೆಚ್ಚು ಆಡಿಯೊ ಪ್ಲಾಟ್‌ಫಾರ್ಮ್‌ಗಳಲ್ಲಿ ಬಿಡುಗಡೆ ಮಾಡಲಾಗಿದೆ. ಜೊತೆಗೆ 45 ಯೂಟ್ಯೂಬ್ ಮ್ಯೂಸಿಕ್ ಚಾನೆಲ್‌ಗಳು, ಗಾನಾ ಡಾಟ್ ಕಾಮ್ ಹಾಗೂ ಸಾರೆಗಮ ಸೇರಿದಂತೆ ವಿವಿಧ ಡಿಜಿಟಲ್ ವೇದಿಕೆಗಳಲ್ಲಿ ಹಾಡು ಲಭ್ಯವಾಗಲಿದೆ. ಹೈದರಾಬಾದ್‌ನ ಎ.ಆರ್. ಇಂಡಸ್ಟ್ರೀಸ್ ಎಂಟರ್‌ಟೈನ್‌ಮೆಂಟ್ ಸಂಸ್ಥೆಯ ಮೂಲಕ ಯೂಟ್ಯೂಬ್, ಫೇಸ್‌ಬುಕ್ ಹಾಗೂ ಇನ್‌ಸ್ಟಾಗ್ರಾಂನಲ್ಲಿ ಹಾಡು ಬಿಡುಗಡೆಯಾಗಿದೆ ಎಂದು ಅವರು ತಿಳಿಸಿದರು.

ಪರ್ವೇಜ್ ಖಾನ್ ಅವರ ಮುಂದಿನ ಅಲ್ಬಮ್ ಹಾಡು ಜುಲೈ 5ರಂದು ಬಿಡುಗಡೆಯಾಗಲಿದ್ದು, ಅದಕ್ಕಾಗಿ ಈಗಾಗಲೇ ಸಿದ್ಧತೆಗಳು ನಡೆಯುತ್ತಿವೆ ಎಂದು ಡಾ. ಇಮ್ರಾನ್ ಸಯೀದ್ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಹಾಡಿನ ನಾಯಕ ಪರ್ವೇಜ್ ಖಾನ್, ನಾಯಕಿ ಮುಸ್ಕಾನ್ ಮುಜಾವರ್, ಸಂಗೀತ ನಿರ್ದೇಶಕ ರೋಬಿನ್ ಮುಜಾವರ್, ನಿರ್ಮಾಪಕ ಸತೀಶ್ ಶರ್ಮಾ ನಂದಿ, ಸಾಮಾಜಿಕ ಜಾಲತಾಣ ಪ್ರಭಾವಿ ರಘುಪ್ರಿಯಾ, ಕಿಕ್ ಬಾಕ್ಸಿಂಗ್ ಕೋಚ್ ಸುವಿತ್ ಮೋರೆ, ಕರಾಟೆ ಕೋಚ್ ಸೂರ್ಯಕಾಂತ್ ಮೋರೆ, ನಟ ಅಯಾನ್ ಖಾನ್, ಸಮಾಜಸೇವಕ ನವಾಜ್ ಖಾನ್, ಕ್ರಿಯೇಟಿವ್ ಸದಸ್ಯೆ ಪೂಜಾ ಪಿಟ್ಲೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಅಪ್ಪ ಎಂದರೆ ಬೆಳಕು, ಅಪ್ಪನಿಂದಲೇ ಈ ಬದುಕು..



**ದಿನದ ವಿಶೇಷ**

● ವಿ.ಎಂ.ಎಸ್.ಗೋಪಿ
ಸಾಹಿತಿ, ಬೆಂಗಳೂರು

ಜೂನ್ 21ರಂದು ವಿಶ್ವ ಅಪ್ಪಂದಿರ ದಿನ. ಅಪ್ಪ ಐ ಲವ್ ಯೂ ಅಪ್ಪ. ಫಾದರ್ಸ್ ಡೇ ದಿನದ ಅರ್ಥ ಮತ್ತು ತಂದೆಯ ಮಹತ್ವವನ್ನು ತಿಳಿದುಕೊಳ್ಳಬೇಕು. ಅಪ್ಪ ಅಮ್ಮ ದೇವರ ಸಮಾನ. ಅಪ್ಪ ಎಂದರೆ ಬೆಳಕು. ಅಪ್ಪನಿಂದಲೇ ಈ ಬದುಕು.. ಅಪ್ಪನ ಸ್ಥಾನವನ್ನು ಯಾರಿಂದಲೂ ತುಂಬಲು ಸಾಧ್ಯವಿಲ್ಲ. ತಂದೆಯ ಸ್ಥಾನ ಮತ್ತು ಅಪ್ಪ ಅಮ್ಮನ ಪ್ರೀತಿ ಅತ್ಯಮೂಲ್ಯವಾದದ್ದು.

ನಮ್ಮನ್ನು ಕಣ್ಣಲ್ಲಿ ಕಣ್ಣಿಟ್ಟು ಸಾಕುವರು ಅಪ್ಪ. ಅಂತಹ ತಂದೆ ತಾಯಿಗೆ ನಾವು ಯಾವಗಲೂ ಗೌರವದಿಂದ ಕಾಣಬೇಕು. ಅದು ನಮ್ಮ ಕರ್ತವ್ಯ ಕೂಡ. ಅಪ್ಪ ನೀ ದೇವರು ಈ ಜಗವೆಲ್ಲಾ ನೀನೆ ಅಪ್ಪ. ಅಪ್ಪ ಎಂಬ ಎರಡಕ್ಷರ ಪವಿತ್ರವಾದ ಸಂಕೇತ. ಹೌದು ಅಪ್ಪ ಅಮ್ಮ ದೇವರ ಸ್ವರೂಪ. ನಾವು ದೇವರನ್ನು ಎಷ್ಟು ಭಯ ಭಕ್ತಿಯಿಂದ ಗೌರವದಿಂದ ಪೂಜಿಸಿ ಆರಾದಿಸುತ್ತೇವೆಯೋ ಹಾಗೇಯೇ ಅಮ್ಮ ಅಪ್ಪನ ಭಯ ಭಕ್ತಿಯಿಂದ ಗೌರವದಿಂದ ನೋಡಿಕೊಳ್ಳಬೇಕು.

ಅಪ್ಪ ಇಲ್ಲದ ಪ್ರಪಂಚವಿಲ್ಲ. ಎಲ್ಲಾ ಮಕ್ಕಳಿಗೂ



ತಂದೆ ತಾಯಿಯ ಆಶೀರ್ವಾದ ಬೇಕು ಅವರಿಂದಲೇ ನಾವು. ತಾಯಿ ಮೊದಲ ಗುರು ಮನೆಯ ಮೊದಲ ಪಾಠ ಶಾಲೆ ತನ್ನ ಮಕ್ಕಳಿಗೆ ಮೊದಲನೆಯ ಶಿಕ್ಷಕಿ ತಾಯಿ. ಮಗು ತನ್ನ ಜೀವನದಲ್ಲಿ ಹೇಳುವ ಮೊದಲ ಪದವೂ ಅಮ್ಮ ಅಪ್ಪ ಎಲ್ಲಾ ಮಕ್ಕಳ ಪಾಲಿಗೆ ಅಪ್ಪನೇ ಮೊದಲ ಹೀರೋ. ಅಪ್ಪ ಮಗುವಿನ ತೋರು ಬೆರಳು ಹಿಡಿದು ತನ್ನ ಸುತ್ತ ಮುತ್ತ ಇಡೀ ಜಗತ್ತನೇ ತೋರಿಸುತ್ತಾರೆ. ಅಪ್ಪ ಅಂದರೆ ಜಗತ್ತು ಅಪ್ಪ ಅಂದರೆ ದೇವರು ಅಪ್ಪ ಅಂದರೆ ಶಕ್ತಿ ಅಪ್ಪ ಅಂದರೆ ಆಕಾಶ ಅಪ್ಪ ಅಂದರೆ ಸ್ನೇಹಿತ ಅಪ್ಪ ಅಂದರೆ ಪಪ್ರಂಚ ಅಪ್ಪ ಅಂದರೆ ಪ್ರೀತಿ ಅಪ್ಪ ಅಂದರೆ ಬೆಳಕು ಅಪ್ಪ ಅಂದರೆ ಸಂತೋಷ ಹೀಗೆ ಎಷ್ಟು ಅರ್ಥಗಳಿವೆ. ಅಪ್ಪ ಮಕ್ಕಳನ್ನು ಬೈಯುವುದಕ್ಕೆ ಮುಖ್ಯ ಕಾರಣ ನಾವು ಮಾಡಿರೋ ತಪ್ಪನ್ನು ಮತ್ತೇ ಮಾಡಬಾರದು ಮತ್ತು ನಮಗೆ ಯಾವ ಕೆಡಕು ಆಗಬಾರದು ಅಂತ ಎಷ್ಟೇ ಬೈದ್ರೂ ಮನಸ್ಸಲಿ ಬೆಟ್ಟದಷ್ಟು ಪ್ರೀತಿ ಇರುತ್ತದೆ.

ತನಗೆ ಎಷ್ಟೇ ಕಷ್ಟ ನೋವು ಬಂದ್ರು ತನ್ನ ಮಕ್ಕಳು ನಮ್ಮ ಕುಟುಂಬ ಖುಷಿಯಾಗಿ ಸಂತೋಷವಾಗಿ ಇರಬೇಕು ಎಂದು ಬಯಸುವರು ಅಪ್ಪ. ಮಕ್ಕಳು ಕೇಳಿದ್ದನ್ನೆಲ್ಲಾ ಕೊಡಿಸೋಕ್ ಆಗದೇ ಇದ್ರೂ ಕೈಲಾಗಿದ್ದನ್ನ ಕೊಡಿಸುವರು ಅಪ್ಪ. ಬೇಡಿದಷ್ಟು ಕೊಡದೇ ಹೋದ್ರು ಸಲ್ಪವಾದರು ಕೊಡಿಸುವರು ತನ್ನಿಂದ ಸಾಧಿಸೋಡಕ್ಕಾಗದೇ ಇರೋದನ್ನ ತನ್ನ ಮಕ್ಕಳಿಂದ ಮಾಡಿಸೋಡಕ್ಕೆ ಪ್ರಯತ್ನ ಮಾಡುವರು. ಎಷ್ಟೇ ಕಷ್ಟಗಳು ನೋವುಗಳು ಬಂದರು ತನ್ನಲ್ಲಿಟ್ಟುಕೊಂಡು ಮಕ್ಕಳನ್ನು ಪ್ರೀತಿ ಮಾಡುವರು ಅಪ್ಪ.

ಅಪ್ಪ ಯಾವಗಲೂ ತನ್ನ ದುಃಖಗಳನ್ನು ಮರೆತು ಮಕ್ಕಳ ಜೀವನ ಸಂತೋಷದ ಬಗ್ಗೆ ಯೋಚಿಸುತ್ತಾರೆ. ಮಕ್ಕಳು ಸಂತೋಷವಾಗಿರುವುದು ನೋಡಿ ಅವರು ಸಂತೋಷವಾಗಿರುತ್ತಾರೆ. ತಂದೆ ತಾಯಿಯ ಋಣವನ್ನು ನಾವು ಎಂದಿಗೂ ತೀರಿಸಲು ಸಾಧ್ಯವಿಲ್ಲ ಆದ್ದರಿಂದ ನಾವು ನಮ್ಮ ತಂದೆ ತಾಯಿಗೆ ಸಾಧ್ಯವಾದಷ್ಟು ಸೇವೆ ಸಲ್ಲಿಸಬೇಕು ನಮ್ಮ ವ್ಯಕ್ತಿತ್ವವನ್ನು ಹೆಚ್ಚಿಸಲು ಅವರು ತಮ್ಮ ಜೀವನವನ್ನು ಮುಡಿಪಾಗಿಟ್ಟ ಜೀವನದ ಪ್ರತಿಯೊಂದು ಸಂತೋಷವನ್ನು ನಾವು ತಾಯಿ ತಂದೆಗೇ ನೀಡಬೇಕು. ಅಪ್ಪ ಐ ಲವ್ ಯೂ...!

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200215

PRGI NO. 120927
(RNINO:KARKAN/2011/48371)